ಸಂಪುಟ: 04 ಸಂಚಿಕೆ: 39 ಪುಟಗಳು: 08 ಮಂಗಳವಾರ 23 ಏಪ್ರಿಲ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಯಾವುದೇ ಫಲಾಪೇಕ್ಷೆಯಿಲ್ಲದೆ ಎಲ್ಲರಿಗೂ ಒಳ್ಳೆಯದನ್ನ ಬಯಸಿ, ಸಾಧ್ಯವಾದಷ್ಟು ಒಳ್ಳೆಯದನ್ನ ಮಾಡಿ. ಏಕೆಂದರೆ ಹೂ ಮಾರುವವರ ಕೈಯಲ್ಲಿ ಯಾವಾಗಲೂ ಹೂವಿನ ಸುವಾಸನೆ ಇರುತ್ತದೆ.


# ಬರ: ಹೂಹಾರ ಸರ್ಕಾರಕ್ಕೆ ಜೈಕಾರ

- ಬರಪರಿಹಾರ ಬಿಡುಗಡೆಗೆ ಕೇಂದ್ರ ಅಸ್ತು
- ವಿಚಾರಣೆ ಏ.29ಕ್ಕೆ ಮುಂದೂಡಿಕೆ
- ವಾರದೊಳಗೆ ಬರ ಪರಿಹಾರ ಬಿಡುಗಡೆಗೆ ಕೇಂದ್ರ ಒಪ್ಪಿಗೆ

**ರಾಜ್ಯಕ್ಕೆ ಬರ ಪರಿಹಾರ ನೀಡಲು ಕೇಂದ್ರ ಸರ್ಕಾರ ವಿಳಂಬ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದು, ಇದರ ಬೆನ್ನಲ್ಲೇ ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆ ಮಾಡಲು ಒಪ್ಪಿದೆ. ರಾಜ್ಯ ಸರ್ಕಾರದ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಕರ್ನಾಟಕಕ್ಕೆ ಬರ ಪರಿಹಾರ ನಿಧಿ ಬಂದಿಲ್ಲ, ತಕ್ಷಣ ಬಿಡುಗಡೆ ಮಾಡುವಂತೆ ಕೇಂದ್ರಕ್ಕೆ ನಿರ್ದೇಶನ ನೀಡಿದೆ. ಈ ವೇಳೆ ಕೇಂದ್ರ ಸರ್ಕಾರದ ಪರ ಅಟಾರ್ನಿ ಜನರಲ್ ವೆಂಕಟರಮಣಿ, ಬರ ಪರಿಹಾರ ಸಂಬಂಧ ಚುನಾವಣಾ ಆಯೋಗದ ಅನುಮತಿ ಕೇಳಿದ್ದೇವೆ. ಕೆಲವೇ ದಿನಗಳಲ್ಲಿ ಸಮಸ್ಯೆ ಬಗೆಹರಿಯಬಹುದು. ಸೋಮವಾರದ ಒಳಗೆ ಬರ ಪರಿಹಾರ ಬಿಡುಗಡೆ ಮಾಡುತ್ತೇವೆ ಎಂದು ಹೇಳಿದರು. ಇದೇ ವೇಳೆ ಹಿರಿಯ ವಕೀಲರ ಅಲಭ್ಯತೆ ಹಿನ್ನೆಲೆಯಲ್ಲಿ ವಿಚಾರಣೆಯನ್ನು ಮುಂದೂಡುವಂತೆ ರಾಜ್ಯ ಸರ್ಕಾರದ ಪರ ವಕೀಲರು ಮನವಿ ಮಾಡಿದರು. ಹಿನ್ನೆಲೆ ಸುಪ್ರೀಂ ಕೋರ್ಟ್, ಅರ್ಜಿ ವಿಚಾರಣೆಯನ್ನು ಏಪ್ರಿಲ್ 29ಕ್ಕೆ ಮುಂದೂಡಿದೆ**

ರಾಜ್ಯದ ರೈತರಿಗೆ ಒಂದು ವಾರದೊಳಗೆ ಬರ ಪರಿಹಾರ ಬಿಡುಗಡೆಗೆ ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್ ನಲ್ಲಿ ಒಪ್ಪಿಕೊಂಡಿದೆ. ಬರ ಪರಿಹಾರ ನಿಧಿ ಬಂದಿಲ್ಲ. ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿ ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ದ್ವಿಸದಸ್ಯ ಪೀಠ ವಿಚಾರಣೆ ನಡೆಸಿ, ಏಪ್ರಿಲ್ 29ರೊಳಗೆ ಒಳಗೆ ಬರ ಪರಿಹಾರ ಬಿಡುಗಡೆ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರದ ಪರ ಅಟಾರ್ನಿ ಜನರಲ್ ವೆಂಕಟರಮಣಿ ನ್ಯಾಯ ಪೀಠಕ್ಕೆ ಹೇಳಿದರು

– ಸಿದ್ದರಾಮಯ್ಯ, ಮುಖ್ಯಮಂತ್ರಿ



ಕರ್ನಾಟಕ ರಾಜ್ಯಕ್ಕೆ ಬರ ನಿರ್ವಹಣೆ ಅನುದಾನ ಪಾವತಿ ವಿಚಾರವಾಗಿ ಒಂದು ವಾರದೊಳಗೆ ನಿರ್ಧಾರ ತೆಗೆದುಕೊಳ್ಳುತ್ತೇವೆ. ಇದಕ್ಕೆ ಸಂಬಂಧಪಟ್ಟಂತಹ ಪೂರ್ವಾನುಮತಿಗಳನ್ನು ಚುನಾವಣಾ ಆಯೋಗಗಳಿಂದ ಪಡೆಯಲಾಗಿದೆ. ಕೇಂದ್ರ ಸರ್ಕಾರ ಸುಪ್ರೀಂಗೆ ಮಾಣಪತ್ರ ಸಲ್ಲಿಸಿದ್ದು, ರಾಜ್ಯಸರ್ಕಾರದ ಕಾನೂನು ಸಮರಕ್ಕೆ ಜಯ ಸಿಕ್ಕಿದೆ

– ಕೃಷ್ಣಬೈರೇಗೌಡ, ಕಂದಾಯ ಸಚಿವ

• ಉದಯವಾಹಿನಿ, ನವದೆಹಲಿ

ಕೇಂದ್ರ ಚುನಾವಣಾ ಆಯೋಗದಿಂದ ಅನುಮತಿ ಪಡೆದು ಕರ್ನಾಟಕದಲ್ಲಿ ಬರ ಪರಿಹಾರ ಕಾಮಗಾರಿಗಳಿಗಾಗಿ ಏ.29ರೊಳಗೆ ಹಣ ಬಿಡುಗಡೆ ಮಾಡುವುದಾಗಿ ಕೇಂದ್ರ ಸರ್ಕಾರ ಸುಪ್ರೀಂಕೋರ್ಟ್‌ಗೆ ಸೋಮವಾರ ಮಾಹಿತಿ ನೀಡಿದೆ. ಕೇಂದ್ರದ ವಿರುದ್ಧದ ಕಾನೂನು ಸಮರದಲ್ಲಿ ರಾಜ್ಯ ಸರ್ಕಾರಕ್ಕೆ ಜಯ ಸಿಕ್ಕಂತಾಗಿದೆ. ಮುಂದಿನ ವಿಚಾರಣೆ ಏ.29ಕ್ಕೆ ಮುಂದೂಡಿದೆ. ರಾಜ್ಯದಲ್ಲಿ ಬರ ಪರಿಸ್ಥಿತಿ ತಲೆದೋರಿದ್ದರೂ ಕೇಂದ್ರ ಸರ್ಕಾರದಿಂದ ಬರ ಪರಿಹಾರ ಬಂದಿಲ್ಲ. ಈ ಕುರಿತು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕಾಂಗ್ರೆಸ್ ಸರ್ಕಾರ ಸುಪ್ರೀಂಕೋರ್ಟ್ ಅರ್ಜಿ ಸಲ್ಲಿಸಿತ್ತು.


ಈ ಅರ್ಜಿಯ ವಿಚಾರಣೆ ಮುಂದುವರಿಸಿದ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರನ್ನೊಳಗೊಂಡ ದ್ವಿಸದಸ್ಯ ಪೀಠದಲ್ಲಿ ನಡೆದ ವಿಚಾರಣೆ ವೇಳೆ ಕೇಂದ್ರ ಸರ್ಕಾರದ ಪರ ಅಟಾರ್ನಿ ಜನರಲ್ ವೆಂಕಟರಮಣಿ ವಾದ ಮಂಡಿಸಿದರು. ಬರ ಪರಿಹಾರ ಅನುದಾನ ಬಿಡುಗಡೆ ಮಾಡುವ ಸಂಬಂಧ ಚುನಾವಣೆ ಆಯೋಗದ ಅನುಮತಿ ಕೇಳಿದ್ದೇವೆ. ಕೆಲವೇ ದಿನಗಳಲ್ಲಿ ಸಮಸ್ಯೆ ಬಗೆಹರಿಯಲಿದೆ. ವಿಚಾರಣೆ ಸಂದರ್ಭದಲ್ಲಿ ಹಿರಿಯ ವಕೀಲರ ಅಲಭ್ಯತೆ ಹಿನ್ನೆಲೆಯಲ್ಲಿ ವಿಚಾರಣೆ ಮುಂದೂಡುವಂತೆ ರಾಜ್ಯ ಮನವಿ ಮಾಡಿದರು. ಈ ಮನವಿ ಪುರಸ್ಕರಿಸಿದ ದ್ವಿಸದಸ್ಯ ನ್ಯಾಯ ಪೀಠ ವಿಚಾರಣೆ ಏ.29ಕ್ಕೆ ಮೂಂದೂಡಿತು. ರಾಜ್ಯದ ಬಹುತೇಕ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ತಲೆದೋರಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಂದಾಯ ಸಚಿವ ಕೃಷ್ಣ ಭೈರೇಗೌಡ 2023 ಡಿಸೆಂಬರ್ ತಿಂಗಳಲ್ಲಿ ಪ್ರಧಾನಿ ಮೋದಿಯನ್ನು ಭೇಟಿ ಮಾಡಿ ಬರ ಪರಿಹಾರ ಬಿಡುಗಡೆ ಮಾಡುವಂತೆ ಮನವಿ ಸಲ್ಲಿಸಿದರು. ರಾಜ್ಯದ 236 ತಾಲ್ಲೂಕುಗಳ ಪೈಕಿ 223 ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದೆ. ಅದರಲ್ಲೂ 196 ತಾಲ್ಲೂಕುಗಳಲ್ಲಿ ಬರದ ತೀವ್ರತೆ ಬಿಗಾಡಯಿಸಿದೆ. ಈ ಹಿನ್ನೆಲೆ 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಮತ್ತು ತೋಟಗಾರಿಕಾ ಬೆಳೆಗಳು ನಾಶವಾಗಿವೆ. ಸಣ್ಣ, ಅತಿ ಸಣ್ಣ ರೈತರು ಸಂಕಷ್ಟಕ್ಕೆ ಗುರಿಯಾಗಿದ್ದಾರೆ.

**ಕನ್ನಡಿಗರ ಸುದೀರ್ಘ ಹೋರಾಟ ಯಶಸ್ವಿ**

ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಮನವರಿಕೆ ಮಾಡಿಕೊಟ್ಟಿತ್ತು. ಬರ ಪರಿಹಾರ ಕಾಮಗಾರಿ ಕೈಗೊಳ್ಳಲು 18,127.44 ಕೋಟಿ ರೂ. ಪರಿಹಾರ ಬಿಡುಗಡೆ ಮಾಡುವಂತೆ ರಾಜ್ಯ ಸರ್ಕಾರ ಮನವಿ ಮಾಡಿತ್ತು. ಈ ಅನುದಾನದಲ್ಲಿ 4,663 ಕೋಟಿ ರೂ. ಇನ್ ಪುಟ್ ಸಬ್ಸಿಡಿ 12,577 ಕೋಟಿ ರೂ. ತುರ್ತು ಪರಿಹಾರ ನೀಡಬೇಕು. ಕುಡಿಯುವ ನೀರಿಗಾಗಿ 566 ಕೋಟಿ ರೂ. ಜಾನುವಾರುಗಳ ಸಂರಕ್ಷಣೆಗಾಗಿ 363 ಕೋಟಿ ರೂ. ಒದಗಿಸಬೇಕೆಂದು ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಮಾಡಿತ್ತು. ಆದರೆ 3 ತಿಂಗಳಾದರೂ ಕೇಂದ್ರದಿಂದ ಹಣ ಬಿಡುಗಡೆ ಮಾಡಿದ ಹಿನ್ನೆಲೆ ಕೇಂದ್ರ ಸರ್ಕಾರದ ತಾರತಮ್ಯ ಖಂಡಿಸಿ, ದೆಹಲಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿತು. ಕೇಂದ್ರ ಸರ್ಕಾರ ಬರ ಪರಿಹಾರ, ಕಾಮಗಾರಿಗಾಗಿ ಅನುದಾನ ಬಿಡುಗಡೆ ಮಾಡಲಿಲ್ಲ. ಕೇಂದ್ರ ಸರ್ಕಾರದ ಧೋರಣೆ ಖಂಡಿಸಿ ರಾಜ್ಯ ಸರ್ಕಾರ ಸುಪ್ರೀಂಕೋರ್ಟಿಗೆ ಮನವಿ ಸಲ್ಲಿಸಿತು.

## ಬರ ನಿರ್ವಹಣೆ ಸಮರಕ್ಕೆ ಜಯ

ರಾಜ್ಯದಲ್ಲಿ 223ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರಪರಿಸ್ಥಿತಿ ಇದೆ. ಪರಿಹಾರ ನೀಡುವಂತೆ ಕಳೆದ ಸೆ.ನಲ್ಲಿ ರಾಜ್ಯ ಸರ್ಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿ 17,400 ಕೋಟಿ ರೂ.ಗಳ ಆರ್ಥಿಕ ನೆರವಿಗೆ ಮನವಿ ಮಾಡಿತ್ತು. ಕಂದಾಯ ಸಚಿವ ಕೃಷ್ಣಭೈರೇಗೌಡ, ಕೃಷಿ ಸಚಿವ ಚೆಲುವರಾಯಸ್ವಾಮಿ, ಗ್ರಾ.ಪಂ.ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹಲವು ಬಾರಿ ದೆಹಲಿಗೆ ತೆರಳಿ ಸಂಬಂಧಪಟ್ಟ ಅಧಿಕಾರಿಗಳು, ಸಚಿವರುಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು. ರಾಜ್ಯಕ್ಕೆ ಯಾವ ಆರ್ಥಿಕ ನೆರವೂ ದೊರೆಯಲಿಲ್ಲ. ವಿಚಾರಣೆ ನಡೆಸಿದ ನ್ಯಾಯಾಲಯದ ಎದುರು ಕೇಂದ್ರ ಸರ್ಕಾರ ಹೇಳಿಕೆ ನೀಡಿದ್ದು, ಒಂದು ವಾರದೊಳಗಾಗಿ ಬರ ನಿರ್ವಹಣೆಯ ಅನುದಾನದ ಬಗ್ಗೆ ತೀರ್ಮಾನ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದೆ. ಈ ಬಗ್ಗೆ ಮಾಹಿತಿ ನೀಡಿರುವ ಕಂದಾಯ ಸಚಿವರು, ದೇಶದ ಇತಿಹಾಸದಲ್ಲೇ ಇಂತಹ ಸಂದರ್ಭಗಳು ಒದಗಿಬಂದಿರಲಿಲ್ಲ. ನಿಯಮಾನುಸಾರ ರಾಜ್ಯದ ಜನರಿಗೆ ದೊರೆಯಬೇಕಾಗಿದ್ದ ಪರಿಹಾರಕ್ಕಾಗಿ ನ್ಯಾಯಾಲಯದ ಮೆಟ್ಟಿಲು ಹತ್ತುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಈಗ ಪ್ರಕರಣ ಒಂದು ಹಂತಕ್ಕೆ ಬಂದಿದೆ. ಕೇಂದ್ರ ಸರ್ಕಾರ ಒತ್ತಡಕ್ಕೆ ಮಣಿದು ತನ್ನ ಅಭಿಪ್ರಾಯ ತಿಳಿಸಿದೆ. ವಿಚಾರಣೆ ನಡೆಸಿದ ಸುಪ್ರೀಂಗೆ ಧನ್ಯವಾದ ಎಂದಿದ್ದಾರೆ.



## ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದ ಮನವಿ ಏನು?

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಂದಾಯ ಸಚಿವ ಕೃಷ್ಣಭೈರೇಗೌಡ 2023ರ ಡಿಸೆಂಬರ್‌ನಲ್ಲಿ ಪ್ರಧಾನಿ ಮೋದಿಯವರನ್ನು ಭೇಟಿ ಮಾಡಿ, ರಾಜ್ಯದಲ್ಲಿ 236 ರಲ್ಲಿ 223 ತಾಲ್ಲೂಕುಗಳು ಬರಪೀಡಿತವಾಗಿದ್ದು, ಅದರಲ್ಲಿ 196 ತಾಲ್ಲೂಕುಗಳಲ್ಲಿ ಬರದ ತೀವ್ರತೆ ಹೆಚ್ಚಾಗಿದೆ. ಇದರಿಂದಾಗಿ 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಮತ್ತು ತೋಟಗಾರಿಕಾ ಬೆಳೆಗಳು ನಷ್ಟ ಆಗಿದೆ. ಇದರಿಂದ ಹೆಚ್ಚಿನ ಸಂಖ್ಯೆಯ ಸಣ್ಣ ಮತ್ತು ಅತಿ ಸಣ್ಣ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ ಎಂದು ವಿವರಿಸಿದ್ದರು. ಶೀಘ್ರವೇ 18,177.44 ಕೋಟಿ ರೂ. ಪರಿಹಾರ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದರು. ಇದರಲ್ಲಿ 4663 ಕೋಟಿ ರೂ. ಇನ್‌ಪುಟ್ ಸಬ್ಸಿಡಿ, 12,577 ಕೋಟಿ ರೂ. ತುರ್ತು ಪರಿಹಾರ ನೀಡುವಂತೆ ಕೋರಿದ್ದರು. 566 ಕೋಟಿ ರೂ. ಕುಡಿಯುವ ನೀರಿಗಾಗಿ ಹಾಗೂ 363 ಕೋಟಿ ರೂ. ಜಾನುವಾರುಗಳ ಸಂರಕ್ಷಣೆಗಾಗಿ ಒದಗಿಸುವಂತೆ ಮನವಿ ಮಾಡಿದ್ದರು. ಜೊತೆಗೆ ಎನ್.ಡಿ.ಆರ್.ಎಫ್. ನಿಂದ 4663 ಕೋಟಿ ರೂ. ಇನ್‌ಪುಟ್ ಸಬ್ಸಿಡಿ ಒದಗಿಸುವಂತೆ ಮನವಿ ಮಾಡಿದ್ದರು. ರೈತರಿಗೆ ಇನ್‌ಪುಟ್ ಸಬ್ಸಿಡಿ ನೀಡಲು 2015-16 ರ ಕೃಷಿ ಗಣತಿಯನ್ನು ಪರಿಗಣಿಸಲಾಗುತ್ತಿದ್ದು, ಇದು 8 ವರ್ಷ ಹಳೆಯ ಮಾಹಿತಿಯಾಗಿದೆ.





## ಕೈನ ಜಾಹೀರಾತು ಚೊಂಬಿನಲ್ಲಿ ಹಿಂದೂಗಳ ರಕ್ತ ತುಂಬಿದೆ

• ಉದಯವಾಹಿನಿ, ತುಮಕೂರು

ಕಾಂಗ್ರೆಸ್ ನೀಡಿರುವ ಜಾಹೀರಾತಿನ ಚೊಂಬಿನಲ್ಲಿ ಹಿಂದೂಗಳ ರಕ್ತ ತುಂಬಿಕೊಂಡಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಹಿಂದೂಗಳ ರಕ್ತಕ್ಕೆ ಬೆಲೆ ಇಲ್ಲವಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಕಿಡಿಕಾರಿದರು. ನಗರದಲ್ಲಿ ಸೋಮವಾರ ಹುಬ್ಬಳ್ಳಿ ವಿದ್ಯಾರ್ಥಿನಿ ನೇಹಾ ಕೊಲೆ ಖಂಡಿಸಿ ಬಿಜೆಪಿ ಹಮ್ಮಿಕೊಂಡಿದ್ದ ಪ್ರತಿಭಟನಾ ಸಭೆಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ತಾಲೀಬಾನ್ ಸರ್ಕಾರ ಆಡಳಿತ ನಡೆಸುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಜಾಹೀರಾತಿನ ಚೊಂಬಿನ ಪೂರ್ತಿ ರಕ್ತ ತುಂಬಿದೆ. ಚೊಂಬಿನಿಂದ ಹಿಂದೂಗಳ ರಕ್ತ ತುಂಬಿ ಚೆಲ್ಲುತ್ತಿರುವುದು ಅದರ ಪ್ರತೀಕವಾಗಿದೆ.

ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಬಂದ್ರೆ ಡೇಂಜರ್ ಎಂದು ಬಿಜೆಪಿ ಯಿಂದಲೂ ಜಾಹೀರಾತು ನೀಡಲಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲ ಕೊಲೆ, ಸುಲಿಗೆ ಹೆಚ್ಚಾಗಿವೆ. ಗೂಂಡಾ ರಾಜ್ಯ ಮಾಡಲು ಹೊರಟಿದೆ. ಮುಸ್ಲಿಂ ಭಯೋತ್ಪಾದಕರು ಏನು ಮಾಡಿದರೂ ರಕ್ಷಣೆ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಜೈ ಶ್ರೀರಾಮ್ ಘೋಷಣೆ ಕೂಗುವುದು ಸಹ ಅಪರಾಧವಾಗಿದೆ ಎಂದು ಟೀಕಿಸಿದರು.

## ಅವನ ತಲೆತಿರುಕ ಮಾತಿಗೆ ಕವಡೆ ಕಾಸಿನ ಕಿಮ್ಮತ್ತಿಲ್ಲ: ಬಿಎಸ್‌ವೈ

• ಉದಯವಾಹಿನಿ, ಬೆಂಗಳೂರು

ಬಿಜೆಪಿಯವರು ಮುಸ್ಲಿಂರಿಗೆ ಚಿತ್ರ ಹಿಂಸೆ ಕೊಡುತ್ತಿದ್ದಾರೆ ಎಂಬ ಡಿಸಿಎಂ ಡಿ ಕೆ ಶಿವಕುಮಾರ್ ಮಾತಿಗೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಏಕವಚನದಲ್ಲೇ ಚಾಟಿ ಬೀಸಿದ್ದಾರೆ. ಹಾಸನದಲ್ಲಿ ಮಾತನಾಡಿದ ಅವರು, ಅವನ ತಲೆ ತಿರುಕ ಮಾತಿಗೆ ಕವಡೆ ಕಾಸಿನ ಕಿಮ್ಮತ್ತಿಲ್ಲ, ಬಿಜೆಪಿ ಎಂದಿಗೂ ಈ ದೇಶದಲ್ಲಿ ಹಿಂದೂ , ಮುಸ್ಲಿಂ, ಕ್ರಿಸ್ಚಿಯನ್ ಸಮುದಾಯದವರು ಒಂದೇ ತಾಯಿಯ ಮಕ್ಕಳಂತೆ ಬಾಳಬೇಕು ಎಂದು ಹೇಳುವ ಪಕ್ಷ .

ಇಂತಹ ಕ್ಷುಲ್ಲಕ ಹೇಳಿಕೆ ಕೊಟ್ಟು ಮುಸ್ಲಿಂಮರ ಮನವೊಲಿಸುವ ಭ್ರಮೆಯಲ್ಲಿದ್ದಾರೆ . ಆದರೆ ಈ ಬಾರಿ ದೊಡ್ಡ ಪ್ರಮಾಣದಲ್ಲಿ ಮುಸ್ಲಿಂ ಬಂಧುಗಳ ಕೂಡ ಎನ್‌ಡಿಎಗೆ ಮತ ಹಾಕಲಿದ್ದಾರೆ' ಎಂದು ಬಿಎಸ್‌ವೈ ಹೇಳಿದರು. ಇನ್ನು ಚುನಾವಣಾ ಪ್ರಚಾರದ ಬಗ್ಗೆ ಮಾತನಾಡಿದ ಬಿಎಸ್‌ವೈ ಹೆಚ್.ಡಿ. ದೇವೆಗೌಡರ ಅವರ ಶ್ರಮವನ್ನು ಶ್ಲಾಘಿಸಿದ್ದಾರೆ. ದೇವೆಗೌಡರು ಬಿಜೆಪಿಯವರ ಜೊತೆ ಒಟ್ಟಾಗಿ ಓಡಾಡುತ್ತಿರುವುದರಿಂದ ನಮ್ಮ ಬಲ ಹೆಚ್ಚಿದೆ, ಎಲ್ಲರ ಪರಿಶ್ರಮದಿಂದ ನಮ್ಮ ಅಭ್ಯರ್ಥಿಗಳು ಭಾರಿ ಅಂತರದಲ್ಲಿ ಗೆಲ್ಲುತ್ತಾರೆ, ಎಂದು ಬಿಎಸ್‌ವೈ ಹೇಳಿದರು.

## ಡಿಕೆಶಿ ಹಿಂದೂಗಳಿಗೆ ಹುಟ್ಟಿಲ್ಲ

• ಉದಯವಾಹಿನಿ, ಕಲಬುರಗಿ

ಡಿಸಿಎಂ ಡಿಕೆ ಶಿವಕುಮಾರ್ ಹಿಂದೂಗಳಿಗೆ ಹುಟ್ಟಿಲ್ಲವೆಂದು ಆವಾಗ್ಲೆ ಡಿಕ್ಲೇರ್ ಮಾಡಿಕೊಂಡಿದ್ದಾರೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಸ್ಲಿಮರು ತಮ್ಮ ಬ್ರದರ್ಸ್ ಎಂದು ಹೇಳಿಕೊಂಡಿದ್ದಾರೆ. ಅವರಿಗೆ ಹಿಂದೂ ಮಗಳ ಕೊಲೆಯಾದರೆ ಈ ರೀತಿ ಹೇಳಿಕೆ ನೀಡುತ್ತಿದ್ದಾರೆ. ಅಂತಹ ವ್ಯಕ್ತಿಗೆ ಯಾವುದೇ ಗೌರವವಿಲ್ಲ ಎಂದರು. ರಾಮನಗರದಲ್ಲಿ ಮತಾಂಧ ಮುಸ್ಲಿಮನೊಬ್ಬ ರಾಮಮಂದಿರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದಾಗ ಬಾಯಿಡ್ಡಲಿಲ್ಲ ಎಂದು ಕಿಡಿಕಾರಿದರು.

## ಚೊಂಬು ಜಾಹೀರಾತಿನಿಂದ ಬಿಜೆಪಿಗೆ ಎಚ್ಚರವಾಯ್ತಲ್ಲ

• ಉದಯವಾಹಿನಿ, ಬೆಂಗಳೂರು

ನಮ್ಮ ಖಾಲಿ ಚೊಂಬು ಜಾಹೀರಾತಿನಿಂದ ಪ್ರತಿಪಕ್ಷಗಳ ನಾಯಕರಿಗೆ ಎಚ್ಚರವಾಯ್ತಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್, ನಮ್ಮ ಜಾಹೀರಾತಿಗೆ ಈಗ ಬಿಜೆಪಿಯವರು ಜಾಹೀರಾತು ನೀಡಿದ್ದು, ನಮ್ಮ ಜನರಿಗೆ ಯಾವುದು ಸರಿ, ಯಾವುದು ತಪ್ಪು ಎಂದು ಯೋಚನೆ ಮಾಡುವ ಶಕ್ತಿ, ಪ್ರಜ್ಞೆ ಎರಡೂ ಇದೆ ಎಂದು ಹೇಳಿದರು. ಕರ್ನಾಟಕದ ಜನರಿಗೆ ಬಿಜೆಪಿ ಬಹಳ ಅನ್ಯಾಯ ಮಾಡಿದೆ ಎಂದು ಈ ಹಿಂದೆ ದೇವೇಗೌಡರು, ಕುಮಾರಸ್ವಾಮಿ ಇಬ್ಬರೂ ಭಾಷಣ ಮಾಡಿದ್ದರು. 15 ಲಕ್ಷ ಹಣ ಎಷ್ಟು ಜನರ ಖಾತೆಗೆ ಹೋಗಿದೆ? ಎಷ್ಟು ಉದ್ಯೋಗ ಸಿಕ್ಕಿದೆ ಎಂದು ನಾನು ಸಿದ್ದರಾಮಯ್ಯ ಅವರು ಹಾಗೂ ಎಲ್ಲಾ ನಾಯಕರು ಪ್ರಶ್ನೆ ಮಾಡುತ್ತಿದ್ದಾರೆ. ಇದಕ್ಕೆ ಮೊದಲು ಉತ್ತರಿಸಲಿ ಎಂದರು. ಬಿಜೆಪಿಯವರ ಚಿಪ್ಪು ಅಭಿಯಾನ ವಿಚಾರವಾಗಿ, ನಾವು ಚಿಪ್ಪು ಕೊಟ್ಟಿಲ್ಲ. ಕನ್ನಡದ ಬಾವುಟ ಹಿಡಿದು ಹೋರಾಟ ಮಾಡುವವರು ನಾವು, ಕನ್ನಡಿಗರ ಪರವಾಗಿ ನಮ್ಮ ತೆರಿಗೆ, ನಮ್ಮ ಹಕ್ಕು ಹೋರಾಟ ಮಾಡಿದ್ದೇವೆ ಎಂದು ಹೇಳಿದರು.

# ಸಿಎಂ, ರಮೇಶ್‌ಕುಮಾರ್ ಮೋದಿ ಬಗ್ಗೆ ನೀಡಿದ ಹೇಳಿಕೆಗೆ ಖಂಡನೆ

## ರಮೇಶ್ ಕುಮಾರ್ ಅವರ ಯೋಗ್ಯತೆ ಅವರ ಕ್ಷೇತ್ರದ ಜನತೆಗೆ ಗೊತ್ತಿದೆ, ಆಚಾರವಿಲ್ಲದ ನಾಲಿಗೆ ಎಂಬಂತೆ ಅವರ ಸಂಸ್ಕೃತಿಯನ್ನು ತೋರಿಸುತ್ತದೆ

• ಉದಯವಾಹಿನಿ, ಬೆಂಗಳೂರು

ಮಾಜಿ ಸ್ಪೀಕರ್ ರಮೇಶ್‌ಕುಮಾರ್ ಅವರ ಹೇಳಿಕೆ ಖಂಡನೀಯ. ಬಿಜೆಪಿ ಇದನ್ನು ಖಂಡಿಸುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು. ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಮೇಶ್ ಕುಮಾರ್ ಅವರ ಯೋಗ್ಯತೆ ಅವರ ಕ್ಷೇತ್ರದ ಜನತೆಗೆ ಗೊತ್ತಿದೆ. ಹಾಗಾಗಿಯೇ ಅವರನ್ನು ಜನರು ಸೋಲಿಸಿದ್ದಾರೆ. ಆಚಾರವಿಲ್ಲದ ನಾಲಿಗೆ ಎಂಬಂತೆ ಅವರ ನಾಲಿಗೆ ಅವರ ಸಂಸ್ಕೃತಿಯನ್ನು ತೋರಿಸುತ್ತದೆ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳ ಸ್ಥಾನದಲ್ಲಿರುವ ಸಿದ್ದರಾ ಮಯ್ಯನವರು ಆರೂವರೆ ಕೋಟಿ ಜನರಿಗೆ ಮುಖ್ಯಮಂತ್ರಿ ಎಂಬುದನ್ನು ಮರೆತು ಈ ದೇಶದ ಗೌರವಾನ್ವಿತ ಪ್ರಧಾನಮಂತ್ರಿಗಳ ಕುರಿತು ಅವರು ನೀಡಿದ ಒಬ್ಬ ನಾ ಲಾಯಕ್ ಪ್ರಧಾನಮಂತ್ರಿ, ಎಂಬ ಉದ್ಧಟತನದ ಹೇಳಿ ಕೆ ನೀಡಿದ್ದು ಖಂಡನೀಯ ಎಂದರು.

ರಾಜ್ಯದಲ್ಲಿ ಕಾನೂನು- ಸುವ್ಯವಸ್ಥೆ ಸಂಪೂರ್ಣವಾಗಿ ಹಾಳಾಗಿದೆ. ಈ ದರಿದ್ರ ಕಾಂಗ್ರೆಸ್ ಸರಕಾರಕ್ಕೆ ಗ್ಯಾರಂಟಿ ಬಿಡಿ; ನಾಡಿನ ಮಹಿಳೆಯರಿಗೆ ರಕ್ಷಣೆ ಕೊಡಲಾಗದೆ ನಾಲಾಯಕ್‌ತನ ಪ್ರದರ್ಶನ ಮಾಡುತ್ತಿದೆ ಎಂದು ಆಕ್ಷೇಪಿಸಿದರು.

ಕೊಲೆಗಡುಕರನ್ನು ಒದ್ದು ಒಳಗೆ ಹಾಕುವ ಬದಲಾಗಿ ಅವರಿಗೆ ರಕ್ಷಣೆ ಕೊಡುವ ಕೆಲಸವನ್ನು ರಾಜ್ಯದ ಮುಖ್ಯಮಂತ್ರಿಗಳು ಮಾಡುತ್ತಿದ್ದಾರೆ. ಇದು ಅಕ್ಷಮ್ಯ ಅಪರಾಧ ಎಂದು ತಿಳಿಸಿದರು.

ರಾಜ್ಯದಲ್ಲಿ ಮಿತಿಮೀರುತ್ತಿರುವ ಮಹಿಳೆಯರ ಮೇಲಿನ ದೌರ್ಜನ್ಯಗಳು, ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ್ ಹತ್ಯೆ ಹಾಗೂ ಹದಗೆಟ್ಟ ಕಾನೂನು ಸುವ್ಯವಸ್ಥೆ ಖಂಡಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಕರೆಯನ್ವಯ ಬಿಜೆಪಿ ವತಿಯಿಮದ

ರಾಜ್ಯದೆಲ್ಲೆಡೆ ಸೋಮವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.



ಪ್ರತಿಭಟನಾಕಾರರು ಹಿಂದೂ ಹೆಣ್ಣು ಮಕ್ಕಳಿಗೆ ರಕ್ಷಣೆ ನೀಡದ ತುಘಲಕ್ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ ಕೂಗಿದರು. ಓಲೈಕೆ ರಾಜಕಾರಣಕ್ಕಾಗಿ ಸಮಾಜಘಾತುಕ ಶಕ್ತಿಗಳನ್ನು ಬೆಂಬಲಿಸುವ ಹಾಗೂ ಹಿಂದೂಗಳ ರಕ್ಷಣೆಗೆ ಕಿಂಚಿತ್ತೂ ಕಾಳಜಿ ವಹಿಸದ ಕಾಂಗ್ರೆಸ್ ಪಕ್ಷಕ್ಕೆ ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕೆಂಬ ಕರೆ ನೀಡಲಾಯಿತು.

ಇಂಥ ನಾಲಾಯಕ್ ಸರಕಾರಕ್ಕೆ ರಾಜ್ಯದ ಜನತೆ ಮುಂದಿನ ದಿನಗಳಲ್ಲಿ ಸರಿಯಾದ ಉತ್ತರ ಕೊಡುತ್ತಾರೆ ಎಂದು ವಿಶ್ವಾಸ ಸೂಚಿಸಿದರು. ನೇಹಾ ಅವರ ಹತ್ಯೆ ಆದಾಗ ಮುಖ್ಯಮಂತ್ರಿ, ಯಾವುದೇ ಸಚಿವರು ಅವರ ಮನೆಗೆ ಹೋಗಿ ಸಾಂತ್ವನ ಹೇಳಿಲ್ಲ. ಆ ಕುಟುಂಬಕ್ಕೆ ಧೈರ್ಯ ಹೇಳಿಲ್ಲ. ಅದರ ಬದಲಾಗಿ ತೇಜೋವಧೆಯ ದುಸ್ಸಾಹಸಕ್ಕೆ ಕೈ ಹಾಕಿದ್ದಾರೆ. ಮುಖ್ಯಮಂತ್ರಿಗಳು ದುಶ್ಯಾಸನ ಪ್ರವೃತ್ತಿ ತೋರುತ್ತಿದ್ದಾರೆ ಎಂದು ಆಕ್ಷೇಪಿಸಿದರು.

**ನಾಡಿನ ತಾಯಂದಿರು, ಹೆಣ್ಮಕ್ಕಳು ಕಾಂಗ್ರೆಸ್ಸಿಗೆ ತಕ್ಕ ಉತ್ತರ ಕೊಡುತ್ತಾರೆ ಎಂದರು. ರಾಜ್ಯದ ಜನರು ಸಿಎಂ, ಗೃಹಸಚಿವರಿಂದ ಇಂಥ ಹೇಳಿಕೆ ನಿರೀಕ್ಷೆ ಮಾಡಿರಲಿಲ್ಲ. ಪೊಲೀಸ್ ಅಧಿಕಾರಿಗಳನ್ನು ಬಳಸಿಕೊಂಡು ಆ ಕುಟುಂಬದ ತೇಜೋವಧೆ ಮಾಡುವ ನೀಚಕೃತ್ಯಕ್ಕೆ ಕಾಂಗ್ರೆಸ್ ಸರಕಾರ ಇಳಿದಿದೆ. ಇವರಿಗೆ ಧಿಕ್ಕಾರ, ಧಿಕ್ಕಾರ ಎಂದು ರಾಜ್ಯದ ಮಹಿಳೆಯರು ಕೂಗುತ್ತಿದ್ದಾರೆ**

**–ಬಿ.ವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ**

### ಸಿಎಂ ಸಿದ್ದರಾಮಯ್ಯ, ಗೃಹ ಸಚಿವರು ಏನು ಬಳೆ ತೊಟ್ಟುಕೊಂಡಿದ್ದಾರಾ?

ಮೈಸೂರು: ಜಿಹಾದಿಗಳಿಗೆ, ಕೊಲೆ ಮಾಡುವ ಪುಂಡರಿಗೆ ಭಯವೇ ಇಲ್ಲದಾಗಿದೆ. ರಾಜ್ಯದಲ್ಲಿ ಮೇಲಿಂದ ಮೇಲೆ ಹಿಂದೂಗಳ ಹತ್ಯೆ ನಡೆಯುತ್ತಿದೆ. ಆದಾಗ್ಯೂ ರಾಜ್ಯ ಸರ್ಕಾರ ಏನೂ ಕ್ರಮ ಕೈಗೊಳ್ಳದೇ ಸುಮ್ಮನಿದೆ. ಸಿಎಂ ಸಿದ್ದರಾಮಯ್ಯ, ಗೃಹ ಸಚಿವ ಪರಮೇಶ್ವರ್ ಏನು ಬಳೆ ತೊಟ್ಟುಕೊಂಡಿದ್ದಾರಾ?ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಿಡಿಕಾರಿದ್ದಾರೆ. ಮೈಸೂರಿನ ವಾಟಾಳ್ ಗ್ರಾಮದಲ್ಲಿ ಮಾತನಾಡಿದ ಬಿ.ವೈ.ವಿಜಯೇಂದ್ರ, ರಾಜ್ಯ ಸರ್ಕಾರ ಮೊದಲು ತುಷ್ಟೀಕರಣ ನೀತಿಯನ್ನು ನಿಲ್ಲಿಸಬೇಕು. ರಾಜ್ಯದಲ್ಲಿ ಹಿಂದೂಗಳ ಹತ್ಯೆ ನಡೆಯುತ್ತಿದೆ. ಈ ಕೊಲೆಗಳ ಹೊಣೆ ಸರ್ಕಾರವೇ ಹೊರಬೇಕು ಎಂದು ಹೇಳಿದರು. ಮೊದಲು ಸಿಎಂ ಗೆ ಒಳ್ಳೆಯ ಬುದ್ಧಿಕೊಡು ಅಂತಾ ಚಾಮುಂಡಿ ತಾಯಿಗೆ ಬೇಡಿಕೊಳ್ಳುತ್ತೇನೆ. ಹಿಂದೂಗಳ ಹತ್ಯೆ ನಿಲ್ಲಿಸುವ ಮನಸ್ಸುಕೊಡು ಎಂದು ಕೇಳಿಕೊಳ್ಳುತ್ತೇನೆ ಎಂದು ಹೆಳಿದರು.

**ಈ ದಿನದ ದರ** ಪೆಟ್ರೋಲ್: 99.84 ₹/L ಡೀಸೆಲ್ : 85.93 ₹/L ಬಂಗಾರ: ₹7,369 /Gram(24ct) ₹6,755 /Gram(22ct) ಬೆಳ್ಳಿ: ₹86.00 /Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ರಾಗಾದಿ ದೋಷದಾಗರಮಾಗಿ.

ನಿಜಗುಣರ ಪರಮಾನುಭವ ಬೋಧೆಯ ಮಾತು. ಪಂಚ ಭೂತಗಳಿಂದ ಶಬ್ದ ಸ್ಪರ್ಶ ರೂಪ ರಸ ಗಂಧ ಎಂಬ ಪಂಚ ವಿಷಯಗಳು. ಈ ಐದು ವಿಷಯಗಳೇ ಎಲ್ಲ ಜೀವಿಗಳ ಸುಖ ದುಃಖಕ್ಕೆ ಮೂಲ.

ಶಬ್ದಾದಿಭಿಃ ಪಂಚಭಿರೇವ ಪಂಚ ಪಂಚತ್ವಮಾಪುಃ ಸ್ವಗುಣೇನ ಬದ್ಧಾಃ.
ಕುರಂಗ ಮಾತಂಗ ಪತಂಗ ಮೀನ ಭೃಂಗಾ ನರಃ ಪಂಚಭಿರಂಚಿತಃ ಕಿಂ?

ಇದು ಶಂಕರಾಚಾರ್ಯರ ವಿವೇಕಚೂಡಾಮಣಿಯ ಒಂದು ಪದ್ಯ. ಜಿಂಕೆ ಶಬ್ದಕ್ಕೆ ಮರುಳಾಗಿ ಬೇಟೆಗಾರನಿಗೆ ಬಲಿಯಾಗುವುದು. ಆನೆ ಸ್ಪರ್ಶ ಸುಖಕ್ಕೆ ಹಾತೊರೆದು ಮಾವುತರು ತೋಡಿದ ಗುಂಡಿಗೆ ಬಿದ್ದು ಪರವಶವಾಗುವುದು. ಪತಂಗ ಜಿಟ್ಟೆಯು ರೂಪಕ್ಕೆ ಮರುಳಾಗಿ ದೀಪಕ್ಕೆ ನೆಗೆದು ಸುಟ್ಟು ಹೋಗುವುದು. ಮೀನು ಮೀನುಗಾರ ಗಾಳಕ್ಕಂಟಿಸಿದ ಮಾಂಸ ತುಂಡದ ರುಚಿ ಸವಿಯಲು ಹೋಗಿ ಬಲೆಗೆ ಬಿದ್ದು ಆಹಾರವಾಗಿ ಸಾಯುವುದು. ಭೃಂಗ ದುಂಬಿ ಹೂವಿನ ಪರಿಮಳಕ್ಕೆ ಮನಸೋತು ಹೂವಿನಲ್ಲಿಯೇ ಉಳಿದು ರಾತ್ರಿಯಾಗುತ್ತಲೇ ಹೂವು ಮುಚ್ಚಿಕೊಳ್ಳತ್ತಲೇ ಪ್ರಾಣ ಕಳೆದುಕೊಳ್ಳುವುದು. ಹೀಗೆ ಒಂದೊಂದು ಜೀವಿ ಒಂದೊಂದು ವಿಷಯಕ್ಕೆ ಸಿಕ್ಕು ಬಲಿಯಾಗುವುದು. ಇನ್ನು ಮಾನವ ಐದೂ ವಿಷಯ ಸೆಳೆತಕ್ಕೆ ಸಿಕ್ಕಿದ್ದಾನೆ. ಉಳಿಯುವುದೆಂತು? ಇಂದ್ರಿಯ ನಿಗ್ರಹವೇ ಪರಿಹಾರ!!

## ಆರಂಭವಾಗಲಿದೆ ಏರ್ ಟ್ಯಾಕ್ಸಿ ಸೇವೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿಲಿಕಾನ್ ಸಿಟಿಯಲ್ಲಿ ಮುಂಬರುವ 2026ರಲ್ಲಿ ಎಲೆಕ್ಟ್ರಿಕಲ್ ಏರ್ ಟ್ಯಾಕ್ಸಿ ಸೇವೆ ಆರಂಭವಾಗಲಿದೆ. ಇಂಡಿಗೋದ ಪ್ರವರ್ತಕ ಸಮೂಹದ ಇಂಟರ್‌ಗ್ಲೋಬ್ ಎಂಟರ್‌ಪ್ರೈಸಸ್ ಸಂಸ್ಥೆ ಏರ್ ಟ್ಯಾಕ್ಸಿ ಸೇವೆ ಆರಂಭಿಸಲು ನಿರ್ಧರಿಸಿದೆ. ನಗರದಲ್ಲಿ ಏರ್ ಟ್ಯಾಕ್ಸಿ ಸೇವೆ ಆರಂಭಿಸುವ ಉದ್ದೇಶದಿಂದ ಇಂಟರ್‌ಗ್ಲೋಬ್ ಸಂಸ್ಥೆ ಹಾಗೂ ಅಮೆರಿಕ ಮೂಲದ ಆರ್ಚರ್ ಏವಿಯೇಷನ್ ಸಂಸ್ಥೆಗಳು ನಗರದಲ್ಲಿ ಮ್ಯಾಪಿಂಗ್ ಕಾರ್ಯ ನಡೆಸುತ್ತಿವೆ. ಮೊದಲ ಹಂತದಲ್ಲಿ ದೆಹಲಿಯಲ್ಲಿ ಏರ್ ಟ್ಯಾಕ್ಸಿ ಸೇವೆ ಆರಂಭಿಸಲಾಗುತ್ತಿದ್ದು ನಂತರ ಸಿಲಿಕಾನ್ ಸಿಟಗೂ ಆ ಸೇವೆಯನ್ನು ವಿಸ್ತರಿಸಲಾಗುವುದು ಎಂದು ತಿಳಿದುಬಂದಿದೆ. ಸರ್ಜಾಪುರ, ಐಟಿಪಿಎಲ್, ಎಲೆಕ್ಟ್ರಾನಿಕ್ ಸಿಟಿ ಭಾಗದಲ್ಲಿ ಏರ್ ಟ್ಯಾಕ್ಸಿ ನಿಲ್ದಾಣಗಳ ಗುರುತು ಕಾರ್ಯ ನಡೆಸಲಾಗುತ್ತಿದ್ದ ಡ್ರೋಣ್ ಮಾದರಿಯಲ್ಲಿರುವ ಏರ್ ಟ್ಯಾಕ್ಸಿ ಸೇವೆ ಆರಂಭಿಸಲಾಗುವುದು ಎಂದು ಇಂಡಿಗೋ ಸಂಸ್ಥೆಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಏರ್ ಟ್ಯಾಕ್ಸಿ ನಿಲ್ದಾಣ ಹಾಗೂ ಪ್ರಯಾಣಿಕರ ಸಂಖ್ಯೆ ಹೆಚ್ಚಿರುವ ಪ್ರದೇಶಗಳ ಗುರುತು ಹಾಕಲಾಗಿದ್ದು, ಏರ್ ಪೋರ್ಟ್ ಗೆ ಏರ್ ಟ್ಯಾಕ್ಸಿಯಲ್ಲಿ ತೆರಳುವವರಿಗೆ 2 ಸಾವಿರದ 2,500 ರೂಪಾಯಿ ದರ ನಿಗದಿಪಡಿಸುವ ಸಾಧ್ಯತೆಗಳಿವೆ ಎನ್ನಲಾಗಿದೆ.ಉದ್ದೇಶಿತ ಏರ್ ಟ್ಯಾಕ್ಸಿ ಸೇವೆ ಆರಂಭವಾದರೆ ಕೇವಲ 6 ನಿಮಿಷದೊಳಗೆ ಏರ್ ಪೋರ್ಟ್ ಗೆ ತಲುಪಬಹುದಾಗಿದೆ.

## ಶರವಣ ಆಕ್ರೋಶ, ಚುನಾವಣಾ ಆಯೋಗಕ್ಕೆ ದೂರು

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್‌ನ ಹಲವಾರು ಭರವಸೆಗಳು ವಿವಿಧ ಗುಂಪುಗಳನ್ನು ದಾರಿ ತಪ್ಪಿಸಲು ಪ್ರಯತ್ನಿ ಸುತ್ತಿದೆ ಎಂದು ಆರೋಪಿಸಿ ಜೆಡಿಎಸ್ ಪರಿಷತ್ ಸದಸ್ಯ ಟಿ.ಎ.ಶರವಣ ನೇತೃತ್ವದಲ್ಲಿ ಚುನಾವಣಾ ಆಯೋಗಕ್ಕೆ ಇಂದು ದೂರು ಸಲ್ಲಿಸಲಾಯಿತು. ಲೋಕಸಭಾ ಚುನಾವಣೆ-2024 ರಲ್ಲಿ ಚುನಾವಣಾ ಲಂಚ ಮತ್ತು ಮತದಾರರನ್ನು ಪ್ರೇರೇಪಿಸುವ ಉದ್ದೇಶದಿಂದ ಖಾತರಿ ಕಾರ್ಡ್‌ಗಳನ್ನು ಪ್ರಸಾರ ಮಾಡುವುದು ಮತ್ತು ವಿತರಿಸುವ ಕಾಂಗ್ರೆಸ್ ಪಕ್ಷವನ್ನು ನಿರ್ಬಂಧಿಸ ಬೇಕೆಂದು ವಿನಂತಿಸಲಾಗಿದ್ದು, ಕಾಂಗ್ರೆಸ್ ಹಲವಾರು ಭರವಸೆಗಳು ಮತ್ತು ಆಶ್ವಾಸನೆಗಳನ್ನು ಘೋಷಿಸುವ ಮೂಲಕ ಸಮಾಜದ ವಿವಿಧ ಗುಂಪುಗಳನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದೆ, ಇದು ಆಮಿಷಗಳು ಮತ್ತು ಪ್ರಚೋದನೆಗಳಿಗೆ ಕಾರಣವಾಗುತ್ತದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

## ಬೆಂಗಳೂರಿನ ರಸ್ತೆಗಳು ಹೆಚ್ಚು ಅಪಾಯ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ವಾಹನಗಳ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಲೆ ಇವೆ. ಇದರ ಜೊತೆಗೆ ಅಪಘಾತ ಪ್ರಕರಣಗಳು ಸಹ ಹೆಚ್ಚಾಗುತ್ತಲೆ ಇರುತ್ತವೆ. ಕಳೆದ ವರ್ಷ ಬೆಂಗಳೂರಿನಲ್ಲಿ ವಾರದ ಇತರ ದಿನಗಳಿಗೆ ಹೋಲಿಸಿದರೆ ವಾರಾಂತ್ಯದಲ್ಲಿ ಮಾರಣಾಂತಿಕ ಅಪಘಾತಗಳು ಹೆಚ್ಚಾಗುತ್ತಿವೆ ಎಂದು ಡೇಟಾ ತೋರಿಸಿದೆ. ವಾರದ ದಿನಗಳಲ್ಲಿ ಐಟಿ ಸಿಟಿಯಲ್ಲಿ ಟ್ರಾಫಿಕ್ ಹೆಚ್ಚಾಗುತ್ತಲೆ ಇದೆ. ಆದರೆ, ಅಪಘಾತಗಳ ಪ್ರಚಾರಕ್ಕೆ ಬಂದರೆ, ಭಾನುವಾರ ಮತ್ತು ಶನಿವಾರ ಅತಿ ಹೆಚ್ಚು ಮಾರಣಾಂತಿಕ ಅಪಘಾತಗಳು ನಡೆಯುತ್ತಿವೆ. ಬೆಂಗಳೂರು ಟ್ರಾಫಿಕ್ ಪೊಲೀಸರ ಅಂಕಿಅಂಶಗಳ ಪ್ರಕಾರ, ಶನಿವಾರ ಮತ್ತು ಭಾನುವಾರದಂದು ಅತಿ ಹೆಚ್ಚು ಅಪಘಾತಗಳು ಸಂಭವಿಸಿವೆ. ಕಳೆದ ವರ್ಷ 883 ಮಾರಣಾಂತಿಕ ಅಪಘಾತಗಳಲ್ಲಿ 32% ಕ್ಕಿಂತ ಹೆಚ್ಚು ವಾರಾಂತ್ಯದಲ್ಲಿ ನಡೆದಿವೆ. 2022 ಕ್ಕೆ ಹೋಲಿಸಿದರೆ, ಭಾನುವಾರದಂದು ಸಾವುಗಳು 115 ರಿಂದ 152 ಕ್ಕೆ ಏರಿದೆ. ಆದರೆ, ಶನಿವಾರದಂದು ಸಾವುಗಳು 103 ರಿಂದ 133 ಕ್ಕೆ ಏರಿಕೆಯಾಗಿದೆ. ಇದು ಸುಮಾರು 30% ರಷ್ಟು ಹೆಚ್ಚಾಗಿದೆ. ವಾರದ ಇತರ ದಿನಗಳಲ್ಲಿ ಕಳೆದ ವರ್ಷದಲ್ಲಿ ತಲಾ ಸರಾಸರಿ 120 ಮಾರಣಾಂತಿಕ ಅಪಘಾತಗಳು ಅಥವಾ ಪ್ರತಿದಿನ ಸುಮಾರು 2.3 ಸಾವುಗಳು ಸಂಭವಿಸಿದ್ದರೂ, ವಾರಾಂತ್ಯಗಳಲ್ಲಿ ನಗರದಲ್ಲಿ ವಾಹನ ಸವಾರರು ಹೆಚ್ಚು ಜಾಗ್ರತೆ ವಹಿಸಬೇಕಾಗುತ್ತದೆ.


ಉದಯವಾಹಿನಿ ಚಿತ್ರ

## ಮತ್ತೊಂದು ಹೋಟೆಲ್‌ಗೆ ಬಾಂಬ್ ಬೆದರಿಕೆ': ಸ್ಥಳಕ್ಕೆ ಪೊಲೀಸರು ದೌಡು

• ಉದಯವಾಹಿನಿ, ಬೆಂಗಳೂರು

ರಾಮೇಶ್ವರಂ ಕೆಫೆ ಹೋಟೆಲ್‌ನಲ್ಲಿ ಬಾಂಬ್ ಸ್ಫೋಟ ಪ್ರಕರಣದ ತನಿಖೆ ನಡೆಯುತ್ತಿದೆ. ಈ ಬೆನ್ನಲ್ಲೇ ನಗರದ ಮತ್ತೊಂದು ಹೋಟೆಲ್‌ಗೆ ಬಾಂಬ್ ಬೆದರಿಕೆ ಕರೆ ಮಾಡಲಾಗಿದೆ. ಹೀಗಾಗಿ ಪೊಲೀಸರು ಸ್ಥಳಕ್ಕೆ ದೌಡಾಯಿಸಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ. ಬೆಂಗಳೂರಿನ ಹೆಚ್ ಎಂ ಟಿ ಗ್ರೌಂಡ್ ಬಳಿಯಿರುವಂತ ಕದಂಬ ಹೋಟೆಲ್‌ಗೆ ಬಾಂಬ್ ಇಟ್ಟರೋದಾಗಿ ಜಾಲಹಳ್ಳಿ ಪೊಲೀಸ್ ಠಾಣೆಗೆ ಅನಾಮಧೇಯ ಪತ್ರ ಬಂದಿದೆ.ಈ ಕೂಡಲೇ ಅಲರ್ಟ್ ಆದಂತ ಪೊಲೀಸರು, ಸ್ಥಳಕ್ಕೆ ದೌಡಾಯಿಸಿ, ಪರಿಶೀಲನೆ ನಡೆಸಿದ್ದಾರೆ. ಜಾಲಹಳ್ಳಿ ಪೊಲೀಸರು, ಬಾಂಬ್ ಸ್ಕ್ವಾಡ್, ಶ್ವಾನದಳದಿಂದ ಕದಂಬ ಹೋಟೆಲ್ ಅನ್ನು ಪರಿಶೀಲನೆ ನಡೆಸಲಾಗಿದೆ. ಸುಮಾರು ಅರ್ಧಗಂಟೆ ಸ್ಥಳದಲ್ಲಿ ಬಾಂಬ್‌ಗಾಗಿ ಹುಡುಕಾಡಿದ್ರೂ ಎಲ್ಲಿಯೂ ಪತ್ತೆಯಾಗಿಲ್ಲ. ಆ ಬಳಿಕ ಇದು ಹುಸಿ ಬೆದರಿಕೆ ಪತ್ರ ಎಂಬುದಾಗಿ ಪೊಲೀಸರು ನಿರ್ಧಾರಕ್ಕೆ ಬಂದಿದ್ದಾರೆ. ಈಗ ಬಾಂಬ್ ಬೆದರಿಕೆ ಪತ್ರ ಬರೆದ ಆರೋಪಿಗಾಗಿ ತನಿಖೆ ಕೈಗೊಂಡಿದ್ದಾರೆ.



ಉದಯವಾಹಿನಿ ಚಿತ್ರ

# ಕಾಂಗ್ರೆಸ್‌ಗೆ ಮತ ಕೊಟ್ಟರೆ ಅದು ವ್ಯರ್ಥ': ಮಾಜಿ ಡಿಸಿಎಂ

■ ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇ ಮಠ ಅವರ ಹತ್ಯೆ ಖಂಡನೆ ■ ಕೊಲೆಗಾರನ ರಕ್ಷಣೆ ಮಾಡುವ ಪ್ರಯತ್ನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಡಾ.ಸಿ.ಎನ್. ಅಶ್ವತ್ಥ ನಾರಾಯಣ್ ಆಕ್ರೋಶ**

ದೃಢವಾದ ನಿಲುವಿಲ್ಲದ, ಜನರಲ್ಲಿ ಗೊಂದಲ ಉಂಟು ಮಾಡುವ, ಭಯೋತ್ಪಾದಕರನ್ನು ಬೆಂಬಲಿಸುವ ಕಾಂಗ್ರೆಸ್‌ಗೆ ಮತ ಕೊಟ್ಟರೆ ಅದು ವ್ಯರ್ಥ ಎಂದು ಮಾಜಿ ಡಿಸಿಎಂ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಅವರು ಆಕ್ರೋಶ ವ್ಯಕ್ತಪಡಿಸಿದರು. ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇ ಮಠ ಅವರ ಹತ್ಯೆಯಾಗಿದೆ.

ಆದರೆ, ಕಾಂಗ್ರೆಸ್ ಪಕ್ಷ ಸುರಕ್ಷಿತತೆ ಕುರಿತು ಮಾತನಾಡಿಲ್ಲ. ಕಾಂಗ್ರೆಸ್ಸಿಗರು ತಮ್ಮ ಪಕ್ಷದ ಕಾರ್ಪೊರೇಟರ್ ಮಗಳ ಕುರಿತು ಬೇಜವಾಬ್ದಾರಿಯುತ ಹೇಳಿಕೆ ನೀಡಿದ್ದಾರೆ ಎಂದು ಟೀಕಿಸಿದರು. ಕೊಲೆಗಾರನ ರಕ್ಷಣೆ ಮಾಡುವ ಪ್ರಯತ್ನ ನಡೆದಿದೆ. ನನ್ನ ಮಗಳ ಮೇಲೆ ಮಸಿ ಬಳಿಯುವ ಯತ್ನ ನಡೆದಿದೆ ಎಂದು ಸ್ವತಃ ನೇಹಾ ಅವರ ತಂದೆ ಹೇಳಿದ್ದಾರೆ. ಸಿಬಿಐ ತನಿಖೆಗೆ ಒಪ್ಪಿಸಲು ಕೋರಿದ್ದಾರೆ ಎಂದು ವಿವರಿಸಿದರು. ಕೆಜಿಹಳ್ಳಿ- ಡಿಜೆ ಹಳ್ಳಿ ಗಲಭೆಯಲ್ಲಿ ಸ್ವತಃ ಅವರ ಶಾಸಕರ ಮನೆಗೇ ಬೆಂಕಿ ಹಾಕಿದ್ದರು. ಆದರೆ, ಕಾಂಗ್ರೆಸ್ ಪಕ್ಷ ಆ ಶಾಸಕರ ಪರ ನಿಂತಿಲ್ಲ ಎಂದರು.

ಅಲ್ಪಸಂಖ್ಯಾತರ ಹಕ್ಕು ರಕ್ಷಣೆ ನಮ್ಮ ಮೊದಲ ಆದ್ಯತೆ ಎಂದು ಹಿಂದಿನ ಯುಪಿಎ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರು ಹೇಳಿದ್ದರು ಎಂದು ನೆನಪಿಸಿದರು. ಎಲ್ಲರ ಆಸ್ತಿ ವಶಪಡಿಸಿ ಮರುಹಂಚಿಕೆ ಮಾಡುವುದಾಗಿ ಹೇಳಿದ್ದರು. ಇವರ ಆಸ್ತಿ ಮೊದಲು ಮರುಹಂಚಿಕೆ ಮಾಡಲಿ ಎಂದು ಆಗ್ರಹಿಸಿದರು. ಇವರು ಜನರ ಆಸ್ತಿ ನುಂಗಿದವರು. ಇಂಥ ಹೇಳಿಕೆ ಕೊಡಲು ಇವರಿಗೆಷ್ಟು ಧೈರ್ಯ ಇರಬೇಕು. ಇವರ ಮನಸ್ಥಿತಿ ಏನಿದೆ ಎಂದು ಅರ್ಥವಾಗುತ್ತದೆ ಎಂದರು. ಬಿಜೆಪಿ ಎಲ್ಲರನ್ನು ಸಮಾನರಾಗಿ ಕಾಣುತ್ತದೆ. ಬಡವರಿಗೆ ಮೊದಲನೇ ಹಕ್ಕು ಇರಬೇಕು. ಆದರೆ, ಕಾಂಗ್ರೆಸ್ಸಿನವರು ಅಲ್ಪಸಂಖ್ಯಾತರಿಗೆ ಮೊದಲ ಹಕ್ಕು ಎನ್ನುವ ಮೂಲಕ ಅಲ್ಪಸಂಖ್ಯಾತರ ತುಷ್ಟೀಕರಣ ಮಾಡುತ್ತಿದ್ದಾರೆ.

ಬಿಜೆಪಿಯ 2 ಕೋಟಿ ಹಣ ವಶ ಪಡಿಸಿಕೊಂಡಿದ್ದಾರೆ. ವಾಹನ ಚಾಲಕನ ಬಳಿ ಎಲ್ಲ ದಾಖಲೆಗಳಿದ್ದವು. ಯಾವ ಬ್ಯಾಂಕಿನಿಂದ ಹಣ ಡ್ರಾ ಆಗಿದೆ ಎಂಬ ವಿವರ ಇದ್ದವು. ವಾಹನ ಸಂಖ್ಯೆ, ಬ್ಯಾಂಕ್ ವಿವರ, ಎಲ್ಲವೂ ಇದ್ದವು. ಆದಾಯ ತೆರಿಗೆ ಇಲಾಖೆಯವರು ಕಾನೂನುಬದ್ಧ ಎಂದರೂ ಮಾತು ಕೇಳಿಲ್ಲ. ಹಣವನ್ನು ಕಾನೂನುಬಾಹಿರವಾಗಿ ಪೊಲೀಸ್ ವಶದಲ್ಲಿ ಇಟ್ಟುಕೊಂಡಿದ್ದಾರೆ. ಇದರ ವಿರುದ್ಧ ಹೈಕೋರ್ಟ್ ಮೆಟ್ಟಿಲೇರುತ್ತೇವೆ ಎಂದು ಡಾ.ಸಿ.ಎನ್.ಅಶ್ವತ್ಥನಾರಾಯಣ್ ಅವರು ತಿಳಿಸಿದರು.ಬೆಂಗಳೂರೆಂಬ ಟೆಕ್ ಸಿಟಿಯನ್ನು ಟ್ಯಾಂಕರ್ ಸಿಟಿ ಮಾಡಿದ್ದಾರೆ. ನೀರು ಸರಾಗ, ಸುಲಭವಾಗಿ ಸಿಗುತ್ತಿತ್ತು.

ಕಾಂಗ್ರೆಸ್ಸಿಗರು ಟ್ಯಾಂಕರ್ ದರ ಏರಿಸಿದ್ದಾರೆ. ಸರಕಾರದ ದುಡ್ಡಲ್ಲಿ ಮತ ಹಾಕುವವರಿಗೆ ನೀರು ಕೊಡುವುದಾಗಿ ಹೇಳಿ ಆಡಳಿತ ದುರ್ಬಳಕೆ ಮಾಡಿದ್ದಾರೆ ಎಂದು ಆಕ್ಷೇಪಿಸಿದರು. ರಾಜ್ಯ ಚುನಾವಣಾ ಆಯೋಗವು ಕಾಟಾಚಾರಕ್ಕಷ್ಟೇ ಎಫ್‌ಐಆರ್ ಹಾಕುತ್ತಿದೆ. ರಾಜ್ಯ ಆಡಳಿತ ಯಂತ್ರ ಕಾಂಗ್ರೆಸ್ಸಿನ ಕೈಗೊಂಬೆಯಾಗಿದೆ. ಸರಕಾರವೇ ಬೇಲಿಯೆದ್ದು ಹೊಲ ಮೇಯುವಂತಾಗಿದೆ ಎಂದು ದೂರಿದರು.

> **ಕಾಂಗ್ರೆಸ್ ಮುಕ್ತ ದೇಶ ಮಾಡಬೇಕಿದೆ. ನಮ್ಮ ಸಮಾಜಕ್ಕೆ ಕಾಂಗ್ರೆಸ್ ಕೊಡುಗೆ ಏನೆಂದು ನಮ್ಮ ಪಕ್ಷದ ಜಾಹೀರಾತು ತಿಳಿಸಿದೆ. ದೇಶದ ಸರ್ವಾಂಗೀಣ ಅಭಿವೃದ್ಧಿಗೆ ನಾವು ಬಿಜೆಪಿಗೆ ಬೆಂಬಲ ಕೊಡಬೇಕು ಎಂದು ಮನವಿ ಮಾಡಿದರು. ಇಂಥ ಸಿ.ಇ.ಟಿ. ಪರೀಕ್ಷೆ ಇಲ್ಲಿನವರೆಗೆ ನಡೆದಿಲ್ಲ. ಕಾಂಗ್ರೆಸ್ ಔಟ್ ಆಫ್ ಸಿಲೆಬಸ್. ಪರೀಕ್ಷೆಯೂ ಔಟ್ ಆಫ್ ಸಿಲೆಬಸ್. ಈ ಸರಕಾರ ನಿದ್ರೆಯಲ್ಲೇ ಇದೆ. ಇದು ಆತಂಕಕಾರಿ ಎಂದು ತಿಳಿಸಿದರು. ಪಿಎಫ್‌ಐ, ಎಸ್‌ಡಿಪಿಐ ಓಲೈಕೆ ಮಾಡುವ ಪಕ್ಷ ಕಾಂಗ್ರೆಸ್ ಎಂದು ಟೀಕಿಸಿದರು.**
> -ಡಾ.ಸಿ.ಎನ್.ಅಶ್ವತ್ಥನಾರಾಯಣ್

### ಆಯೋಗ ಸಂಪೂರ್ಣ ವಿಫಲ

**ಗ್ರಾಮಾಂತರ ಕ್ಷೇತ್ರವನ್ನು ಅತಿ ಸೂಕ್ಷ್ಮ ಕ್ಷೇತ್ರ ಎಂದು ಪರಿಗಣಿಸಲು ಆಗ್ರಹಿಸಲಾಗಿದೆ. ರಾಜ್ಯ ಚುನಾವಣಾ ಆಯೋಗ ಸಂಪೂರ್ಣ ವಿಫಲವಾಗಿದೆ. ಶಿವಕುಮಾರ್ ಮೇಲೆ ಎಷ್ಟೋ ವಿಡಿಯೋಗಳಿದ್ದರೂ, ಸಾಕ್ಷಿಗಳಿದ್ದರೂ ಕ್ರಮ ಕೈಗೊಂಡಿಲ್ಲ. ಪೊಲೀಸರಂತೂ ಸಂಪೂರ್ಣವಾಗಿ ಆಡಳಿತ ಯಂತ್ರದ ಜೊತೆ ಕೈಜೋಡಿಸಿದ್ದಾರೆ ಎಂದು ವಿವರಿಸಿದರು. ಎಲ್ಲ ಕಡೆ ಹಣ ಹಂಚುವ ಕಾಂಗ್ರೆಸ್‌ನವರು ಸುಳ್ಳು ಹೇಳಿಕೊಂಡು ಓಡಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ಮತ ಕೊಡುವುದರಿಂದ ಏನೂ ಪ್ರಯೋಜನ ಇಲ್ಲ ಎಂದು ಮತ್ತೆ ಸ್ಪಷ್ಟಪಡಿಸಿದರು.**

## ಬೆಂ. ಗ್ರಾ. ಅತೀಸೂಕ್ಷ್ಮ ಕ್ಷೇತ್ರ; ಆಯೋಗ ಸೂಚನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಜಿದ್ದಾಜಿದ್ದಿನ ಕುರು ಕ್ಷೇತ್ರವಾಗಿರುವ ಪ್ರತಿಷ್ಠಿತ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರವನ್ನು ಅತೀಸೂಕ್ಷ್ಮ ಕ್ಷೇತ್ರವೆಂದು ಪರಿಗಣಿಸುವಂತೆ ಕೇಂದ್ರ ಚುನಾವಣಾ ಆಯೋಗ ರಾಜ್ಯ ಚುನಾವಣಾ ಆಯೋಗಕ್ಕೆ ಸೂಚನೆ ನೀಡಿದೆ.

ಕೇಂದ್ರ ಚುನಾವಣಾ ಆಯೋಗದ ಸೂಚನೆ ಮೇರೆಗೆ ಬೆಂಗಳೂರು ಗ್ರಾಮಾಂತರ ಕ್ಷೇತ್ರವನ್ನು ಅತೀ ಸೂಕ್ಷ್ಮ ಕ್ಷೇತ್ರವೆಂದು ಪರಿಗಣಿಸಲಾಗಿದ್ದು, ಮುಕ್ತ, ನ್ಯಾಯಸಮ್ಮತ ಮತದಾನಕ್ಕೆ ಎಲ್ಲಾ ರೀತಿಯ ಕ್ರಮಗಳನ್ನೂ ತೆಗೆದುಕೊಳ್ಳಬೇಕೆಂದು ಉಪ ಮುಖ್ಯ ಚುನಾವಣಾಧಿಕಾರಿ ನವೀನ್ ಜೋಸೆಫ್ ಎ.ಅವರು ರಾಮನಗರ ಚುನಾವಣಾಧಿಕಾರಿಗೆ ಸೂಚನೆ ನೀಡಿದ್ದಾರೆ.

ಕೆಲ ದಿನಗಳ ಹಿಂದೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಸಿ.ಎನ್. ಮಂಜುನಾಥ್ ಅವರ ಪರವಾಗಿ ಬಿಜೆಪಿ ಚುನಾವಣಾ ಏಜೆಂಟ್ ಪದ್ಮನಾಭ ಜಿ.ವಿ. ಅವರು ಮುಖ್ಯ ಚುನಾವಣಾ ಅಧಿಕಾರಿಗೆ ಪತ್ರ ಬರೆದಿದ್ದರು. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಆಡಳಿತಯಂತ್ರವನ್ನು ದುರುಪಯೋಗ ಪಡಿಸಿಕೊಳ್ಳುವ ಸಾಧ್ಯತೆ ಇರುವುದರಿಂದ ಇಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಯವುದು ಅನಿವಾರ್ಯವಾಗಿದೆ. ರಾಷ್ಟ್ರೀಯ ಪಕ್ಷಗಳಿಂದ ಪ್ರಬಲ ಅಭ್ಯರ್ಥಿಗಳು ಸ್ಪರ್ಧಿಸಿರುವ ಕಾರಣ ಈ ಕ್ಷೇತ್ರವನ್ನು ಅತೀಸೂಕ್ಷ್ಮವೆಂದು ಪರಿಗಣಿಸಿ ಎಲ್ಲಿ ಅಗತ್ಯವಿದೆಯೋ ಅಂತಹ ಕಡೆ ಸೇನಾಪಡೆ, ಅರೆಸೇನಾಪಡೆ, ಕ್ಷಿಪ್ರಪಡೆ ಸೇರಿದಂತೆ ಮತ್ತಿತರ ಭದ್ರತಾ ಪಡೆಗಳನ್ನು ನಿಯೋಜಿಸಬೇಕೆಂದು ಪತ್ರದಲ್ಲಿ ಮನವಿ ಮಾಡಿದ್ದರು.

ಈ ಪತ್ರವನ್ನು ಮುಖ್ಯ ಚುನಾವಣಾ ಆಯುಕ್ತರಿಗೆ ರವಾನಿಸಲಾಗಿತ್ತು. ಎಲ್ಲವನ್ನೂ ಕೂಲಂಕುಷವಾಗಿ ಪರಿಶೀಲಿಸಿದ ಆಯೋಗ ಅತೀಸೂಕ್ಷ್ಮ ಎಂದು ಪರಿಗಣಿಲುಸ ನಿರ್ದೇಶನ ನೀಡಿತ್ತು. ಇದೀಗ ಗ್ರಾಮಾಂತರ ಕ್ಷೇತ್ರವು ಅತೀ ಸೂಕ್ಷ್ಮ ಕ್ಷೇತ್ರವೆಂದು ಘೋಷಣೆಯಾಗಿರುವುದರಿಂದ ಮತದಾನಕ್ಕೂ ಮುನ್ನ ಕ್ಷೇತ್ರದಾದ್ಯಂತ ಹೆಚ್ಚಿನ ಭದ್ರತಾ ಪಡೆಯನ್ನು ನಿಯೋಜನೆ ಮಾಡಲಾಗುತ್ತದೆ.

## ಸರ್ಕಾರ ಪ್ರಕರಣ ತನ್ನದೇ ರೀತಿಯಲ್ಲಿ ನಿಭಾಯಿಸುತ್ತದೆ

• ಉದಯವಾಹಿನಿ, ಬೆಂಗಳೂರು

ಹುಬ್ಬಳ್ಳಿಯ ನೇಹಾ ಹತ್ಯೆ ಪ್ರಕರಣವನ್ನು ಕೇಂದ್ರೀಯ ತನಿಖಾ ದಳದ (ಸಿಬಿಐ) ತನಿಖೆಗೆ ವಹಿಸುವುದಕ್ಕೆ ತಮ್ಮ ಸರ್ಕಾರಕ್ಕೆ ಯಾವುದೇ ಅಭ್ಯಂತರವಿಲ್ಲ. ಆದರೆ, ತಮ್ಮ ಸರ್ಕಾರ ಪ್ರಕರಣವನ್ನು ತನ್ನದೇ ಆದ ರೀತಿಯಲ್ಲಿ ನಿಭಾಯಿಸುತ್ತದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೋಮವಾರ ಹೇಳಿದ್ದಾರೆ.

ಕಳೆದ ವಾರ ಬಿವಿಬಿ ಕಾಲೇಜಿನ ಕ್ಯಾಂಪಸ್‌ನಲ್ಲಿ ಚಾಕುವಿನಿಂದ ಇರಿದು ಕೊಲ್ಲಲ್ಪಟ್ಟ ಕಾಂಗ್ರೆಸ್ ಕೌನ್ಸಿಲರ್‌ನ ಮಗಳು ನೇಹಾ ಹತ್ಯೆ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಬಿಜೆಪಿ ಒತ್ತಾಯಿಸಿದ್ದು, ಪೊಲೀಸರು ಪ್ರಕರಣವನ್ನು ದಿಕ್ಕು ತಪ್ಪಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದೆ. ಹುಬ್ಬಳ್ಳಿ ಹತ್ಯೆ ಪ್ರಕರಣವನ್ನು ಸಿಬಿಐಗೆ ವಹಿಸುವುದರಲ್ಲಿ ನಮಗೆ ಯಾವುದೇ ಅಭ್ಯಂತರವಿಲ್ಲ. ಅವರು ಹಸ್ತಾಂತರಿಸಲಿ, ಅವರು ಏನು ಬೇಕಾದರೂ ಮಾಡಲಿ.

ಆದರೆ, ಸರ್ಕಾರ ಈ ಪ್ರಕರಣವನ್ನು ತನ್ನದೇ ಆದ ರೀತಿಯಲ್ಲಿ ನಿಭಾಯಿಸುತ್ತದೆ, ಅದರಲ್ಲಿ ಯಾವುದೇ ಪ್ರಶ್ನೆಯಿಲ್ಲ' ಎಂದು ಸುದ್ದಿಸಂಸ್ಥೆ ಎಎನ್‌ಐಗೆ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಹತ್ಯೆಗೀಡಾದ ಯುವತಿಯ ತಂದೆ ನಿರಂಜನ ಹಿರೇಮಠ ಘಟನೆಯನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಆಗ್ರಹಿಸಿದ್ದು, ಪ್ರಕರಣದ ಉಸ್ತುವಾರಿ ವಹಿಸಿರುವ ಪೊಲೀಸ್ ಕಮಿಷನರ್ ಅವರನ್ನು ನಿರ್ಲಕ್ಷ್ಯ ಆರೋಪದ ಮೇಲೆ ವರ್ಗಾವಣೆ ಮಾಡಬೇಕು ಎಂದಿದ್ದರು.

ಇದಕ್ಕೂ ಮುನ್ನ ಬಿಜೆಪಿ ಮುಖ್ಯಸ್ಥ ಜೆಪಿ ನಡ್ಡಾ ಕೂಡ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಆಗ್ರಹಿಸಿದ್ದರು.

ಘಟನೆ ಬಳಿಕ ಸ್ಥಳದಿಂದ ಪರಾರಿಯಾಗಿದ್ದ ಆರೋಪಿ ಫಯಾಜ್ ಖೋಂಡುನಾಯಕ್‌ನನ್ನು ಪೊಲೀಸರು ಬಂಧಿಸಿದ್ದಾರೆ. ನೇಹಾ ಮೊದಲ ವರ್ಷದ ಎಂಸಿಎ ವಿದ್ಯಾರ್ಥಿನಿ ಮತ್ತು ಫಯಾಜ್ ಮಾಜಿ ಸಹಪಾಠಿಯಾಗಿದ್ದ.



> **ತಮ್ಮ ಪುತ್ರಿಯ ಹತ್ಯೆ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿರುವ ರಾಜ್ಯ ಸರ್ಕಾರದ ಕ್ರಮವನ್ನು ನೇಹಾ ತಂದೆ ನಿರಂಜನ್ ಹಿರೇಮಠ ಸ್ವಾಗತಿಸಿದ್ದಾರೆ. ಪ್ರಕರಣವನ್ನು ಸಿಐಡಿಗೆ ವಹಿಸಿದ್ದು ತಮಗೆ ತೃಪ್ತಿ ತಂದಿದೆ ಎಂದಿದ್ದಾರೆ.**

### 9 ಬಾರಿ ಅಲ್ಲ 14 ಸಲ ಇರಿತ

**ಮರಣೋತ್ತರ ವರದಿಯಲ್ಲಿ ಸ್ಫೋಟಕ ಸಂಗತಿ ಬಯಲು ಹುಬ್ಬಳ್ಳಿಯ ಕಾಲೇಜು ವಿದ್ಯಾರ್ಥಿನಿ ನೇಹಾ ಹಿರೇಮಠ ಅವರ ಕೊಲೆ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಲಾಗುವುದು. ಪ್ರಕರಣದ ತ್ವರಿತ ವಿಚಾರಣೆಗೆ ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ತಿಳಿಸಿದ್ದಾರೆ.**

## ಬಾಲಕಿ ಸಜೀವ ದಹನ 7 ಮಂದಿಗೆ ಗಂಭೀರ ಗಾಯ

• ಉದಯವಾಹಿನಿ, ನೆಲಮಂಗಲ,


ಉದಯವಾಹಿನಿ ಚಿತ್ರ

**ಕಾರು ಡಿಕ್ಕಿ ಹೊಡೆದು ಹೊತ್ತಿ ಉರಿದ ಓಮಿನಿ**

ಸಹೋದರನ ಮನೆಯಲ್ಲಿ ರಾತ್ರಿ ಊಟ ಮಾಡಿಕೊಂಡು ಒಂದೇ ಕುಟುಂಬದ ಸದಸ್ಯರು ಖುಷಿಖುಷಿಯಿಂದ ಮಾತನಾಡಿ, ಕಾಲ ಕಳೆದು ಮನೆಗೆ ವಾಪಸ್ಸಾಗುತ್ತಿದ್ದರು. ಆದರೆ ಆ ಜವರಾಯನಿಗೆ ಅವರ ಸಂಭ್ರಮ ನೋಡಿ ಸಹಿಸಲಾಗಲಿಲ್ಲವೇನೋ

ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿ ಮಾದಾವರದ ಬಳಿ ಓಮಿನಿ ಕಾರಿಗೆ ಹಿಂದಿನಿಂದ ಮತ್ತೊಂದು ಕಾರು ಡಿಕ್ಕಿ ಹೊಡೆದು ಬೆಂಕಿ ಹತ್ತಿಕೊಂಡು ಹೊತ್ತಿ ಉರಿದ ಪರಿಣಾಮ ಬಾಲಕಿಯೊಬ್ಬಳು ಸುಟ್ಟು ಕರಕಲಾಗಿರುವ ಧಾರುಣ ಘಟನೆ ನಡೆದಿದೆ.ದಿವ್ಯ (16) ಮೃತಪಟ್ಟ ಬಾಲಕಿ.

ಅರಿಶಿನಗುಂಟೆಯ ಬೃಂದಾವನ ಲೇ ಔಟ್‌ನ ನಿವಾಸಿ ಮಹೇಶ್ ಎಂಬುವರು ತಮ್ಮ ಕುಟುಂಬ ಸಮೇತ ಅಬ್ಬಿಗೆರೆಯಲ್ಲಿರುವ ಸಹೋದರನ ಮನೆಗೆ ತೆರಳಿ ರಾತ್ರಿ ಊಟ ಮುಗಿಸಿಕೊಂಡು ಓಮಿನಿ ಕಾರಿನಲ್ಲಿ ಮನೆಗೆ ವಾಪಸ್ಸಾಗುತ್ತಿದ್ದರು.

10 ಗಂಟೆ ಸುಮಾರಿಗೆ ಮಾದಾವರ ಟೋಲ್ ಬಳಿ ಓಮಿನಿಗೆ ಬಲೇನೊ ಕಾರು ಡಿಕ್ಕಿ ಹೊಡೆದ ಪರಿಣಾಮ ಓಮಿನಿ ಪಲ್ಟಿಯಾಗಿ ಬೆಂಕಿಗಾಹುತಿಯಾಗಿ ಈ ದುರ್ಘಟನೆ ಸಂಭವಿಸಿದೆ.

ಕಾರಿನಲ್ಲಿ ಒಟ್ಟು 8 ಜನ ಪ್ರಯಾಣಿಸುತ್ತಿದ್ದರು ಎನ್ನಲಾಗಿದ್ದು, ಕಾರಿನಲ್ಲಿದ್ದ ದಿವ್ಯ ಸ್ಥಳದಲ್ಲೇ ಸುಟ್ಟು ಕರಕಲಾಗಿದ್ದರೆ, ಮಹೇಶ್, ಶಾಂತಿಲಾಲ್, ಮಂಜುಳ, ತರುಣ್ ಕುಮಾರ್ ಎಂಬುವರಿಗೆ ಗಂಭೀರ ಗಾಯಗಳಾಗಿದ್ದು, ಸುಮನ್, ಸುನಿತಾ, ಮಯಾಂಕ್ ಅವರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದವರಿಗೆ ಸಣ್ಣಪುಟ್ಟ ಸುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ.

## ಕಾಂಗ್ರೆಸ್ ವಿರುದ್ಧ ಬಿಜೆಪಿಯಿಂದ ಖಾಲಿ ಚೆಪ್ಪು

• ಉದಯವಾಹಿನಿ, ಬೆಂಗಳೂರು

ಮತ್ತೆ ಜಾಹೀರಾತು ನೀಡಿದ ಕಾಂಗ್ರೆಸ್, 'ಮೋದಿ ಸರ್ಕಾರಕ್ಕೆ ಕಟ್ಟುವ ಪ್ರತಿ 100 ರೂಪಾಯಿ ತೆರಿಗೆಯಲ್ಲಿ ಕರ್ನಾಟಕಕ್ಕೆ ಮರಳಿ ಸಿಗುವುದು 13 ರೂಪಾಯಿ ಮಾತ್ರ. ಈ ಅನ್ಯಾಯವನ್ನು ಎಲ್ಲಿಯವರೆಗೆ ಸಹಿಸಬೇಕು' ಎಂದು ಉಲ್ಲೇಖಿಸಿದೆ. ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ ಮತ್ತೆ ಜಾಹೀರಾತು ಸಮರಕ್ಕಿಳಿದ ಬಿಜೆಪಿ,

ಹೆಚ್ಚಿನೆಲ್ಲ ಪತ್ರಿಕೆಗಳಿಗೆ ಮತ್ತೊಂದು ಜಾಹೀರಾತು ನೀಡಿತು. 'ಕಾಂಗ್ರೆಸ್ ಡೇಂಜರ್' ಎಂಬ ಜಾಹೀರಾತಿನಲ್ಲಿ ಲವ್ ಜಿಹಾದ್, ಕುಕ್ಕರ್ ಬಾಂಬ್, ವಿಧಾನಸೌಧ ಆವರಣದಲ್ಲಿ ಪಾಕಿಸ್ತಾನ ಪರ ಘೋಷಣೆ ಸೇರಿದಂತೆ ಹಲವು ವಿಚಾರಗಳನ್ನು ಬಿಜೆಪಿ ಉಲ್ಲೇಖಿಸಿತು. ಜತೆಗೆ, ಭದ್ರತೆ ಮತ್ತು ಸುರಕ್ಷತೆಗಾಗಿ ಬಿಜೆಪಿಗೆ ಮತ ನೀಡಿ ಎಂದು ಮನವಿ ಮಾಡಿತು. ಈ ಮಧ್ಯೆ, 'ಕನ್ನಡಿಗರ ಕೈಗೆ ಚಿಪ್ಪು ನೀಡಿದ ಕಾಂಗ್ರೆಸ್' ಎಂದು ಬಿಜೆಪಿ ಜಾಹೀರಾತು ನೀಡಿತು. ಅದರಲ್ಲಿ, ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕ ಜನತೆ ಕೈಗೆ ಚಿಪ್ಪು ನೀಡಲಾಗಿದೆ ಎಂದು ಉಲ್ಲೇಖಿಸಿತು.


ಮುಂದುವರಿದು, ಕಾಂಗ್ರೆಸ್ ಆಡಳಿತದಲ್ಲಿ ಆಟೋ ಮತ್ತು ಕ್ಯಾಬ್ ಚಾಲಕರಿಗೆ ಚಿಪ್ಪು, ಬರದಿಂದ ತತ್ತರಿಸಿದ ರೈತರ ಕೈಗೆ ಚಿಪ್ಪು, ಕಾವೇರಿ ನೀರು ತಮಿಳುನಾಡಿಗೆ ಬಿಟ್ಟು ಬೆಂಗಳೂರಿಗರ ಕೈಗೆ ಚಿಪ್ಪು, ದಲಿತರ 11 ಸಾವಿರ ಕೋಟಿ ದುರ್ಬಳಕೆ ಮಾಡಿಕೊಂಡು ತಳಸಮುದಾಯದ ಕೈಗೆ ಚಿಪ್ಪು, ಪ್ರತಿದಿನ ಪ್ರಯಾಣ ಮಾಡುವ ಕಾರ್ಮಿಕರಿಗೆ ಕೈಗೆ ಚಿಪ್ಪು, ವಿದ್ಯಾನಿಧಿ ನೀಡದೆ ವಿದ್ಯಾರ್ಥಿಗಳ ಕೈಗೆ ಚಿಪ್ಪು, ಅಲ್ಪಸಂಖ್ಯಾತರ ಓಲೈಕೆಯಿಂದ ಹಿಂದುಗಳ ಕೈಗೆ ಚಿಪ್ಪು, ಕಿಸಾನ್ ಸಮ್ಮಾನ್ ನ 24000 ಸ್ಥಗಿತಗೊಳಿಸಿ ರೈತರ ಕೈಗೆ ಚಿಪ್ಪು, ಬೆಲೆ ಏರಿಕೆ ಮಾಡಿ ಜನಸಾಮಾನ್ಯರ ಕೈಗೆ ಚಿಪ್ಪು ನೀಡಿದೆ ಎಂದು ಉಲ್ಲೇಖಿಸಿತು.

## ಕಾಯುವ ಚಾಲಕರು, ನಮ್ಮ ಯಾತ್ರಿ ಆ್ಯಪ್ ಬುಕ್ಕಿಂಗ್ ನಿಧನ!

• ಉದಯವಾಹಿನಿ, ಬೆಂಗಳೂರು

ಶೂನ್ಯ ದರ ಏರಿಕೆಯ ಭರವಸೆಯೊಂದಿಗೆ ಬೆಂಗಳೂರಿನಲ್ಲಿ ನಮ್ಮ ಯಾತ್ರಿ ಕ್ಯಾಬ್ ಸೇವೆ ಪ್ರಾರಂಭಿಸಿದ ಕೆಲದಿನಗಳ ನಂತರ ಬಹುತೇಕ ಚಾಲಕರು ಟಿಪ್ಸ್ ಗಾಗಿ ಕಾಯುವುದರಿಂದ ಆಯಪ್ ಆಧಾರಿತ ಆಟೋ-ರೈಡ್ ಬುಕ್ಕಿಂಗ್ ನಿಧಾನವಾಗಿದೆ ಎಂದು ಪ್ರಯಾಣಿಕರು ದೂರಿದ್ದಾರೆ. ಈ ಹಿಂದೆ ಗರಿಷ್ಠ 30 ರೂ.ಗಳ ಟಿಪ್ಸ್ ತೋರಿಸುತ್ತಿದ್ದ ದರದ ಆಯ್ಕೆಯನ್ನು ಈಗ 50 ರೂ.ಗೆ ಹೆಚ್ಚಿಸಲಾಗಿದೆ ಎಂದು ಹೆಚ್ಚಿನ ಗ್ರಾಹಕರು ಹೇಳಿದ್ದಾರೆ.

ಈ ಕುರಿತು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ಜೊತೆಗೆ ಮಾತನಾಡಿದ ಆಟೋ ರಿಕ್ಷಾ ಚಾಲಕರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ರುದ್ರ ಮೂರ್ತಿ ಇತರ ಆಯಪ್ ಆಧಾರಿತ ಟ್ಯಾಕ್ಸಿ ಸಂಸ್ಥೆಯ ಪ್ರಯಾಣ ದರಗಳಲ್ಲಿ ಶೇ. 20 ರಷ್ಟು ಕಮಿಷನ್ ವಿಧಿಸಬಹುದು. ಆದಾಗ್ಯೂ, ನಮ್ಮ ಯಾತ್ರಿಯು ಡೈರೆಕ್ಟ್-ಟು-ಡ್ರೈವರ್ ಆಯಪ್ ಆಗಿದೆ. ಇದು ಕಮಿಷನ್ ಮತ್ತು ಮಧ್ಯವರ್ತಿಗಳನ್ನು ಸಂಪೂರ್ಣವಾಗಿ ನಿವಾರಿಸುತ್ತದೆ. ಆದ್ದರಿಂದ, ಹೆಚ್ಚುವರಿ ಹಣ ಗಳಿಸಲು ಗ್ರಾಹಕರು ಸಲಹೆಗಾಗಿ ಚಾಲಕರು ಕಾಯುತ್ತಾರೆ; ಮೂಲ ದರಕ್ಕೆ ಟಿಪ್ಸ್ ಸೇರಿಸಿದಾಗ ಚಾಲಕರು ಹೊಸ ದರದ ಬಗ್ಗೆ ಆಪ್ ಡೇಟ್ ಸ್ವೀಕರಿಸಿ ನಂತರ ತೆರಳುತ್ತಾರೆ. ಚಾಲನೆಗೂ ಮುನ್ನಾವೇ ಚಾಲಕರು ಪ್ರಯಾಣಿಕರಿಗೆ ಟಿಪ್ಸ್ ಬಗ್ಗೆ ಮಾಹಿತಿ ನೀಡುತ್ತಾರೆ ಎಂದರು.


ಉದಯವಾಹಿನಿ ಚಿತ್ರ

> **ನಮ್ಮ ಯಾತ್ರಿ ಬಳಕೆದಾರರನ್ನು ಸಂಪರ್ಕಿಸಿದಾಗ, ಬುಕ್ಕಿಂಗ್‌ಗಾಗಿ ಹೆಚ್ಚಿನ ದರ ಪಾವತಿಸಿದರೂ ನಿಧಾನವಾಗುತ್ತಿದೆ. ಆರಂಭದಲ್ಲಿ ಆಯಪ್ ನ ತಾಂತ್ರಿಕ ತೊಂದರೆ ಅಂದುಕೊಂಡಿದ್ದೇವು. ಆದರೆ, 30-50 ರೂ. ಟಿಪ್ ಸೇರಿಸುವವರೆಗೆ ಗ್ರಾಹಕರು ಆಟೋದಲ್ಲಿನ ಪ್ರಯಾಣ ಮಾಡದಂತಾಗಿರುವುದು ಈಗ ಸಾಮಾನ್ಯವಾಗಿದೆ ಎಂದು ಬಳಕೆದಾರರು ಹೇಳಿದ್ದಾರೆ.**

# ತೇಜಸ್ವೀ ಸೂರ್ಯ ಪರ ಅಣ್ಣಾಮಲೈ ಅಬ್ಬರದ ಪ್ರಚಾರ

**ಅಭ್ಯರ್ಥಿ ತೇಜಸ್ವೀ ಸೂರ್ಯ ಪರ ಜಯನಗರ, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಅಬ್ಬರದ ರೋಡ್ ಶೋ ಮತ ಯಾಚನೆ**

• ಉದಯವಾಹಿನಿ, ಬೆಂಗಳೂರು

ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷರು, ಮಾಜಿ ಪೊಲೀಸ್ ಅಧಿಕಾರಿ ಅಣ್ಣಾಮಲೈ ಅವರು ಸೋಮವಾರ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ತೇಜಸ್ವೀ ಸೂರ್ಯ ಪರ ಜಯನಗರ, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಅಬ್ಬರದ ರೋಡ್ ಶೋ ನಡೆಸಿ ಮತ ಯಾಚಿಸಿದರು.

ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ತೇಜಸ್ವೀ ಸೂರ್ಯ, ನವಭಾರತದ ನಿರ್ಮಾಣದಲ್ಲಿ ಯುವಶಕ್ತಿಯ ಪಾತ್ರ ಬಹುದೊಡ್ಡದಿದ್ದು ಅದರಂತೆ ಪ್ರಧಾನಿ ನರೇಂದ್ರಮೋದಿಯವರು ಯುವ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡಿ ಅನೇಕ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಾರೆ. ರಕ್ಷಣಾ ಪಡೆಗಳಲ್ಲಿ ಹೆಣ್ಣು ಮಕ್ಕಳ ಸಂಖ್ಯೆ ಎರಡು ಪಟ್ಟು ಹೆಚ್ಚಿದೆ. ಸರ್ಕಾರದ ಪ್ರೋತ್ಸಾಹದಿಂದ ಯುವಜನರಲ್ಲಿ ಕ್ರೀಡಾಸಕ್ತಿ ಹೆಚ್ಚುತ್ತಿದ್ದು, ವಿವಿಧ ವಲಯಗಳಲ್ಲಿ ತಮ್ಮ ಪ್ರತಿಭೆ, ಸಾಮರ್ಥ್ಯ ತೋರಲು ಸಾಧ್ಯವಾಗಿದೆ. ಖೇಲೋ ಇಂಡಿಯಾ ಕಾರ್ಯಕ್ರಮ ಕ್ರೀಡಾ ವಲಯದಲ್ಲಿ ಬಹು ದೊಡ್ಡ ಬದಲಾವಣೆಯನ್ನು ತಂದಿದ್ದು, ಅಪಾರ ಕ್ರೀಡಾ ಪ್ರತಿಭೆಗಳು ಬೆಳಕಿಗೆ ಬರಲು ಕಾರಣವಾಗಿದೆ. ಒಲಿಂಪಿಕ್ಸ್, ಏಷ್ಯನ್ ಕ್ರೀಡಾಕೂಟ ಸೇರಿದಂತೆ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳಲ್ಲಿ ಭಾರತೀಯ ಕ್ರೀಡಾಪಟುಗಳು ದೊಡ್ಡ ಸಾಧನೆ ಮಾಡುತ್ತಿದ್ದಾರೆ. ಸ್ಕಿಲ್ ಇಂಡಿಯಾ,ಮೇಕ್ ಇನ್ ಇಂಡಿಯಾ, ಫಿಟ್ ಇಂಡಿಯಾ ಸೇರಿದಂತೆ ಅನೇಕ ಕಾರ್ಯಕ್ರಮಗಳಿಂದ ಯುವಜನರ ಸಬಲೀಕರಣವಾಗುತ್ತಿದೆ. ಮೋದಿಯವರು ಯುವಶಕ್ತಿಗೆ ಚೈತನ್ಯ ತುಂಬಿ, ಪ್ರೋತ್ಸಾಹಿಸುತ್ತಲೇ ಬಂದಿದ್ದಾರೆ ಎಂದು ಹೇಳಿದರು. ಶಾಸಕರಾದ ಸಿ.ಕೆ.ರಾಮಮೂರ್ತಿ, ಉದಯ್ ಗರುಡಾಚಾರ್ ಸೇರಿದಂತೆ ಅಪಾರ ಸಂಖ್ಯೆಯ ಬಿಜೆಪಿ-ಜೆಡಿಎಸ್ ಕಾರ್ಯಕರ್ತರು ಪ್ರಚಾರದಲ್ಲಿ ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

> **ಸೂರ್ಯ ರವರ ಕಾರ್ಯವೈಖರಿಯಿಂದ ಅತ್ಯುತ್ತಮ ಯುವ ಸಂಸದ ಗೌರವ ಸಿಕ್ಕಿದ್ದು, ಇಂತಹವರು ಲೋಕಸಭೆಯಲ್ಲಿ ಬೆಂಗಳೂರು ದಕ್ಷಿಣವನ್ನು ಪ್ರತಿನಿಧಿಸಿರುವುದರಿಂದ ಬೆಂಗಳೂರಿಗೆ ಅನೇಕ ಯೋಜನೆಗಳು ಬರಲು ಸಾಧ್ಯವಾಗಿದೆ. ಬೆಂಗಳೂರಿನ ಅಭಿವೃದ್ಧಿಯ ಬಗೆಗೆ ತೇಜಸ್ವೀ ಸೂರ್ಯ ರವರಿಗೆ ಅನೇಕ ಕನಸುಗಳಿವೆ. ನನ್ನ ಸಹೋದರ ತೇಜಸ್ವೀ ಯನ್ನು ಅಧಿಕ ಮತಗಳ ಅಂತರದಿಂದ ಮತ್ತೊಮ್ಮೆ ಗೆಲ್ಲಿಸಿ, ಆಶೀರ್ವದಿಸಿ ಎಂದು ಹೇಳಿದರು**
> -ಅಣ್ಣಾಮಲೈ

> **ಅಣ್ಣಾಮಲೈ ಅವರು ಮಾತನಾಡಿ, ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರ, ತಮಿಳುನಾಡಿನ ಡಿ.ಎಂ.ಕೆ ಸರ್ಕಾರ ಒಂದೇ ನಾಣ್ಯದ ಎರಡು ಮುಖಗಳು. ಭಯೋತ್ಪಾದಕ ಕೃತ್ಯಗಳನ್ನು ಬೆಂಬಲಿಸುವುದು, ಕಾನೂನು ಸುವ್ಯವಸ್ಥೆ ಗಾಳಿಗೆ ತೂರುವುದು, ಸಮಾಜಘಾತುಕ ಶಕ್ತಿಗಳನ್ನು ಪೋಷಿಸುವುದು ಈ ಪಕ್ಷಗಳ ಕಾರ್ಯಸೂಚಿಯಾಗಿದೆ. ತಮಿಳುನಾಡಿನಲ್ಲಿ ಈ ಬಾರಿ ಹೊಸ ಅಲೆ ಸೃಷ್ಟಿಯಾಗಿದ್ದು, ಬಿಜೆಪಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ. ತೇಜಸ್ವೀ ಸೂರ್ಯ ಅವರು ಚಿಕ್ಕ ವಯಸ್ಸಿನಲ್ಲೇ ಸಂಸದರಾಗಿ ಕ್ಷೇತ್ರದಲ್ಲಿ ಜನಪ್ರಿಯತೆ ಗಳಿಸಿಕೊಂಡಿದ್ದಾರೆ. ಬಿಜೆಪಿ ರಾಷ್ಟ್ರೀಯ ಯುವ ಮೋರ್ಚಾ ಅಧ್ಯಕ್ಷರಾಗಿ ಯುವಶಕ್ತಿಗೆ ಸ್ಫೂರ್ತಿ ತುಂಬುತ್ತಿದ್ದಾರೆ.**

**ಬೃಹತ್ ರೋಡ್ ಶೋ**

> **ದಕ್ಷ ಪೊಲೀಸ್ ಅಧಿಕಾರಿಯಾಗಿ ಅಣ್ಣಾಮಲೈ ಅವರು ರಾಜ್ಯದಲ್ಲಿ ಒಳ್ಳೆಯ ಕೆಲಸಗಳನ್ನು ಮಾಡಿ ಜನರ ಪ್ರೀತಿಗಳಿಸಿದ್ದಾರೆ. ಇದೀಗ ರಾಜಕೀಯ ಪ್ರವೇಶಿಸಿ ತಮಿಳುನಾಡಿನಲ್ಲಿ ಡಿಎಂಕೆ ಮತ್ತು ಎದುರಾಳಿ ಪಕ್ಷಗಳಿಗೆ ನಿದ್ದೆಗೆಡಿಸಿದ್ದಾರೆ. ಯುವ ಪ್ರತಿಭೆಗೆ ಬಿಜೆಪಿ ತಮಿಳುನಾಡಿನ ಸಾರಥ್ಯ ನೀಡಿದ್ದು, ರಾಜ್ಯದಲ್ಲಿ ಶ್ರೀ ಅಣ್ಣಾಮಲೈ ಅವರು ಪಕ್ಷವನ್ನು ಬಲಪಡಿಸಿದ್ದಾರೆ ಎಂದು ಹೇಳಿದರು.**
> -ತೇಜಸ್ವೀ ಸೂರ್ಯ

ಅಂತರಾಳದಿಂದ.. EDITORIAL

# ಮಾವೋವಾದ ಒಡ್ಡಿರುವ ಸವಾಲು; ಅಭಿವೃದ್ಧಿಯೇ ಉತ್ತರವಾಗಲಿ


ಉದಯವಾಹಿನಿ ಚಿತ್ರ

ಛತ್ತೀಸಗಢದಲ್ಲಿ ಭದ್ರತಾ ಪಡೆಗಳ ಜೊತೆ ನಡೆದ ಗುಂಡಿನ ಚಕಮಕಿಯಲ್ಲಿ 29 ಮಂದಿ ನಕ್ಸಲೀಯರು ಹತರಾಗಿರುವುದು ಅಲ್ಲಿ ಅವರ ಚಟುವಟಿಕೆಗಳಿಗೆ ದೊಡ್ಡ ಪೆಟ್ಟು, ಈ 29 ಮಂದಿಯಲ್ಲಿ ಮಾವೋವಾದಿಗಳ ಕೆಲವು ಪ್ರಮುಖ ಕಮಾಂಡರ್‌ಗಳೂ ಸೇರಿದ್ದಾರೆ. ಈ ಕಾರ್ಯಾಚರಣೆಯನ್ನು 'ಎನ್‌ಕೌಂಟರ್ ಎಂದು ಕರೆಯಲಾಗಿದೆ. ಆದರೆ ಮಾಮೂಲಿ 'ಎನ್ಕೌಂಟರ್'ಗಳಿಗೆ ಇರುವ ನಕಾರಾತ್ಮಕ ಅರ್ಥವನ್ನು ಇದು ಧ್ವನಿಸುತ್ತದೆಯೇ ಎಂಬುದು ಖಚಿತವಾಗಿಲ್ಲ. ನಕ್ಸಲೀಯರು ಭಾರಿ ಸಂಖ್ಯೆಯಲ್ಲಿ ಹತರಾಗಿರುವುದನ್ನು ಗಮನಿಸಿದರೆ ಭದ್ರತಾ ಪಡೆಗಳಿಂದ ದಾಳಿ ಎದುರಾಗುವ ಮುನ್ಸೂಚನೆ ಅವರಿಗೆ ಇರಲಿಲ್ಲ ಎಂಬುದು ಸ್ಪಷ್ಟವಾಗುತ್ತದೆ. ಭದ್ರತಾ ಪಡೆಯ ಸಿಬ್ಬಂದಿಗೆ ಗಾಯಗಳಾಗಿವೆ. ಮಾವೊವಾದಿಗಳು ಇಷ್ಟು ದೊಡ್ಡ ಸಂಖ್ಯೆಯಲ್ಲಿ ಒಂದೆಡೆ ಸೇರಿದ್ದು ಹಾಗೂ ಭದ್ರತಾ ಪಡೆಯ ಸಿಬ್ಬಂದಿಗೆ ಸುಲಭದ ತುತ್ತಾಗಿದ್ದು ಮಾಮೂಲಿ ಸಂಗತಿ ಅಲ್ಲ. ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಯ ಸಿಬ್ಬಂದಿ ಯಶಸ್ಸು ಸಾಧಿಸಿದ್ದಾರೆ.

> ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಮತ್ತು ಜಿಲ್ಲಾ ಮೀಸಲು ಪಡೆಯ ಸಿಬ್ಬಂದಿ ನಡೆಸಿದ ಕಾರ್ಯಾಚರಣೆಯಲ್ಲಿ ನಕ್ಸಲೀಯರು ಹತರಾಗಿದ್ದಾರೆ. ಖಚಿತ ಗುಪ್ತಚರ ಮಾಹಿತಿ ಆಧರಿಸಿ ಈ ಕಾರ್ಯಾಚರಣೆಯನ್ನು ನಡೆಸಲಾಗಿದೆ ಎಂದು ವರದಿಗಳು ಹೇಳಿವೆ. ಮಾವೊವಾದಿಗಳಿಂದ ಅಪಾರ ಪ್ರಮಾಣದ ಶಸ್ತ್ರಾಸ್ತ್ರ ವಶಪಡಿಸಿಕೊಳ್ಳಲಾಗಿದೆ. ಹೀಗೆ ವಶಪಡಿಸಿಕೊಂಡವುಗಳಲ್ಲಿ ಆಧುನಿಕ ಶಸ್ತ್ರಾಸ್ತ್ರಗಳೂ ಸೇರಿವೆ.

ಈ ಕಾರ್ಯಾಚರಣೆಯ ಯಶಸ್ಸಿನ ಶ್ರೇಯವನ್ನು ಸರ್ಕಾರವು ತನ್ನದಾಗಿಸಿಕೊಂಡಿದೆ. ಈಚಿನ ನೂರು ದಿನಗಳ ಅವಧಿಯಲ್ಲಿ 87 ಮಂದಿ ಮಾವೊವಾದಿಗಳ ಹತ್ಯೆ ಆಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಮುಂದಿನ ಎರಡು ವರ್ಷಗಳಲ್ಲಿ ನಕ್ಸಲ್‌ವಾದವನ್ನು ದೇಶದಿಂದ ಸಂಪೂರ್ಣವಾಗಿ ನಿರ್ಮೂಲಗೊಳಿಸಲಾಗುತ್ತದೆ ಎಂದು ಅವರು ಘೋಷಿಸಿದ್ದಾರೆ. ಎಡಪಂಥೀಯ ತೀವ್ರವಾದವು ಭದ್ರತೆಗೆ ಗಂಭೀರ ಸವಾಲನ್ನು ಒಡ್ಡಿರುವ ರಾಜ್ಯದಲ್ಲಿ, ಲೋಕಸಭಾ ಚುನಾವಣೆಗೆ ಮೊದಲು ನಡೆದ ಈ ಕಾರ್ಯಾಚರಣೆಯು ಸರ್ಕಾರಕ್ಕೆ ಬಲ ತುಂಬುವ ಕೆಲಸ ಮಾಡುತ್ತದೆ. ಸರ್ಕಾರ ತಳೆದ ಆಕ್ರಮಣಶೀಲ ಧೋರಣೆಯ ಪರಿಣಾಮವಾಗಿ ಛತ್ತೀಸಗಢದಲ್ಲಿ ನಕ್ಸಲೀಯರು ಒಂದು ಸಣ್ಣ ಪ್ರದೇಶಕ್ಕೆ ಈಗ ಸೀಮಿತಗೊಂಡಿದ್ದಾರೆ ಎಂದು ಶಾ ಅವರು ಹೇಳಿದ್ದಾರೆ. ಆದರೆ ಇದು ಸಂಪೂರ್ಣ ಸತ್ಯವಲ್ಲ. ಮಹಾರಾಷ್ಟ್ರ, ಆಂಧ್ರಪ್ರದೇಶ, ಛತ್ತೀಸಗಢ, ಜಾರ್ಖಂಡ್, ಒಡಿಶಾ ಮತ್ತು ಪಶ್ಚಿಮ ಬಂಗಾಳದ ಕೆಲವು ಪ್ರದೇಶಗಳಲ್ಲಿ ನಕ್ಸಲೀಯರು ಇಂದಿಗೂ ಗಣನೀಯ ಪ್ರಮಾಣದಲ್ಲಿ ಪ್ರಭಾವ ಹೊಂದಿದ್ದಾರೆ. ಕೆಲವು ಪ್ರದೇಶಗಳಲ್ಲಿ ಸರ್ಕಾರದ ಮಾತಿಗಿಂತ ನಕ್ಸಲೀಯರ ಮಾತು ನಡೆಯುತ್ತಿದೆ. ಭದ್ರತಾ ಸಿಬ್ಬಂದಿಯನ್ನು ಕೊಲ್ಲುವ ಮೂಲಕ ಹಾಗೂ ಆಸ್ತಿಯನ್ನು ಲೂಟಿ ಮಾಡುವ ಮೂಲಕ ನಕ್ಸಲೀಯರು ಪ್ರಭುತ್ವಕ್ಕೆ ನಷ್ಟ ಉಂಟುಮಾಡಿದ್ದಾರೆ.

ದೇಶದ ಮಧ್ಯ ಭಾಗದಲ್ಲಿ ಹಾಗೂ ಪೂರ್ವ ಭಾಗದಲ್ಲಿ ನಕ್ಸಲೀಯರು ತಮ್ಮ ಚಟುವಟಿಕೆಗಳನ್ನು ಕೇಂದ್ರೀಕರಿಸಿದ್ದಾರೆ. ಈ ಭಾಗಗಳಲ್ಲಿ ಬುಡಕಟ್ಟು ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ನೆಲೆ ಕಂಡುಕೊಂಡಿವೆ. ದೇಶದಲ್ಲಿ ಅತ್ಯಂತ ಹೆಚ್ಚು ದೌರ್ಜನ್ಯಕ್ಕೆ ಒಳಗಾಗಿರುವ ಬುಡಕಟ್ಟು ಸಮುದಾಯಗಳ ಬೆಂಬಲಕ್ಕೆ ನಿಲ್ಲುವ ಮೂಲಕ, ಅವರ ಪರವಾಗಿ ಮಾತನಾಡುವ ಮೂಲಕ ನಕ್ಸಲೀಯರು ಆ ಸಮುದಾಯಗಳ ಅನುಕಂಪ ಪಡೆದುಕೊಳ್ಳುವ ಯತ್ನ ನಡೆಸಿದ್ದಾರೆ. ಆದರೆ ಸರ್ಕಾರವು ಅಭಿವೃದ್ಧಿ, ಒಳ್ಳೆಯ ಆಡಳಿತ ಹಾಗೂ ಒಳ್ಳೆಯ ಮನಸ್ಸಿನಿಂದ ಈ ಸಮುದಾಯಗಳಿಗೆ ಹತ್ತಿರವಾಗಲು ಯತ್ನಿಸಿದ ಸಂದರ್ಭಗಳಲ್ಲಿ ನಕ್ಸಲೀಯರು ಇದೇ ಸಮುದಾಯಗಳ ಬೆಂಬಲವನ್ನು ಕಳೆದುಕೊಂಡಿದ್ದೂ ಇದೆ.

ಇದು ಒಂದು ಪಾಠವನ್ನು ಹೇಳುತ್ತಿದೆ. ಅಂದರೆ, ಮಾವೊವಾದಿಗಳನ್ನು ಇಲ್ಲವಾಗಿಸುವ ಮೂಲಕ ಮಾವೊವಾದವನ್ನು ಇಲ್ಲವಾಗಿಸಲು ಆಗದು: ಬದಲಿಗೆ, ಸಮಾಜದ ಕೆಲವು ವರ್ಗಗಳಿಗೆ ಮಾವೊವಾದವು ಆಕರ್ಷಕ ಅನ್ನಿಸುವಂತೆ ಮಾಡುವ ಕಾರಣಗಳನ್ನು ನಿರ್ಮೂಲಗೊಳಿಸಬೇಕು. ಮಾವೊವಾದಿಗಳು ತಮ್ಮಲ್ಲಿ ವಿಕೇಂದ್ರೀಕರಣದ ಮಾದರಿಯನ್ನು ಅಳವಡಿಸಿಕೊಂಡು, ದೇಶದ ಬೇರೆ ಬೇರೆ ಭಾಗಗಳಲ್ಲಿ ಸಣ್ಣ ಸಣ್ಣ ಗುಂಪುಗಳಲ್ಲಿ ಹಂಚಿಹೋಗಿದ್ದಾರೆ. ಇದು ಅವರನ್ನು ಭೌತಿಕವಾಗಿ ಇಲ್ಲವಾಗಿಸುವುದನ್ನು ಬಹಳ ಕಷ್ಟಕರವಾಗಿಸಿದೆ. ಹೀಗಾಗಿ, ಮಾವೊವಾದವನ್ನು ವಿರೋಧಿಸುವ ಕಾರ್ಯತಂತ್ರವು ಬಲಪ್ರಯೋಗಕ್ಕಿಂತ ಮಿಗಿಲಾಗಿ ಅಭಿವೃದ್ಧಿಯ ಕಡೆಗೆ ಹೆಚ್ಚಿನ ಗಮನ ನೀಡಬೇಕು.

# ಮಹಾಭಾರತ

## ಭೀಷ್ಮಪರ್ವ



• ಹಿಂದಿನ ಸಂಚಿಕೆಯಿಂದ

ಬಲ ಮುಂಗಾಲಿನಲ್ಲಿ ಕೃಪ ಮತ್ತು ಅವನ ಸೈನ್ಯ; ಎಡ ಹಿಂಗಾಲಿನಲ್ಲಿ ಶಲ್ಯ; ಬಲ ಹಿಂಗಾಲಿನಲ್ಲಿ ರಾಧೇಯನ ಮಗ ಸುಷೇಣ; ಬಾಲದಲ್ಲಿ ದುರ್ಯೋಧನನ ಕೆಲವು ತಮ್ಮಂದಿರು; ಮಕರದ ಬಾಯಿಯಲ್ಲಿ ಸೇನಾಪತಿ ರಾಧೇಯ– ಹೀಗೆ ವೀರರು ಸ್ಥಾಪಿತರಾದರು.

ಈ ಸೇನೆಯನ್ನು ಕಂಡ ಯುಧಿಷ್ಠಿರನು ''ಅರ್ಜುನ, ರಾಧೇಯನ ಮುಂದಾಳ್ತನದಲ್ಲಿ ಎದುರಾಗಿರುವ ಕೌರವಸೈನ್ಯವನ್ನು ನೋಡು. ಹದಿನಾರು ದಿನಗಳ ಹಿಂದೆ ಭೀಷ್ಮನ ನೇತೃತ್ವದಲ್ಲಿ ಇದೇ ಸೈನ್ಯ ಹೀಗಿದ್ದಿತು! ಈಗಿನ ಈ ಮಕರವ್ಯೂಹ ಹೇಗೆ ಬಡಕಲಾಗಿದೆ! ಇವರದು ಇದು ಎಂತಹ ದುರದೃಷ್ಟ! ಆಕಾಶದಲ್ಲಿನ ಉಲ್ಕೆಗಳಂತೆ ಸಂಚರಿಸುತ್ತಿದ್ದ ಆಗಿನ ವೀರರಲ್ಲಿ ಈ ಗಿನ ಈ ಸೈನ್ಯವೆಲ್ಲಿ ನಕ್ಷತ್ರಗಳ ನಡುವಣ ಚಂದ್ರನಂತೆ ಇರುವ ರಾಧೇಯನಿಗೆ ನಾವು ಅಂಜಬೇಕಾಗಿರುವುದು. ಈ ಒಬ್ಬನನ್ನು ನೀನು ಕೊಂದುಬಿಟ್ಟರೆ, ಜಯವು ನಮ್ಮದೇ'' ಎಂದನು. ಈ ಮಾತಿನ ಸತ್ಯತೆಯನ್ನು ಕಂಡುಕೊಂಡ ಅರ್ಜುನನು ತನ್ನ ಸೈನ್ಯದ ಕಡೆಗೆ ತಿರುಗಿದನು. ಅದೂ ಭೀಷ್ಮ ದ್ರೋಣ ಅಶ್ವತ್ಥಾಮರ ಕೈಯಲ್ಲಿ ಸಿಕ್ಕು ದುರ್ಬಲವಾಗಿರುವಂಥದೇ. ಅದನ್ನು ಅರ್ಧಚಂದ್ರವ್ಯೂಹದಲ್ಲಿ ನಿಲ್ಲಿಸಿದ. ವ್ಯೂಹದ ಎಡತುದಿಯಲ್ಲಿ ಭೀಮನೂ, ಬಲತುದಿಯಲ್ಲಿ ಧೃಷ್ಟದ್ಯುಮ್ನನೂ, ಮಧ್ಯದಲ್ಲಿ ಅರ್ಜುನನೂ, ಅವನ ಹಿಂದೆ ಯುಧಿಷ್ಠಿರ ನಕುಲಸಹದೇವರೂ ನಿಂತರು. ಅರ್ಜುನನ ರಥಚಕ್ರಗಳ ರಕ್ಷಣೆಯನ್ನು ಎಂದಿನಂತೆ ಯುಧಾಮನ್ಯು ಉತ್ತಮೌಜಸರು ವಹಿಸಿಕೊಂಡರು. ಉಳಿದವರಲ್ಲ ಚಂದ್ರನ ಇನ್ನಿತರ ಭಾಗಗಳಲ್ಲಿ ನಿಂತರು. ಕಹಳೆ ಭೇರಿಗಳು ಮೊಳಗಿದವು: ಎರಡೂ ಸೈನ್ಯಗಳು ಒಂದರ ಮೇಲೊಂದು ಬಿದ್ದವು. ದೃಶ್ಯವು ಹೆಚ್ಚುಕಡಿಮೆ ಮೊದಲನೆಯ ದಿನದಂತೆಯೇ ಇದ್ದಿತ್ತು; ದ್ರೋಣನ ಬೇಕಾಬಿಟ್ಟಿತನ ಇರಲಿಲ್ಲ. ಎಲ್ಲರಿಗೂ ಭೀಷ್ಮನ ನಾಯಕತ್ವದ ನೆನಪಾಯಿತು. ಮುಂಚೂಣಿಯಲ್ಲಿ ವೀರನಾದ ರಾಧೇಯನನ್ನು ಕಂಡ ಕೌರವರಿಗೆ ಭೀಷ್ಮದ್ರೋಣರ ನಷ್ಟವನ್ನು ಮರೆಯುವುದು ಸಾಧ್ಯವಾಯಿತು. ಮೊದಲೇ ಭೀಮನು ಅಹಂಕಾರಿಯಾದ ಕ್ಷೇಮಧೃತಿಯೆಂಬ ರಾಜನನ್ನು ಕೊಂದ. ರಾಧೇಯನು ಪಾಂಡವಸೈನ್ಯದೊಳಕ್ಕೆ ನುಗ್ಗಿ ಕೊಲ್ಲಲಾರಂಭಿಸಲು, ನಕುಲ ಅವನನ್ನೆದುರಿಸಿದ. ಭೀಮ ಅಶ್ವತ್ಥಾಮರು ದ್ವಂದ್ವಯುದ್ಧದಲ್ಲಿ ನಿರತರಾದರು. ಸಾತ್ಯಕಿ ಕೇಕೆಯ ಸೋದರರಾದ ವಿಂದಾನುವಿಂದರನ್ನು ಎದುರಿಸಿ ಭೀಕರ ಹೋರಾಟದ ನಂತರ ಕೊಂದ. ದುರ್ಯೋಧನನು ಯುಧಿಷ್ಠಿರನನ್ನು ಎದುರಿಸಿದ. ಸಂಶಪ್ತಕರ ಅಳಿದುಳಿದ ಸೈನ್ಯವು ಅರ್ಜುನನನ್ನೆದುರಿಸಿತು. ಕೃಪನು ಧೃಷ್ಟದ್ಯುಮ್ನನನ್ನೂ ಶಿಖಂಡಿಯು ಕೃತವರ್ಮನನ್ನೂ ಶ್ರುತಕೀರ್ತಿಯು ಶಲ್ಯನನ್ನೂ ಸಹದೇವನು ದುಶ್ಶಾಸನನನ್ನೂ ಎದುರಿಸಿ ಹೋರಾಡಿದರು. ದ್ರೌಪದಿಯ ಮಕ್ಕಳೂ ಉತ್ತಮವಾಗಿ ಯುದ್ಧಮಾಡುತ್ತಿದ್ದರು.ಅಶ್ವತ್ಥಾಮನು ಭೀಮನಿಂದ ಪೆಟ್ಟುತಿಂದು ಒರಗಲು, ಅವನ ಸಾರಥಿಯು ಅವನನ್ನು ರಣರಂಗದಿಂದ ಹೊರಕ್ಕೆ ಕರೆದೊಯ್ಯಬೇಕಾಯಿತು. ಶಲ್ಯನು ಶ್ರುತಕೀರ್ತಿಯನ್ನೂ, ಸಹದೇವನು ದುಶ್ಶಾಸನನನ್ನು ಸೋಲಿಸಿದರು.

ಮುಂದುವರಿಯುವುದು...


# ಯಾವ ಪಕ್ಷದ ಪ್ರತಿನಿಧಿ

• ಉದಯವಾಹಿನಿ, ವಿಶೇಷ


*ಸಹಿಸುತಲಿ ಸಮಸ್ಯೆಯನು ದಿನನಿತ್ಯದಿ ಜನರೆಲರು*
*ಕಹಿಯನೆಲ ಮರೆಯುತಲಿ ಬಾಳಿನಲಿಯೆ*
*ಮಹಿಮೆಯನು ತೋರಿರೆಲ ಮತದಾನ ಮಾಡುತಲಿ*
*ಗಹಿಸುತಲೆ ನಾಯಕನ ಲಕ್ಷ್ಮಿ ದೇವಿ........*

ಈ ಮೇಲಿನ ಮುಕ್ತಕದಂತೆ ಜನರೆಲ್ಲ ಬಹಳಷ್ಟು ಕಷ್ಟಗಳನ್ನು ಎದುರಿಸುತ್ತಾ ದಿನನಿತ್ಯ ಹಲವಾರು ಸಮಸ್ಯೆಗಳನ್ನು ಎದುರಿಸುತ್ತ ಎಷ್ಟೇ ಕಷ್ಟ ಬಂದರೂ ಮರೆಯುತಲಿ ಮತದಾನ ಮಾಡುತ್ತಿದ್ದಾರೆ . ಏಕೆಂದರೆ ಮತದಾನ ನಮ್ಮ ಹಕ್ಕು ಎಂಬ ಕಾಳಜಿಯಿಂದ ತಮ್ಮ ನಾಯಕನನ್ನು ಆಯ್ಕೆ ಮಾಡುವುದರ ಮುಖಾಂತರ ತಮ್ಮ ಹಕ್ಕನ್ನು ಬಳಸಿತ್ತಾರೆ . ಗಟ್ಟಿಯಾದ ಧ್ವನಿಯಲ್ಲಿ ನಾಯಕರನ್ನು ಆಯ್ಕೆ ಮಾಡುತ್ತಿದ್ದಾರೆ. ಆದರೂ ಸಹ ಆಯ್ಕೆಯಾದ ನಂತರದಲ್ಲಿ ಯಾವ ರೀತಿಯಾಗಿ ಪಕ್ಷದ ಪ್ರತಿ ನಿಧಿಯಾಗಿ ಕಾರ್ಯ ನಿರ್ವಹಿಸುತ್ತಾರೆ ಎಂಬ ಗೊಂದಲದಲ್ಲಿ ಜನರು ಜೀವಿಸುವಂತಹ ಪರಿಸ್ಥಿತಿಯನ್ನು ತರುತ್ತಿದ್ದಾರೆ. ರಾಜಕಾರಣಿಗಳಲ್ಲಿ ಹಲವಾರು ಸಂಘಗಳನ್ನು ಮಾಡಿಕೊಂಡು ಪಕ್ಷಗಳನ್ನು ಕಟ್ಟಿಕೊಂಡು ಪಕ್ಷದ ಪರ ಕೆಲಸ ಮಾಡುತ್ತಾರೆ. ಚುನಾವಣೆ ಬಂತೆಂದರೆ ಸಾಕು. ಅವರ ವರ್ತನೆಯು ಬದಲಾಗಿ ಹೋಗಿರುತ್ತದೆ.

ಎಲ್ಲಿಲ್ಲದ ಪ್ರೀತಿ ಉಕ್ಕಿ ಉಕ್ಕಿ ಹರಿಯುತ್ತದೆ. ಕುಟುಂಬಗಳ ಮೇಲೆ ಅಪಾರವಾದ ಕಾಳಜಿ ಮೂಡುತ್ತದೆ. ಮನೆಯ ಪ್ರತಿಯೊಬ್ಬ ಸದಸ್ಯರನ್ನು ಯೋಗ ಕ್ಷೇಮ ಕೇಳುವುದೇನು ಅವರ ಆಗುಹೋಗುಗಳನ್ನು ಕೇಳುವುದೇನು ಹೀಗೆ ಹಲವಾರು ವಿಚಾರಗಳಲ್ಲಿ ಮುಂದೆ ಇರುತ್ತಾರೆ. ಒಮ್ಮೆ ಚುನಾವಣೆ ಮುಗಿಯತ್ತೆಂದರೆ ತಿರುಗಿಯೂ ಸಹ ನೋಡದ ಜನರವರು. ಇದು ಹೀಗೆ ಹೇಳುತ್ತಿದ್ದೇನೆ ಎಂದು ಕೊಳ್ಳಬೇಡಿ. ಇದು ಪ್ರಸ್ತುತ ದಿನದಲ್ಲಿ ನಡೆಯುತ್ತಿರುವುದೇ ಅದನ್ನು ದೂರದರ್ಶನದಲ್ಲಿ ದಿನನಿತ್ಯ ನೋಡುತ್ತಿದ್ದೇವೆ. ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಕಾರ ನೀಡದವರು ಅವರು. ಯಾರು ಇಲ್ಲದ



> ಹಕ್ಕು ಕಾಳಜಿಯಿಂದ ನಾಯಕ ಆಯ್ಕೆ



ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

ಕುಟುಂಬಗಳಲ್ಲಿ ಬೇಕಾದ ಸೌಲಭ್ಯಗಳನ್ನು ಒದಗಿಸಲಾಗದಂತಹ ರಾಜಕಾರಣಿಗಳಿದ್ದಾರೆ. ಆದರೂ ಸಹ ಅವರು ತಮ್ಮದೇ ಆದಂತಹ ಹೋರಾಟದಲ್ಲಿ ರಾಜಕಾರಣದಲ್ಲಿ ಮುಳುಗಿರುತ್ತಾರೆ. ಪಕ್ಷದ ಪರವಾಗಿ ಪ್ರಚಾರವನ್ನು ಮಾಡಲು ಹೋರಾಟವನ್ನು ಮಾಡುತ್ತಿರುತ್ತಾರೆ. ಇಷ್ಟು ದಿವಸ ಪಕ್ಷದ ಪ್ರಚಾರಗಳಲ್ಲಿ ಕಳೆಯುತ್ತಿದ್ದ ಜನರು ಈಗ ಯಾವ ಪಕ್ಷದ ಪ್ರತಿನಿಧಿ ಗೆದ್ದರೆ ಹೇಗೆ ನಿಭಾಯಿಸುತ್ತಾರೆ ಎಂಬ ಗೊಂದಲದಲ್ಲಿ ಜನರು ಇದ್ದಾರೆ . ದಿನನಿತ್ಯ ಅಬ್ಬರದ ಪ್ರಚಾರದಲ್ಲಿ ತೊಡಗಿದ್ದ ಜನರೆಲ್ಲ ಚುನಾವಣೆಯ ತಾರೀಖು ಮುಗಿದ ನಂತರದಲ್ಲಿ ಅಂತಿಮ ಕ್ಷಣಗಣನೆ ಯಾವ ಸರ್ಕಾರದ ಪ್ರತಿನಿಧಿ ಬರುವುದು ಎಂಬ ಚಿಂತೆಯಲ್ಲಿ ತಾರೀಖಿಗಾಗಿ ಕಾಯುತ್ತಿದ್ದಾರೆ. ಪಕ್ಷದ ಗೆಲುವಿಗಾಗಿ ಮನೆಯ ಕೆಲಸಗಳನ್ನೆಲ್ಲ ಬಿಟ್ಟು ಪಕ್ಷದ ಹೋರಾಟವನ್ನು ಮಾಡುತ್ತಾ ಅವರವರ ಪಕ್ಷಗಳ ಪರವಾಗಿಯೇ ಗುಂಪು ಸಂಘಗಳನ್ನು ಮಾಡಿಕೊಂಡು ಪಕ್ಷಗಳಿಗೆ ಬೆಂಬಲವನ್ನು ನೀಡುತ್ತಾ ಎಲ್ಲೆಡೆಯೂ ಅಬ್ಬರದ ಪ್ರಚಾರವನ್ನು ಮಾಡುತ್ತಿದ್ದಾರೆ . ಎಷ್ಟೋ ಆಮಿಷ, ಭರವಸೆ ಕೊಡುತ್ತಿದ್ದಾರೆ. ಕೆಲವರು ತಾವೇ ಪಕ್ಷದ ಪ್ರತಿನಿಧಿ ಎಂಬಂತೆ ಅಬ್ಬರದ ಪ್ರಚಾರದಲ್ಲಿ ತೊಡಗುತ್ತಿದ್ದಾರೆ.

ಮುಂದುವರೆಯುವುದು.....

# ವೈದ್ಯರ ನಿರ್ಲಕ್ಷ್ಯ ಆರೋಪ ಪ್ರಕರಣ ದಾಖಲಿಸಿಕೊಳ್ಳದ ಪೊಲೀಸರು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

'ಹಲ್ಲು ನೋವಿನ ಚಿಕಿತ್ಸೆಗೆಂದು ಆಸ್ಪತ್ರೆಗೆ ಹೋಗಿದ್ದ ವ್ಯಕ್ತಿಯೊಬ್ಬರು ವೈದ್ಯರ ನಿರ್ಲಕ್ಷ್ಯದಿಂದ ಮೃತಪಟ್ಟಿದ್ದು, ಈ ಬಗ್ಗೆ ದೂರು ನೀಡಿದರೂ ಪೊಲೀಸರು ಪ್ರಕರಣ ದಾಖಲಿಸಿಕೊಳ್ಳುತ್ತಿಲ್ಲ' ಎಂದು ಆರೋಪಿಸಿ ಸುಬ್ರಹ್ಮಣ್ಯನಗರ ಠಾಣೆ ಎದುರು ಮೃತದೇಹ ಇರಿಸಿ ಸಂಬಂಧಿಕರು ಪ್ರತಿಭಟನೆ ನಡೆಸುತ್ತಿದ್ದಾರೆ.

ಸುಬ್ರಮಣ್ಯ ನಗರದ ಕುಮಾರ್ (55) ಹಲ್ಲು ನೋವಿನ ಚಿಕಿತ್ಸೆಗೆಂದು ಇತ್ತೀಚೆಗೆ ಆಸ್ಪತ್ರೆಯೊಂದಕ್ಕೆ ಹೋಗಿದ್ದರು. ತಪಾಸಣೆ ನಡೆಸಿದ್ದ ವೈದ್ಯ, ಹಲ್ಲು ನೋವಿಗೆ ಚಿಕಿತ್ಸೆ ಕೊಟ್ಟು ಕಳುಹಿಸಿದ್ದರು. ಮರುದಿನವೇ ಮುಖ ಊದಿಕೊಂಡಿತ್ತು. ಕಣ್ಣಿಗೂ ಹಾನಿಯಾಗಿತ್ತು' ಎಂದು ಸಂಬಂಧಿಕರೊಬ್ಬರು ಹೇಳಿದರು. ಮುಖ ಊದಿಕೊಂಡಿದ್ದರಿಂದ ಕುಮಾರ್ ಅವರನ್ನು ಬೇರೊಂದು ಆಸ್ಪತ್ರೆಗೆ ಚಿಕಿತ್ಸೆಗೆಂದು ಕರೆದೊಯ್ಯಲಾಗಿತ್ತು. ಆರೋಗ್ಯ ತೀವ್ರ ಹದಗೆಟ್ಟಿದ್ದರಿಂದ ಕುಮಾರ್ ಅವರನ್ನು ತೀವ್ರ ನಿಗಾ ಘಟಕದಲ್ಲಿ ಇರಿಸಿ ಚಿಕಿತ್ಸೆ ನೀಡಲಾಗುತ್ತಿತ್ತು. ದಂತ ವೈದ್ಯರ ನಿರ್ಲಕ್ಷ್ಯದಿಂದ ಜೀವಕ್ಕೆ ಅಪಾಯ ಉಂಟಾಗಿರುವುದಾಗಿ ವೈದ್ಯರು ಹೇಳಿದ್ದರು.

> ತೀವ್ರ ನಿಗಾ ಘಟಕದಲ್ಲಿದ್ದ ಕುಮಾರ್ ನೀಡಿದ್ದ ಹೇಳಿಕೆ ಆಧರಿಸಿ ದೂರು ದಾಖಲಿಸಿಕೊಳ್ಳುವಂತೆ ಪೊಲೀಸರನ್ನು ಕೋರಲಾಗಿತ್ತು. ಆದರೆ, ಪೊಲೀಸರು ಯಾವುದೇ ಕ್ರಮ ಕೈಗೊಳ್ಳಲಿಲ್ಲ. ತಪ್ಪಿತಸ್ಥ ಪೊಲೀಸರನ್ನು ಅಮಾನತು ಮಾಡಬೇಕು' ಎಂದು ಸಂಬಂಧಿಕರು ಆಗ್ರಹಿಸಿದರು.

ಹೀಗಾಗಿ, ದಂತ ವೈದ್ಯರ ವಿರುದ್ಧ ದೂರು ನೀಡಲು ಠಾಣೆಗೆ ಹೋಗಿದ್ದೆವು' ಎಂದು ತಿಳಿಸಿದರು. ಸುಬ್ರಹ್ಮಣ್ಯನಗರ ಠಾಣೆಯ ಪೊಲೀಸರು, ವೈದ್ಯರ ವಿರುದ್ಧ ದೂರು ಪಡೆಯಲು ನಿರಾಕರಿಸಿದರು. ಯಾವುದೇ ಪ್ರತಿಕ್ರಿಯೆ ಸಹ ನೀಡಲಿಲ್ಲ. 10 ದಿನ ತೀವ್ರ ನಿಗಾ ಘಟಕದಲ್ಲಿದ್ದ ಕುಮಾರ್ ಅವರು ಸೋಮವಾರ ಮೃತಪಟ್ಟಿದ್ದಾರೆ. ಹೀಗಾಗಿ, ಮೃತದೇಹವನ್ನು ಠಾಣೆಗೆ ಬಳಿ ತಂದು ಪ್ರತಿಭಟನೆ ನಡೆಸುತ್ತಿದ್ದೇವೆ' ಎಂದು ಹೇಳಿದರು.

# ಮತದಾನದ ದಿನ ಪೊಲೀಸರ ಕರ್ತವ್ಯಗಳೇನು

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಲೋಕಸಭೆ ಚುನಾವಣೆ 2024ರ ಮತದಾನಕ್ಕೆ ಅಂತಿಮ ಹಂತದ ಸಿದ್ಧತೆಗಳು ನಡೆಯುತ್ತಿವೆ. ಏಪ್ರಿಲ್ 26 ಮತ್ತು ಮೇ 7ರಂದು ಎರಡು ಹಂತದಲ್ಲಿ ಮತದಾನ ನಡೆಯಲಿದೆ. ಪೊಲೀಸರು ಈಗಾಗಲೇ ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡಿದ್ದಾರೆ.

ಕರ್ನಾಟಕದ ಪೊಲೀಸ್ ಇಲಾಖೆ ಲೋಕಸಭಾ ಚುನಾವಣೆ–2024ರ ಚುನಾವಣಾ ಕರ್ತವ್ಯ ನಿರತ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕರ್ತವ್ಯದ ಮಾರ್ಗಸೂಚಿಯ ಬಗ್ಗೆ ಕೈಪಿಡಿ ಮೂಲಕ ಮಾಹಿತಿ ನೀಡಿದೆ.

ನೀತಿ ಸಂಹಿತೆ ಜಾರಿಯಲ್ಲಿರುವ ತನಕ ಪೊಲೀಸರು ಚುನಾವಣಾ ಆಯೋಗದ ಸೂಚನೆಯಂತೆ ಕಾರ್ಯ ನಿರ್ವಹಣೆ ಮಾಡಲಿದ್ದಾರೆ.


ಉದಯವಾಹಿನಿ ಚಿತ್ರ

ಚುನಾವಣಾ ಕರ್ತವ್ಯ ನಿರ್ವಹಿಸುವ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕಿರು ಕೈಪಿಡಿಯನ್ನು ವಿತರಿಸಿ ಸೂಕ್ತ ತಿಳುವಳಿಕೆಯನ್ನು ನೀಡಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ. ಮತದಾನದ ದಿನ ಪೊಲೀಸರ ಕರ್ತವ್ಯ, ಜವಾಬ್ದಾರಿಗಳು ಏನು ಎಂದು ವಿವರ ನೀಡಲಾಗಿದೆ.

## ಮತದಾನದ ದಿನ ಪೊಲೀಸರ ಕರ್ತವ್ಯಗಳು

- ಪ್ರಿಸೈಡಿಂಗ್ ಆಫೀಸರ್ (ಓಟು ಹಾಕುವ ಜಾಗದ ಮುಖ್ಯಾಧಿಕಾರಿ) ಮತಗಟ್ಟೆ ಒಳಗೆ ಕರೆದಾಗ ಮಾತ್ರ ಹೋಗಬೇಕು.
- ಪ್ರಿಸೈಡಿಂಗ್ ಆಫೀಸರ್ ಮತಗಟ್ಟೆ ಒಳಗೆ ಕರೆದರೆ ಮಾತ್ರ ಓಟು ಹಾಕಲು ಬಂದ ಜನರನ್ನು ಸರಿಯಾದ ಸ್ಥಳದಲ್ಲಿಯೇ ಸಾಲಾಗಿ, ಶಾಂತ ರೀತಿಯಿಂದ ನಿಲ್ಲುವಂತೆ ತಿಳಿಸಿ ಒಳಗೆ ಹೋಗಬೇಕು.
- ಓಟು ಹಾಕುವ ಜಾಗದಿಂದ 100 ಮೀಟರ್ ಒಳಗಿನ ಜಾಗದಲ್ಲಿ ಪ್ರಿಸೈಡಿಂಗ್ ಆಫೀಸರ್ ಹಾಕಿದ ಬೋರ್ಡ್‌ಗಳು ಮತ್ತು ಸೂಚನೆಗಳನ್ನು ಬಿಟ್ಟು ಬೇರೆ ಇನ್ನಾವ ಸೂಚನೆಗಳು ಇರದಂತೆ ನೋಡಿಕೊಳ್ಳಬೇಕು. ಅಲ್ಲದೆ ಓಟು ಹಾಕುವ ಜಾಗದಿಂದ ಸುತ್ತಲೂ 100 ಮೀಟರ್ ಗುರುತು ಮಾಡಿಸಬೇಕು.
- ಓಟು ಹಾಕುವವರನ್ನು ವಾಹನಗಳಲ್ಲಿ ಕರೆತರುವುದನ್ನಾಗಲಿ ಅಥವಾ ಅವರಿಗೆ ಅಭ್ಯರ್ಥಿಗಳು ಹಣ, ಉಡುಗೊರೆ ಕೊಡುವುದನ್ನು ತಡೆಯಿರಿ. ಅಲ್ಲದೆ ಇದರ ಬಗ್ಗೆ ಪೂರ್ಣ ವಿವರಗಳನ್ನು ಮೊಬೈಲ್ ಪಾರ್ಟಿಯ ಮೂಲಕ ಠಾಣೆಗೆ ತಿಳಿಸಿ.
- ಓಟು ಹಾಕುವ ಸ್ಥಳದಲ್ಲಾಗಲಿ ಅಥವಾ ಅದರ ಸುತ್ತಮುತ್ತಲಿನ ಸ್ಥಳದಲ್ಲಾಗಲಿ ಯಾರೂ ಅಸಭ್ಯತನದಿಂದ ವರ್ತಿಸದಂತೆ ನೋಡಿಕೊಳ್ಳಬೇಕು. ಓಟು ಹಾಕಲಿಕ್ಕೆ ಹೋಗುವವರನ್ನು ಸಾಲಾಗಿ ನಿಲ್ಲಿಸಬೇಕು.
- ಪ್ರಿಸೈಡಿಂಗ್ ಆಫೀಸರ್ ಯಾರನ್ನಾದರೂ ಬಂಧಿಸಬೇಕೆಂಬ ಆದೇಶ ನೀಡಿದರೆ ಅವರನ್ನು ದಸ್ತಗಿರಿ ಮಾಡಬೇಕು.
- ಓಟು ಹಾಕುವ ಜಾಗದಲ್ಲಿ ನಡೆದ ಪ್ರತಿಯೊಂದು ವಿಷಯವನ್ನೂ ಅಲ್ಲಿಗೆ ಬರುವ ಮೊಬೈಲ್ ಪಾರ್ಟಿಗೂ ಮತ್ತು ಇತರ ಉನ್ನತ ಅಧಿಕಾರಿಗಳಿಗೂ ತಿಳಿಸಬೇಕು.
- ಗಲಾಟೆಯಾಗುವ ಸೂಚನೆಗಳು ಕಂಡು ಬಂದರೆ ತಕ್ಷಣವೇ ಪೊಲೀಸ್ ಠಾಣೆಗೆ ಅಥವಾ ಮೊಬೈಲ್ ಪಾರ್ಟಿ ಅಧಿಕಾರಿಗೆ ವರ್ತಮಾನ ಮುಟ್ಟಿಸಬೇಕು.
- ಮತದಾರರು ಯಾವುದೇ ತರಹದ ವಾಹನಗಳನ್ನು ಮತಗಟ್ಟೆಗಳವರೆಗೆ ತರದಂತೆ ನೋಡಿಕೊಳ್ಳಬೇಕು. ಆದರೆ ಚುನಾವಣೆ ಪರವಾನಗಿ ಇರುವ ವಾಹನ, ಅವಶ್ಯ ಸೇವೆಯಲ್ಲಿರುವ ವಾಹನ, ಪೊಲೀಸ್, ದುರ್ಬಲ ಹಾಗೂ ನಿಶ್ಯಕ್ತರಾದವರನ್ನು ಕರೆದೊಯ್ಯುವ ವಾಹನಗಳನ್ನು ಮತಗಟ್ಟೆಗಳವರೆಗೆ ಬಿಡಬಹುದು.
- ಓಟು ಹಾಕುವುದು ನಿಂತ ಮೇಲೆ ಓಟಿನ ಪೆಟ್ಟಿಗೆಗಳನ್ನು ಪ್ರಿಸೈಡಿಂಗ್ ಆಫೀಸರ್ ಅವರ ಕೇಂದ್ರ ಕಛೇರಿಯಲ್ಲಿ ಇಡುವವರೆಗೆ, ಅವರ ಜೊತೆಯಲ್ಲಿಯೇ ಇರಬೇಕು. ಓಟಿನ ಮತ ಪೆಟ್ಟಿಗೆಗಳ ರಕ್ಷಣೆಯೇ ನಿಮ್ಮ ಆದ್ಯ ಕರ್ತವ್ಯ ಎಂಬುದನ್ನು ಮರೆಯಬಾರದು.

# ಲವ್ ಜಿಹಾದ್ ಹೆಸರಿನಲ್ಲಿ ಹಿಂದೂ ಯುವತಿಯ ಬರ್ಬರ ಹತ್ಯೆ

• ಉದಯವಾಹಿನಿ, ಬೆಂಗಳೂರು

ದಿನಾಂಕ 18 ಏಪ್ರಿಲ್ ರಂದು ಹುಬ್ಬಳ್ಳಿಯ ಕಾಲೇಜಿನಲ್ಲಿ ಎಮ್ ಸಿ ಎ ವಿದ್ಯಾರ್ಥಿನಿ ನೇಹಾ ಹಿರೇಮಠ ಇವರನ್ನು ಫಯಾಜ್ ಎಂಬುವವನು ಕಾಲೇಜು ಕ್ಯಾಂಪಸ್‌ನಲ್ಲಿ ಬರ್ಬರವಾಗಿ ಹತ್ಯೆ ಮಾಡಿದ ಘಟನೆಯನ್ನು ಖಂಡಿಸಿ ಇಂತಹ ಲವ್ ಜಿಹಾದ್ ಘಟನೆಗಳ ಮೇಲೆ ಗಂಭೀರ ಮತ್ತು ಶಾಶ್ವತ ಪರಿಹಾರ ಕಂಡುಹಿಡಿಯಬೇಕು ಮತ್ತು ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ಸಮಸ್ತ ಹಿಂದೂ ಸಂಘಟನೆಗಳಿಂದ ಬೆಂಗಳೂರಿನಲ್ಲಿ ಮಾನ್ಯ ರಾಜ್ಯಪಾಲರ ಕಚೇರಿಯಲ್ಲಿ ಮನವಿ ನೀಡಲಾಯಿತು. ಈ ವೇಳೆ ಹಿಂದೂ ಜನಜಾಗೃತಿ ಸಮಿತಿಯ ಶ್ರೀ. ಶರತ್ ಕುಮಾರ್, ರಾಷ್ಟ್ರೀಯ ಹಿಂದೂ ಪರಿಷತ್ ನ ರಾಜ್ಯಾಧ್ಯಕ್ಷರಾದ ಶ್ರೀ. ಸುರೇಶ್ ಗೌಡ, ದುರ್ಗಾ ಸೇನೆಯ ಬೆಂಗಳೂರು ಜಿಲ್ಲಾಧ್ಯಕ್ಷರಾದ ಭವ್ಯ, ಶ್ರೀರಾಮ ಸೇನೆಯ ಬೆಂಗಳೂರು ಜಿಲ್ಲಾಧ್ಯಕ್ಷರಾದ ಶ್ರೀ. ಎಸ್. ಭಾಸ್ಕರನ್, ಹಿಂದೂ ಮುಖಂಡರಾದ ಶ್ರೀ. ಅಮರನಾಥ್ ಮತ್ತಿತರರು ಉಪಸ್ಥಿತರಿದ್ದರು.

ಈ ಸಂಧರ್ಭದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ಶ್ರೀ. ಶರತ್ ಕುಮಾರ್ ಇವರು ಮಾತನಾಡಿ, ಈ ಹಿಂದೆ ದೆಹಲಿಯಲ್ಲಿ ಶ್ರದ್ಧಾ ವಾಲ್ಕರ್ ಎಂಬ ಯುವತಿಯನ್ನು ಇದೇ ರೀತಿಯಲ್ಲಿ ಬರ್ಬರವಾಗಿ ಹತ್ಯೆ ಮಾಡಿದ್ದರು. ಇಂದು ಲವ್ ಜಿಹಾದ್ ಹೆಸರಿನಲ್ಲಿ ಕಾಲೇಜು ಹಿಂದೂ ಯುವತಿಯರನ್ನು ನಕಲಿ ಪ್ರೇಮದ ಜಾಲದಲ್ಲಿ ಸಿಲುಕಿಸಿ, ಅವರನ್ನು ಇಸ್ಲಾಂಗೆ ಮತಾಂತರ ಮಾಡುವ ಅಥವಾ ಅವರನ್ನು ಬರ್ಬರವಾಗಿ ಹತ್ಯೆ ಮಾಡುವ ಘಟನೆ ಯಥೇಚ್ಚವಾಗಿ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಿರಂತರವಾಗಿ ನಡೆಯುತ್ತಿದೆ. ಈ ಘಟನೆಗಳು ಅತ್ಯಂತ ಗಂಭೀರವಾಗಿದೆ.


ಉದಯವಾಹಿನಿ ಚಿತ್ರ

ಇದರ ಹಿಂದೆ ವ್ಯವಸ್ಥಿತ ಜಿಹಾದಿ ಮತಾಂಧರ ಗ್ಯಾಂಗ್ ಕೆಲಸ ಮಾಡುತ್ತಿದ್ದು, ಇದು ದೇಶದ ಭದ್ರತೆಗೆ ಅತ್ಯಂತ ಅಪಾಯಕಾರಿಯಾಗಿದೆ. ಆದರೆ ಕರ್ನಾಟಕ ಸರಕಾರವು ಇದನ್ನು ವೈಯಕ್ತಿಕ ಕಾರಣದ ನೆಪವೊಡ್ಡಿ ಪ್ರಕರಣವನ್ನು ದುರ್ಲಕ್ಷ್ಯ ಮಾಡುವುದು ಗಮನಕ್ಕೆ ಬರುತ್ತಿದೆ. ಇದರಿಂದ ಈ ಘಟನೆಗಳು ಪುನಃ ಪುನಃ ಮರುಕಳುಸುತ್ತಿದೆ. ಹಾಗಾಗಿ ಈ ರೀತಿ ಲವ್ ಜಿಹಾದ್ ಘಟನೆಯಲ್ಲಿ ಭಾಗಿಯಾದ ಅಪರಾಧಿಗಳು, ಅದಕ್ಕೆ ಕುಮ್ಮಕ್ಕು ನೀಡುವವರು ಹಾಗೂ ಆರ್ಥಿಕ ಸಹಾಯ ಮಾಡುವವರ ಕೂಲಂಕುಷವಾದ ತನಿಖೆಯನ್ನು ಮಾಡಬೇಕು, ಇಂತಹ ಲವ್ ಜಿಹಾದ್ ಘಟನೆಗಳಲ್ಲಿ ಸಿಲುಕಿಕೊಂಡ ಯುವತಿಯರಿಗೆ ಈ ಪ್ರಸಂಗದಿಂದ ಹೊರಬರಲು ಸರಕಾರವು ವಿಶೇಷ ಪೋಲಿಸ್ ಸಹಾಯ ಕೊಠಡಿಯನ್ನು ತೆರೆಯಬೇಕು ಮತ್ತು ಈ ಎಲ್ಲಾ ಪ್ರಕರಣಗಳನ್ನು ತನಿಖೆ ಮಾಡಲು ವಿಶೇಷ ತನಿಖಾದಳವನ್ನು ಸ್ಥಾಪನೆ ಮಾಡಬೇಕು' ಎಂದು ಆಗ್ರಹಿಸಿದರು. ಹೀಗೆ ರಾಜ್ಯದಲ್ಲಿ ಮತಾಂಧ ಜಿಹಾದಿಗಳಿಂದ ಅಮಾಯಕ ಹಿಂದೂಗಳ ಮೇಲೆ ಆಕ್ರಮಣಗಳ ಪ್ರಮಾಣ ಹೆಚ್ಚಾಗಿದೆ. ರಾಜ್ಯದಲ್ಲಿ ಗೂಂಡಾಗಳ ಆಡಳಿತ ನಡೆಯುತ್ತಿದೆ. ಕಾನೂನು ಸುವ್ಯವಸ್ಥೆ ಸಂಪೂರ್ಣ ನಾಶವಾಗುತ್ತಿದೆ. ಹಾಗಾಗಿ ಈ ಎಲ್ಲ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿ, ಅಪರಾಧಿಗಳಿಗೆ ಕಠಿಣ ಶಿಕ್ಷೆ ನೀಡಬೇಕು ಮತ್ತು ಹಿಂದೂಗಳಿಗೆ ಸುರಕ್ಷತೆಯನ್ನು ನೀಡಬೇಕೆಂದು ಒತ್ತಾಯಿಸಿದರು.

> **ತನಿಖೆಗೆ ವಿಶೇಷ ತನಿಖಾ ದಳ**
>
> ಮೈಸೂರಿನಲ್ಲಿ ರೋಹಿತ್ ಎಂಬ ಯುವಕನು ಪ್ರಧಾನಿ ನರೇಂದ್ರ ಮೋದಿಯ ವಿಷಯದಲ್ಲಿ ಹಾಡು ರಚನೆ ಮಾಡಿದ ಕಾರಣಕ್ಕೆ ಮುಸಲ್ಮಾನರ ಗುಂಪು ಹಲ್ಲೆ ಮಾಡಿ, ಅವನ ಮೇಲೆ ಮೂತ್ರ ವಿಸರ್ಜನೆ ಮಾಡಿದ್ದಲ್ಲದೆ, ಅವನಿಗೆ ಅಲ್ಲಾ ಹೊ ಅಕ್ಬರ್ ಮತ್ತು ಪಾಕಿಸ್ಥಾನ್ ಜಿಂದಾಬಾದ್ ಘೋಷಣೆ ಕೂಗುವಂತೆ ಬಲವಂತ ಮಾಡಲಾಯಿತು. ಅಷ್ಟೇ ಅಲ್ಲದೇ ಬೆಂಗಳೂರಿನ ವಿದ್ಯಾರಣ್ಯಪುರದಲ್ಲಿ ರಾಮನವಮಿಯ ದಿನ ಹಿಂದೂ ಯುವಕರು ಜೈ ಶ್ರೀರಾಮ ಘೋಷಣೆ ಹೇಳಿದ ಕಾರಣಕ್ಕೆ ಅವರ ಮೇಲೆ ಹಲ್ಲೆ ಮಾಡಿದ್ದಲ್ಲದೇ, ಅವರಿಗೆ ಅಲ್ಲಾ ಹೊ ಅಕ್ಬರ್ ಎಂದು ಘೋಷಣೆ ಕೂಗಲು ಆಗ್ರಹ ಮಾಡಿದರು.


# 16 ಜಿಲ್ಲೆಗಳಲ್ಲಿ 40ರ ಗಡಿ ದಾಟಿದ ಉಷ್ಣಾಂಶ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ಮಳೆ ಕ್ಷೀಣವಾಗಿದ್ದ ಬೆನ್ನಲ್ಲೇ ಸೋಮವಾರ 16 ಜಿಲ್ಲೆಗಳಲ್ಲಿ ಉಷ್ಣಾಂಶ 40ರ ಗಡಿ ದಾಟಿದೆ. ಮುಂದಿನ ಐದು ದಿನ 15 ಜಿಲ್ಲೆಗಳಲ್ಲಿ ಬಿಸಿಗಾಳಿ ಬೀಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಎಚ್ಚರಿಕೆ ಕೊಟ್ಟಿದೆ.ರಾಜ್ಯದಲ್ಲೇ ರಾಯಚೂರಿನಲ್ಲಿ 44 ಡಿ.ಸೆ.ದಾಖಲಾಗಿದೆ.

ಯಾದಗಿರಿ 43.3, ಕೊಪ್ಪಳ 43, ಬಳ್ಳಾರಿ 42, ಕೋಲಾರ, ವಿಜಯಪುರ, ತುಮಕೂರು, ದಾವಣಗೆರೆ, ಚಿತ್ರದುರ್ಗ, ಬೀದರ್ 41, ಬಾಗಲಕೋಟೆ 40.3, ಕಲಬುರಗಿ, ಗದಗ, ಹಾವೇರಿ, ಚಿಕ್ಕಮಗಳೂರು, ಧಾರವಾಡ 40 ಡಿ.ಸೆ. ಉಷ್ಣಾಂಶ ಕಂಡಬಂದಿದೆ. ಈ ಮೇಲಿನ ಜಿಲ್ಲೆಗಳಲ್ಲಿ ವಾಡಿಕೆಗಿಂತ 3–5 ಡಿ.ಸೆ. ಉಷ್ಣಾಂಶ ಹೆಚ್ಚು ದಾಖಲಾಗುತ್ತಿದೆ. ಶಿವಮೊಗ್ಗ 37.4, ಮಂಡ್ಯ, ಮೈಸೂರು 37, ಚಾಮರಾಜನಗರ 37 ಡಿ.ಸೆ.ಇದೆ. ಬೆಂಗಳೂರು ಸೇರಿ ಸುತ್ತಮುತ್ತ ಪ್ರದೇಶಗಳಲ್ಲಿ ಗರಿಷ್ಠ ತಾಪಮಾನದಲ್ಲಿ 37 ಡಿ.ಸೆ. ಇರಲಿದೆ ಎಂದು ರಾಜ್ಯ ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ದಕ್ಷಿಣ ಕನ್ನಡ, ಉಡುಪಿ, ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಕೊಡಗು, ಹಾಸನ ಮೈಸೂರು, ಮಂಡ್ಯದಲ್ಲಿ ಮುಂದಿನ 24 ಗಂಟೆ ಸಾಧಾರಣ ಪ್ರಮಾಣದಲ್ಲಿ ಮಳೆ ಬೀಳಲಿದೆ. ಉಳಿದಡೆ ಒಣಹವೆ ಮುಂದುವರಿಯಲಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಹಲವು ಭಾಗಗಳಲ್ಲಿ ವಾಡಿಕೆಗಿಂತ ಉಷ್ಣಾಂಶ ಹೆಚ್ಚಾಗಿದೆ. ಸಮತಟ್ಟಾದ ಪ್ರದೇಶಗಳಲ್ಲಿ ಗರಿಷ್ಠ ತಾಪಮಾನದಲ್ಲಿ ವಾಡಿಕೆಗಿಂತ 40 ಡಿ.ಸೆ.ಏರಿದರೆ, ಗುಡ್ಡಗಾಡು ಪ್ರದೇಶಗಳಲ್ಲಿ 30 ಡಿ.ಸೆ. ಹೆಚ್ಚಳವಾದರೆ ಶಾಖ ಅಲೆ ಎಂದು ಕರೆಯಲಾಗುತ್ತದೆ. ತಾಪಮಾನ ಹೆಚ್ಚಳದಿಂದಾಗಿ ಜನರಿಗೆ ಊತ, ತಲೆನೋವು, ವಾಕರಿಕೆ, ನಿರ್ಜಲೀಕರಣ, ಸುಸ್ತು, ವಾಂತಿ ಮತ್ತು ಬೆವರು ಸೇರಿ ಇತರೆ ಆರೋಗ್ಯ ಸಮಸ್ಯೆ ಬರಲಿವೆ. ಜ್ವರ ಕಾಣಿಸಿಕೊಳ್ಳಬಹುದು. ತೀವ್ರವಾದ ಜ್ವರ ಬಂದರೆ ಪ್ರಜ್ಞೆ ಬೀಳುವ ಅಪಾಯ ಜತೆಗೆ ಕೋಮಾಕ್ಕೂ ಹೋಗಿ ಪ್ರಾಣ ಕಳೆದುಕೊಳ್ಳಬಹುದು. ಹಾಗಾಗಿ, ನಾಗರಿಕರು ಎಚ್ಚರಿಕೆಯಿಂದ ಇರುವಂತೆ ಇಲಾಖೆ ಸಲಹೆ ನೀಡಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, 1960ರಿಂದ 1990 ರವರೆಗೆ 1997ರಿಂದ 2017ರವರೆಗೆ ಹವಾಮಾನದಲ್ಲಿ ಏನಲ್ಲಾ ಬದಲಾವಣೆಗಳಾಗಿವೆ ಎಂಬುದರ ಬಗ್ಗೆ 2 ಭಾಗಗಳಾಗಿ ವಿಗಂಡಿಸಿ ಅಧ್ಯಯನ ನಡೆಸಿತ್ತು. ಮೊದಲ 30 ವರ್ಷಗಳಲ್ಲಿ ಹವಾಮಾನ ಹೇಗಿತ್ತು. ನಂತರ, 30 ವರ್ಷ ಹವಾಮಾನಗಳಲ್ಲಿ ಏನೆಲ್ಲಾ ಬದಲಾವಣೆಗಳಾಗಿವೆ ಎಂಬ ಅಧ್ಯಯನದಲ್ಲಿ ವಾಡಿಕೆಗಿಂತ ಬಿಸಿಲು, ಮಳೆ, ಚಳಿ, ಗರಿಷ್ಠ,ಕನಿಷ್ಠ ತಾಪಮಾನದ ಉಷ್ಣಾಂಶ ಹೆಚ್ಚಳವಾಗಿರುವುದು ತಿಳಿದುಬಂದಿತ್ತು.



> **15 ಜಿಲ್ಲೆಗಳಲ್ಲಿ ಹೀಟ್‌ವೇವ್**

> ಇತ್ತೀಚಿನ ವರ್ಷಗಳಲ್ಲಿ ಹವಾಮಾನದ ಮೇಲೆ ಮಾನವ ಚಟುವಟಿಕೆ ಪ್ರಭಾವ, ಹಸಿರುಮನೆ ಅನಿಲ ಹೊರಸೂಸುವಿಕೆ ಹೆಚ್ಚಳವಾಗುತ್ತಿದೆ. ಈಗಿನ ಹವಾಮಾನ ಬದಲಾವಣೆ ಜಾಗತಿಕ ತಾಪಮಾನ ಏರಿಕೆ ವ್ಯಾಪ್ತಿಯಲ್ಲಿ ಪರಿಗಣಿಸಲಾಗಿದೆ. ಜಾಗತಿಕ ತಾಪಮಾನ ಹೈಡ್ರಾಲಿಕ್ ಚಕ್ರಗಳಲ್ಲಿನ ಬದಲಾವಣೆಗಳು, ಐಸ್ ಮತ್ತು ಹಿಮನದಿಗಳ ಕರಗುವಿಕೆ, ಸಮುದ್ರ ಮಟ್ಟ ಹೆಚ್ಚಳ, ಬರ, ಉಷ್ಣತೆ, ಬಿಸಿಗಾಳಿ, ಮಳೆಗಾಲ ಅವಧಿ ಸೇರಿ ಇತರೆ ಅಂಶ ಬದಲಾವಣೆಯಾಗುತ್ತಿವೆ ಎಂಬುದನ್ನು ವರದಿಯಲ್ಲಿ ಉಲ್ಲೇಖಿಸಲಾಗಿತ್ತು.

# ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಂಜಾರಿಗರಿಗೆ ಸಹಾಯ

## ಕಾಂಗ್ರೇಸ್‌ನ ಅರ್ಜುನ್ ರಾಠೋಡಗೆ ತಿರುಗೇಟು ಬಂಜಾರ ಮಹಾಸಭಾ ರಿಜಿಸ್ಟರ್ ಆಗಿಲ್ಲಾ, ಬಿಜೆಪಿಗೆ ಬಂಜಾರ ಸಮಾಜ ಬೆಂಬಲ

• **ಉದಯವಾಹಿನಿ, ಮುದ್ದೇಬಿಹಾಳ**


ಉದಯವಾಹಿನಿ ಚಿತ್ರ

**ಕಾಂಗ್ರೇಸ್ ಪರ ವಕಾಲತು**

ಬಂಜಾರಾ (ಲಂಬಾಣಿ) ಸಮಾಜದವರು ಹಿಂದು ಧರ್ಮದವರು. ಅವರಲ್ಲಿ ಹಿಂದುತ್ವದ ಬಗ್ಗೆ ಪ್ರೀತಿ, ಕಾಳಜಿ ಇದೆ. ಆದರೆ ಕಾಂಗ್ರೇಸ್‌ನವರು ಅವರಿಗೆ ಸುಳ್ಳು ಹೇಳಿ ದಾರಿ ತಪ್ಪಿಸುತ್ತಿದ್ದಾರೆ. ಚುನಾವಣಾ ಸಂದರ್ಭ ಪತ್ರಿಕಾಗೋಷ್ಠಿ ನಡೆಸಿ ಕಾಂಗ್ರೇಸ್ ಏಜಂಟರಂತೆ ನಡೆದುಕೊಳ್ಳುತ್ತಿದ್ದಾರೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೇಸ್ ಬೆಂಬಲಿಸಿದ್ದ ಬಂಜಾರಾ ಸಮಾಜದ ಕೆಲವರಿಗೆ ಈಗ ಪಶ್ಚಾತ್ತಾಪವಾಗಿದ್ದು ಅವರು ಬಿಜೆಪಿ ಬೆಂಬಲಿಸಲು ತೀರ್ಮಾನಿಸಿದ್ದಾರೆ ಎಂದು ಬಿಜೆಪಿಯಿಂದ ಲೋಕಸಭೆ ಟಿಕೇಟ್ ಆಕಾಂಕ್ಷಿಯಾಗಿದ್ದ ನಿವೃತ್ತ ಸಿಪಿಐ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮಹೇಂದ್ರ ನಾಯಕ, ಪ್ರಕೋಷ್ಠಗಳ ಜಿಲ್ಲಾ ಸಂಚಾಲಕ ಭೀಮಸಿಂಗ್ ರಾಠೋಡ, ಜಿಲ್ಲಾ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅಶೋಕ ರಾಠೋಡ ನೇಬಗೇರಿ ಹೇಳಿದರು.

ಬಿಜೆಪಿ ಕಾರ್ಯಾಲಯದಲ್ಲಿ ರವಿವಾರ ಸಂಜೆ ಜಂಟಿ ಪತ್ರಿಕಾಗೋಷ್ಠಿ ನಡೆಸಿ ಈಚೆಗೆ ಜಿಪಂ ಮಾಜಿ ಅಧ್ಯಕ್ಷ, ಕಾಂಗ್ರೇಸ್ ಮುಖಂಡ ಅರ್ಜುನ್ ರಾಠೋಡ ಪತ್ರಿಕಾಗೋಷ್ಠಿ ನಡೆಸಿ ಕಾಂಗ್ರೇಸ್ ಪರ ನೀಡಿದ್ದ ಹೇಳಿಕೆಗೆ ತಿರುಗೇಟು ನೀಡುವಂತೆ ಮಾತನಾಡಿದ ಅವರು, ಬಂಜಾರ ಮಹಾಸಭಾ ಎಲ್ಲಿಯದು ಅದನ್ನು ಯಾರು ಮಾಡಿದ್ದಾರೆ? ಸ್ವಯಂ ಮಹಾಸಭಾ ಮಾಡಿಕೊಂಡಿದ್ದಾರೆ ರಿಜಿಸ್ಟರ್ ಆಗಿಲ್ಲಾ ಕಾಂಗ್ರೇಸ್‌ನಲ್ಲಿರುವ ಬಂಜಾರಾ ಮುಖಂಡರಿಗೆ ಚುನಾವಣೆ ಬಂದಾಗ ಮಾತ್ರ ಲಂಬಾಣಿಗರು ನೆನಪಾಗ್ತಾರೆ. ಚುನಾವಣೆ ಬಂದಾಗ ಮಾತ್ರ ಪತ್ರಿಕಾಗೋಷ್ಠಿ ನಡೆಸಿ ಹಾಗೆ ಮಾಡಿ, ಹೀಗೆ ಮಾಡಿ ಅಂತಾರೆ. ಕಾಂಗ್ರೇಸ್ ಪರ ವಕಾಲತ್ತು ವಹಿಸಿರುವ ಬಂಜಾರಾ ಸಮಾಜದವರು ಸಮಾಜವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂದರು.

> **ರಾಜ್ಯದ ಎಸ್ಸಿ, ಎಸ್ಟಿ ಸಮುದಾಯಕ್ಕೆ ಮೀಸಲಿದ್ದ 25 ಸಾವಿರ ಕೋಟಿ ಅನುದಾನವನ್ನು ಗ್ಯಾರಂಟಿ ನೆಪದಲ್ಲಿ ನುಂಗಿ ಹಾಕಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರ್ಕಾರ ಸಲ್ಲದ ನೆಪ ಹೇಳುತ್ತಿದೆ. ಆ ಪಕ್ಷದಲ್ಲಿರುವ ಬಂಜಾರಾ ಮುಖಂಡರು ಇದನ್ನು ಹೇಳದೆ ಚುನಾವಣೆ ಬಂದಾಗ ಒಂದು ಪಕ್ಷದ ಪರ ಕೆಲಸ ಮಾಡುತ್ತಾರೆ. ಬಿಜೆಪಿ ಸರ್ಕಾರ ಮಾತ್ರ ಬಂಜಾರಿಗರಿಗೆ ನಿಜವಾದ ನ್ಯಾಯ ನೀಡಿದೆ. ಬಂಜಾರಾ ಸಮಾಜದವರು ಕಾಂಗ್ರೇಸ್‌ನಲ್ಲಿರುವ ಬಂಜಾರಾ ಮುಖಂಡರ ಮಾತುಗಳಿಗೆ ಮಹತ್ವ ನೀಡದೆ ಕಡೆಗಣಿಸಬೇಕು ಎಂದರು.**

### ಒಳ ಮೀಸಲಾತಿ ಶಿಫಾರಸು ಮಾಡಿ ನಮಗೆ ಅನ್ಯಾಯ

**ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರ್ಕಾರ ಬಂಜಾರ ನಿಗಮಕ್ಕೆ ಇದುವರೆಗೂ ಅಧ್ಯಕ್ಷರ ನೇಮಿಸಿಲ್ಲ. ನಯಾಪೈಸೆ ಅನುದಾನ ನೀಡಿಲ್ಲ. ಒಳ ಮೀಸಲಾತಿ ಶಿಫಾರಸು ಮಾಡಿ ನಮಗೆ ಅನ್ಯಾಯ ಮಾಡಿದೆ. ಸಮಾಜದ ಮತಾಂತರಕ್ಕೆ ಉತ್ತೇಜನ ನೀ ಡುತ್ತಿದೆ. ಲವ್ ಜಿಹಾದ್‌ಗೆ ಪ್ರೇರಣೆ ಸಿಗುತ್ತಿದೆ. ಸಮಾಜ ದವರಿಗೆ ಸಂಪುಟದಲ್ಲಿ ಸ್ಥಾನ ನೀಡಿಲ್ಲ. 2023ರ ವಿಧಾನಸಭೆ ಚುನಾವಣೆಯಲ್ಲಿ ಸಮಾಜದ ಕಾಂಗ್ರೇಸ್ ಕೇವಲ ನಾಲ್ವರಿಗೆ ಟಿಕೇಟ್ ನೀಡಿದ್ದರೆ ಬಿಜೆಪಿ 10 ಜನರಿಗೆ ಟಿಕೇಟ್ ನೀಡಿತ್ತು. ಪ್ರಸ್ತುತ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ 5 ಎಸ್ಸಿ ಮಿಸಲು ಕ್ಷೇತ್ರಗಳಿದ್ದರೂ ಸಮಾಜದ ಒಬ್ಬರಿಗೂ ಟಿಕೇ ಟ್ ನೀಡಿಲ್ಲ ಎಂದು ಕಾಂಗ್ರೇಸ್ ಸರ್ಕಾರ ಬಂಜಾರಾ ಸಮಾಜಕ್ಕೆ ಮಾಡಿರುವ ಅನ್ಯಾಯಗಳನ್ನು ತಿಳಿಸಿದರು.**

ತಾಂಡಾ ಅಭಿವೃದ್ಧಿ ನಿಗಮ, ತಾಂಡಾಗಳನ್ನು ಕಂದಾಯ ಗ್ರಾಮಗಳಾಗಿ ಘೋಷಣೆ, ಉಮೇಶ ಜಾಧವರನ್ನು ಕೇಂದ್ರ ಸಚಿವರಾಗಿಸಿದ್ದು, ಸಂತ ಸೇವಾಲಾಲ ಮಹಾರಾಜರ ಜನ್ಮ ಸ್ಥಳ ಸೂರಗೊಂಡನಕೊಪ್ಪ ಅಭಿವೃದ್ಧಿಗೆ 5 ಕೋಟಿ ರೂ ನೀಡಿದ್ದು, ಗುಲಬರ್ಗಾ ವಿವಿಗೆ ಕುಲಪತಿಯಾಗಿ ಸಮಾಜದ ಇ.ಟಿ.ಪುಟ್ಟಯ್ಯರವರನ್ನು, ಕೆಪಿಎಸ್‌ಸಿ ಸದಸ್ಯರನ್ನಾಗಿ ಕಣಿರಾಮ್ ನಾಯಕರನ್ನು, ರಾಜ್ಯ ಮಾ ಹಿತಿ ಹಕ್ಕು ಆಯೋಗದ ನಿರ್ದೇಶಕರನ್ನಾಗಿ ಚೂಡಾ ನಾಯಕರನ್ನು ನೇಮಿಸಿದ್ದು, ಪ್ರತಿ ತಾಂಡಾಕ್ಕೆ ಸಮು ದಾಯ ಭವನ, ಸಿಸಿ ರಸ್ತೆ ನಿರ್ಮಿಸಿದ್ದು, ಪ್ರತಿ ಜಿಲ್ಲೆ ಯಲ್ಲಿ ಸಮಾಜಕ್ಕೆ ಸಮುದಾಯ ಭವನ ನಿರ್ಮಿಸಿದ್ದು ರಾಜ್ಯದಲ್ಲಿದ್ದ ಬಿಜೆಪಿ ಸರ್ಕಾರ. ಮಹಾರಾಷ್ಟ್ರದಲಿರುವ ಸಂತ ಸೇವಾಲಾಲರ ಐಕ್ಯಸ್ಥಾನ ಪೌರಾದೇವಿ (ಪೌರಘಡ) ಕ್ಷೇತ್ರಕ್ಕೆ 1000 ಕೋಟಿ ಅನುದಾನ, ರಾಷ್ಟ್ರೀಯ ಬಂಜಾರ ಡೆವಲಪ್‌ಮೆಂಟ್ ಬೋರ್ಡ ಘೋಷಿಸಿ 10000 ಕೋಟಿ ರೂ. ಮಿಸಲಿಟ್ಟಿದ್ದು ಕೇಂದ್ರದಲ್ಲಿರುವ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಎಂದು ತಿಳಿಸಿದರು.

---

## ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶ

• **ಉದಯವಾಹಿನಿ, ಇಂಡಿ**


ಉದಯವಾಹಿನಿ ಚಿತ್ರ

1970 ಏಪ್ರಿಲ್ 22 ರಂದು ಮೊದಲ ಬಾರಿಗೆ ಭೂಮಿ ದಿನವನ್ನು ಆಚರಿಸಲಾಯಿತು. ವಿಶ್ವ ಶಾಂತಿಗಾಗಿ ಹೋರಾಟ ನಡೆಸಿದ್ದ ಜಾನ್ ಮೆಕ್ ಕಾನ್ನೆಲ್ ಮಾತೃಭೂಮಿ, ಶಾಂತಿಯ ಪರಿಕಲ್ಪನೆಯನ್ನು ಗೌರವಿಸುವ ಉದ್ದೇಶದಿಂದ ಈ ವಿಷಯವನ್ನು ಪ್ರ ಸ್ತಾಪಿಸಿದ್ದರು. ಅಮೆರಿಕದ ಸೆನೆಟರ್, ಗೇಲಾರ್ಡ್ ನೆಲ್ಸನ್ ಪ್ರಪಂಚದಾದ್ಯಂತ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಏಪ್ರಿಲ್ 22, 1970 ರಂದು ಆಚರಿಸಲು ಪ್ರಸ್ತಾಪಿಸಿದರು. ವಿಶ್ವ ಭೂಮಿ ದಿನ ಎಂದು ಮರುನಾಮಕರಣ ಮಾಡಿದರು. ಎಂದು ಉಪನ್ಯಾಸಕಿ ಶ್ವೇತಾ ಕಾಂತ ಹೇಳಿದರು.

ಪಟ್ಟಣದ ಜಿ.ಆರ್.ಗಾಂಧಿ ಕಲಾ, ವಾಯ್. ಎ. ಪಾಟೀಲ ವಾಣ ಜ್ಯ, ಎಮ್.ಪಿ.ದೋಶಿ ವಿಜ್ಞಾನ ಪದವಿ ಮಹಾವಿದ್ಯಾಲಯದಲ್ಲಿ ಸಸ್ಯಶಾಸ್ತ್ರದ ವಿಭಾಗದ ಅಡಿಯಲ್ಲಿ ವಿಶ್ವ ಭೂಮಿ ದಿನಾಚರಣೆ ಕಾರ್ಯಕ್ರಮ ಜರುಗಿತು. ಪ್ರಾಂಶುಪಾಲ ಡಾ.ಎಸ್.ಬಿ.ಜಾಧವ ಮಾತನಾಡಿ ವಿಶ್ವ ಭೂಮಿ ದಿನವನ್ನು ಪ್ರತಿ ವರ್ಷ ಏಪ್ರಿಲ್ 22 ರಂದು ಆಚರಿಸಲಾಗುತ್ತದೆ. ಪರಿಸರ ಕಾಳಜಿ, ಭೂಮಿಯ ರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಉದ್ದೇಶ ಈ ದಿನದ ಹಿಂದಿದೆ. ಡಾ.ಜಯಪ್ರಸಾದ ಡಿ, ಉಪನ್ಯಾಸಕಿ ಶೃತಿ ಪಾಟೀಲ, ಶೃತಿ ಬಿರಾದಾರ ಅವರು ಮಾತನಾಡಿದರು.

ಡಾ.ಪಿ.ಕೆ.ರಾಠೋಡ, ಡಾ.ಸಿ. ಎಸ್.ಬಿರಾದಾರ, ಡಾ. ಶ್ರೀಕಾಂತ ರಾಠೋಡ ಮಲ್ಲಿಕಾರ್ಜುನ ಕೋಣದೆ, ಆರ್.ಪಿ.ಇಂಗನಾಳ, ಪಂಕಜ ಕುಲಕರ್ಣಿ ಮತ್ತಿತರಿದ್ದರು.

> **ಹವಾಮಾನ ಬದಲಾವಣೆಯ ಪ್ರಾಮುಖ್ಯತೆ, ನಮ್ಮ ಪರಿಸರವನ್ನು ರಕ್ಷಿಸುವ ಮಾರ್ಗಗಳ ಬಗ್ಗೆ ಜಾಗೃತಿ ಮೂಡಿಸಲು ಆಚರಿಸಲಾಗುತ್ತದೆ. ವಿಶ್ವ ಭೂಮಿ ದಿನವನ್ನು ಅಂತರಾಷ್ಟ್ರೀಯ ಮಾತೃಭೂಮಿ ದಿನ ಎಂದೂ ಕರೆಯಲಾಗುತ್ತದೆ. ಈ ದಿನವು ಪ್ರಕೃತಿ, ಗ್ರಹಗಳನ್ನು ರಕ್ಷಿಸುವ ಪ್ರಯತ್ನಗಳ ಮೇಲೂ ಕೇಂದ್ರಿಕರಿಸುತ್ತದೆ**
>
> -ಶ್ವೇತಾ ಕಾಂತ, ಉಪನ್ಯಾಸಕಿ

---

## ಪಯೂಜ್‌ಗೆ ಎನ್ಕೌಂಟರ್ ಮಾಡಿ

• **ಉದಯವಾಹಿನಿ, ಜೇವರ್ಗಿ**

ಹುಬ್ಬಳ್ಳಿ ನಗರದ ಕಾಲೇಜ್ ಆವರಣದಲ್ಲಿ ಕುಮಾರಿ ನೇಹಾ ಹಿರೇಮಠ ಅವಳಿಗೆ ಫಯಾಜ್ ಚಾಕುವಿನಿಂದ ಬರ್ಬರವಾಗಿ ಇರಿದು ಹತ್ಯೆಯನ್ನು ಮಾಡಿರುವುದನ್ನು ಖಂಡಿಸಿ ತಾಲ್ಲೂಕು ಶ್ರೀರಾಮ ಸೇನೆ ಜೇವರ್ಗಿ ಘಟಕದ ವತಿಯಿಂದ ತಾಲ್ಲೂಕ ದಂಡಾಧಿಕಾರಿ ಮಲ್ಲಣ್ಣ ಯಲಗೋಡ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ತಾಲ್ಲೂಕ ಶ್ರೀರಾಮ ಸೇನೆ ಅಧ್ಯಕ್ಷರಾದ ಮಲ್ಲಣ್ಣ ಹಿರಿ ಪೂಜಾರಿ ಮಾತನಾಡಿ ಹತ್ಯೆಗೈದ ಪೈಯಾಜನನ್ನು ಎನ್ಕೌಂಟರ್ ಮಾಡಬೇಕು ಎಂದು ಸರಕಾರಕ್ಕೆ ಒತ್ತಾಯಿಸಿದರು. ಸರ್ಕಾರದಲ್ಲಿ ಸ್ತ್ರೀಯರಿಗೆ ರಕ್ಷಣೆ ಇಲ್ಲದಂತಾಗಿದೆ ಒಬ್ಬ ಮಹಿಳೆ ತಿರುಗಾಡದಂತ ಪರಿಸ್ಥಿತಿ ಬಂದ್ ಒದಗಿದೆ ಎಂದರೆ ಸರ್ಕಾರ ಕಣ್ಣು ಮುಚ್ಚಿ ಕುಳಿತಿದೆ ಎಂದರ್ಥ. ಇಂಥ ಕ್ರೂರ ಕೃತ್ಯವನ್ನು ಎಸೆಗಿದ ಪಯಾಜ್ ನಿಗೆ ಎನ್ಕೌಂಟರ್ ಮಾಡಿ ಹಿರೇಮಠ್ ಅವರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಸಿದ್ದು ಪಾಟೀಲ್, ಹುಲಿ ಕಾಸರಬೋಸಗ್, ರಮೇಶ್ ಆಂದೋಲ, ಕಾಶಿನಾಥ್, ಚನ್ನು, ಸಿದ್ದರಾಮ ಖಾದಾಪುರ್, ಬಾಗೇಶ್ ಚೆನ್ನೂರ್, ಶಿವ ಕುಮಾರ್ ಆಂದೋಲ, ಹನುಮಂತ್, ಸಂತೋಷ್, ದೊಡ್ಡಪ್ಪಗೌಡ ಕಲ್ಲಹಂಗರಗಿ, ಸಾಯ್ಬಣ್ಣ, ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

---

## ಖಾಲಿ ಚೊಂಬಿಗೆ ಮತ ಹಾಕಿ ನಿಮ್ಮ ಮತದ ಘನತೆ ಕಳೆದುಕೊಳ್ಳುತ್ತೀರೋ?: ಸಿಎಂ

• **ಉದಯವಾಹಿನಿ, ಚಿಕ್ಕಮಗಳೂರು**

ವಾಜಪೇಯಿಯವರ ಇಂಡಿಯಾ ಶೈನಿಂಗ್ ಎನ್ನುವ ಸುಳ್ಳು ಪ್ರಚಾರ ಸೋತ ಹಾಗೆಯೇ ಮೋದಿಯವರ ವಿಕಸಿತ ಭಾರತ ಎನ್ನುವ ಸುಳ್ಳಿನ ಪ್ರಚಾರಕ್ಕೂ ಸೋಲಾಗುತ್ತದೆ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಘೋಷಿಸಿದರು. ಚಿಕ್ಕಮಗಳೂರು-ಉಡುಪಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೇಸ್ ಅಭ್ಯರ್ಥಿ ಪರವಾಗಿ ಬೃಹತ್ ಪ್ರಜಾ ಧ್ವನಿ-2 ಯಾತ್ರೆಯನ್ನು ಉದ್ಘಾಟಿಸಿ ಮಾತನಾಡಿದರು.

ಹತ್ತತ್ತು ವರ್ಷ ಪ್ರಧಾನಿಯಾಗಿ ಮೋದಿಯವರು ಭಾರತೀಯರಿಗೆ ಸರಣಿ ಸುಳ್ಳುಗಳನ್ನು ನಂಬಿಸಿ ವಂಚಿಸಿದರು. ಪ್ರತಿಯೊಬ್ಬರ ಖಾತೆಗೆ 15 ಲಕ್ಷ ಹಾಕ್ತೀವಿ ಎಂದು ನಂಬಿಸಿದರು. ಈಗ ನಂಬಿಕೆ ದ್ರೋಹ ಆಗಿದೆ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸ್ತೀವಿ ಎಂದು ದೇಶದ ಯುವಕ, ಯುವತಿಯರನ್ನು ನಂಬಿಸಿದರು.

ವಿದ್ಯಾವಂತರು ಡಬ್ಬಲ್ ಡಿಗ್ರಿ ಪಡೆದು ಉದ್ಯೋಗ ಕೊಡಿ ಎಂ ದರೆ ಹೋಗಿ ಪಕೋಡ ಮಾರಾಟ ಮಾಡಿ ಎನ್ನುತ್ತಿದ್ದಾರೆ. ಇಂಥಾ ನಂಬಿಕೆ ದ್ರೋಹಗಳು ಪ್ರಧಾನಿ ಕುರ್ಚಿಗೆ ಘನತೆ ತರುತ್ತದೆಯೇ ಎಂದು ಪ್ರಶ್ನಿಸಿದರು. ರೈತರ ಆದಾಯ ದುಪ್ಪಟ್ಟು ಮಾಡುವುದಾಗಿ ನಂಬಿಸಿ ರೈತರ ಖರ್ಚು ಮೂರು ಪ ಟ್ಟು ಮಾಡಿದರು. ಇದು ದೇಶದ ಇಡಿ ದೇ ಶದ ರೈತ ಕುಲಕ್ಕೆ ಬಗೆದ ನಂಬಿಕೆ ದ್ರೋಹ ಅಲ್ಲವೇ ಎಂದು ಪ್ರಶ್ನಿಸಿದರು.

> **ಪೆಟ್ರೋಲ್, ಡೀಸೆಲ್, ಗ್ಯಾಸ್, ರಸಗೊಬ್ಬರ ಬೆಲೆ ಏರಿಕೆ ಸಂಪೂರ್ಣ ತಡೆಯುವುದಾಗಿ ನಂಬಿಸಿದರು. ಈಗ ಎಲ್ಲದರ ಬೆಲೆ ಆಕಾಶ ಮುಟ್ಟಿದೆ. ಇಂಥಾ ನಂಬಿಕೆ ದ್ರೋಹಗಳನ್ನು ಭಾರತೀಯರಿಗೆ ಬಗೆದಿದ್ದಾರಲ್ಲಾ ಇಂಥಾ ವ್ಯಕ್ತಿಯ ಮುಖ ನೋಡಿ ಮತ ಹಾಕಿದರೆ ನಿಮ್ಮ ಮತಕ್ಕೆ ಘನತೆ ಬರುತ್ತದಾ?**
>
> -ಸಿದ್ದರಾಮಯ್ಯ, ಸಿಎಂ

---

## ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಿ ಭೂಮಿ ರಕ್ಷಣೆಗೆ ಪಣತೊಡಿ

• **ಉದಯವಾಹಿನಿ, ಚಿತ್ರದುರ್ಗ**


ಉದಯವಾಹಿನಿ ಚಿತ್ರ

ನಿತ್ಯದ ಜೀವನದಲ್ಲಿ ಅನಗತ್ಯವಾಗಿ ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿದೆ. ಇದರಿಂದ ಅಪಾರವಾದ ಪರಿಸರ ನಾಶದ ಜೊತೆಗೆ ಮನುಷ್ಯರ ಆರೋಗ್ಯದ ಮೇಲೂ ಮಾರಕ ಪರಿಣಾಮಗಳು ಉಂಟಾಗುತ್ತಿವೆ. ಸಮುದ್ರ ಸಾಗರಗಳಲ್ಲಿ ಅಪರೂಪದ ಜೀವರಾಶಿಗಳು ಅಳಿವಿನ ಅಂಚಿಗೆ ತಲುಪಿವೆ. ಪ್ಲಾಸ್ಟಿಕ್ ಬಳಕೆಗೆ

ಕಡಿವಾಣ ಹಾಕಿ ಭೂಮಿ ರಕ್ಷಣೆಗೆ ಪಣತೊಡಬೇಕು ಎಂದು ಪ್ರಧಾನ ಜಿಲ್ಲಾ, ಸತ್ರ ನ್ಯಾಯಾಧೀಶೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ.ಗೀತಾ ಕರೆ ನೀಡಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾ ಧಿಕಾರ, ವಕೀಲರ ಸಂಘ, ಅರಣ್ಯ ಇಲಾಖೆ, ಸರ್ಕಾರಿ ಕಲಾ ಕಾಲೇಜು ಸಂಯು ಕ್ತಾಶ್ರಯದಲ್ಲಿ ನಗರದ ಆಡುಮಲ್ಲೇಶ್ವರ ಮೃಗಾಲ ಯದಲ್ಲಿ ಆಯೋಜಿಸಲಾದ ಭೂಮಿ ದಿನಾಚರಣೆ ಅಂಗವಾಗಿ ಕಿರು ಮೃಗಾಲಯದಲ್ಲಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಈ ಬಾರಿಯ ಭೂಮಿ ದಿನಾಚರಣೆಯ ಧ್ಯೇಯವಾಕ್ಯ ಪ್ಲಾನೆಟ್ ವರ್ಸಸ್ ಪ್ಲಾಸ್ಟಿಕ್ ಎಂಬುದಾಗಿದೆ. 2040ರ ವೇಳೆಗೆಜಾಗತಿಕವಾಗಿ ಶೇ.60 ರಷ್ಟು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಉದ್ದೇಶ ಹೊಂದಲಾಗಿದೆ. ಕ್ರಮೇಣವಾಗಿ ಸಂಪೂರ್ಣ ಪ್ಲಾಸ್ಟಿಕ್ ಪ್ರಪಂಚದಿಂದಲೇ ನಿರ್ಮೂಲನೆ ಮಾಡಬೇಕಿದೆ. ಪ್ರತಿನಿತ್ಯದ ಜೀವನದಲ್ಲಿ ಪ್ಲಾಸ್ಟಿಕ್ ಬಳಕೆ ಹಾಸುಹೊಕ್ಕಾಗಿದೆ. ನಜಜಾತ ಶಿಶುಗಳ ಯಕೃತ್ತಗಳಲ್ಲಿ ಮೈಕ್ರೋಪ್ಲಾಸ್ಟಿಕ್ ಅಂಶಗಳು ಕಂಡುಬಂದು, ಚಿಕ್ಕಮಕ್ಕಳು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ ಎಂದು ಪ್ರಧಾನ ನ್ಯಾಯಾಧೀಶೆ ಕೆ.ಬಿ.ಗೀತಾ ಕಳವಳ ವ್ಯಕ್ತ ಪಡಿಸಿದರು. ಭೂಮಿಯನ್ನು ತಾಯಿ ಎಂದು ಭಾವಿಸುವ ಸಂಸ್ಕೃತಿ ನಮ್ಮಲ್ಲಿದೆ. ಭೂಮಿ ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದೆ. ಭೂಮಿ ನಮಗೆ ಆಶ್ರಯ, ಆಹಾರ, ಫಲಪುಷ್ಪ, ಆರೋಗ್ಯಕ್ಕಾಗಿ ಸಂಜೀವಿನಿಗಳನ್ನು ನೀಡಿದೆ. ನಮ್ಮ ದುರಾಸೆಯ ಪರಿಣಾಮವಾಗಿ ಇಂದು ಭೂಮಿಯನ್ನು ಹಾಳು

ಮಾಡುತ್ತಿದ್ದೇವೆ. 1970 ರಲ್ಲಿ ಮೊದಲ ಬಾರಿಗೆ ಅಂದಿನ ಅಮೇರಿಕಾದ ಸೆನೆಟರ್ ಗೆಲಾರ್ಡ್ ನೆಲ್ಸನ್ ಹಾಗೂ ಹಾರ್ವಡ್ ವಿ.ವಿ. ವಿದ್ಯಾರ್ಥಿ ಡೆನಿಸ್ ಹೆಯಿಸ್ ಕೈಗಾ ರಿಕರಣದಿಂದ ಉಂಟಾಗುತ್ತಿರುವ ಪರಿಸರ ನಾಶದ ಬಗ್ಗೆ ಅರಿವು ಮೂಡಿಸಲು ಏಪ್ರಿಲ್ 22 ರಂದು ಭೂಮಿ ದಿನಾಚರಣೆಯನ್ನು ಪ್ರಾರಂಭಿಸಿದರು. ಅಂದಿನಿಂದ ಈವರೆಗೂ ಪ್ರತಿ ವರ್ಷ ಏಪ್ರಿಲ್ 22 ರಂದು ವಿಭಿನ್ನ ಧ್ಯೇಯ ವಾಕ್ಯಗಳೊಂದಿಗೆ ದಿನಾಚರಣೆಯನ್ನು ಆಚರಿಸಿಕೊಂಡು ಬರಲಾಗುತ್ತಿದೆ ಎಂದು ಪ್ರಧಾನ ನ್ಯಾಯಧೀಶೆ ಕೆ.ಬಿ.ಗೀತಾ ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ, ಪ್ಲಾಸ್ಟಿಕ್ ಮಾಲಿನ್ಯ ಪರಿಸರಕ್ಕೆ ಮಾತ್ರವಲ್ಲ. ನಮ್ಮ, ಭವಿಷ್ಯದ ಪೀಳಿಗೆಯ ಆರೋಗ್ಯಕ್ಕೂ ಅಪಾಯವನ್ನುಂಟುಮಾಡುತ್ತದೆ. ಹಾಗಾಗಿ ಪ್ರತಿಯೊಬ್ಬರು ಸಹ ಪರಿಸರ ಸಂರಕ್ಷಣೆಯ ಅರಿವು ಹಾಗೂ ಪ್ರಜ್ಞೆ ಹೊಂದಿರುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು. ಚಿತ್ರದುರ್ಗ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ಮಾತನಾಡಿ, ಪ್ಲಾಸ್ಟಿಕ್ ಜೀವನದ ಅವಿಭಾಜ್ಯ ಅಂಗವಾಗಿದೆ. ಅತೀ ಹೆಚ್ಚಿನ ಪ್ಲಾಸ್ಟಿಕ್ ಬಳಕೆಯಿಂದ ದೇಹದ ರಕ್ತದಲ್ಲಿಯೂ ಮೈಕ್ರೋ ಪ್ಲಾಸ್ಟಿಕ್ ಸೇರಿಕೊಂಡಿದೆ. ಹಾಗಾಗಿ ನಮ್ಮ ಮನೆಯಿಂದಲೇ ಪರಿಸರ ಸಂರಕ್ಷಣೆಯ ಕಾಳಜಿ ಪ್ರಾರಂಭಬೇಕಿದೆ ಎಂದರು.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಕೆಂಪರಾಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜೆಎಂಎಫ್‌ಸಿ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಚೈತ್ರಾ, ಉಜ್ವಲ ವೀರಣ್ಣ ಸಿದ್ದಣ್ಣವರ್, ನೇಮಚಂದ್ರ, 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಅನಿತಾ ಕುಮಾರಿ, 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಸಹನ.ಆರ್ ಹಾಗೂ ಜೆಎಂಎಫ್‌ಸಿ ಪ್ರಧಾನ ಸಿವಿಲ್ ನ್ಯಾಯಾಧೀಶೆ ಗೀತಾ ಕುಂಬಾರ್, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಅರಣ್ಯ ಉಪಸಂರಕ್ಷಣಾಧಿಕಾರಿ ಚಂದ್ರಣ್ಣ, ವಲಯ ಅರಣ್ಯಾಧಿಕಾರಿ ಹೆಚ್,ಉಷಾರಾಣಿ,ಆಡುಮಲ್ಲೇಶ್ವರ ಕಿರು ಮೃಗಾಲಯ ವಲಯ ಅರಣ್ಯಾಧಿಕಾರಿ ಎನ್. ವಾಸುದೇವ, ಸಹಾಯಕ ಪ್ರಾಧ್ಯಾಪಕ, ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಡಾ.ವಿ.ಪ್ರಸಾದ್ ಸೇರಿದಂತೆ ಮತ್ತಿರರು ಇದ್ದರು.

> **ಮೋಜು ಮಸ್ತಿಮಾಡಿ ಬಿಸಾಡುವ ಪ್ಲಾಸ್ಟಿಕ್‌ಗಳುಜಲಮೂಲಗಳಿಗೆ ಸೇರಿ ಜಲಚರಗಳಿಗೆ ಕಂಟಕವಾಗಿ ಪರಿಣಮಿಸುತ್ತಿವೆ. ಸಮು ದ್ರಗಳಲ್ಲಿ ಶೇ.20ಕ್ಕಿಂತಲೂ ಅಧಿಕ ಜೀವ ರಾಶಿಗಳು ಅಳವಿನಂಚಿಗೆ ಬಂದಿವೆ. ಮಾನವರಾದ ನಾವು ತಿಯಾದ ಪ್ಲಾಸ್ಟಿಕ್ ಬಳಕೆ ಮಾಡಿ ಭೂಮಂಡಲವನ್ನು ನಾಶದ ತುದಿ ತಂದು ನಿಲ್ಲಿಸಿದ್ದೇವೆ. ಈ ವಿನಾಶವನ್ನು ತಪ್ಪಿಸಬೇಕಾದರೆ ಇಂದಿನಿಂದಲೇ ಪ್ರತಿ ಯೊಬ್ಬರು ಪ್ಲಾಸ್ಟಿಕ್ ಬಳಕೆಗೆ ಮಿತಿ ಹಾಕಿ ಕೊಳ್ಳಬೇಕು**
>
> - ಕೆ.ಬಿ.ಗೀತಾ, ಪ್ರಧಾನ ನ್ಯಾಯಾಧೀಶೆ

---

## ಕೋಮುವಾದಿ ಶಕ್ತಿಗಳು ಪ್ರಜಾಪ್ರಭುತ್ವಕ್ಕೆ ಮಾರಕ

• **ಉದಯವಾಹಿನಿ, ಸಿಂಧನೂರು**



ಉದಯವಾಹಿನಿ ಚಿತ್ರ

ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತು ಸಂವಿಧಾನದ ಆಶಯಗಳಿಗೆ ಮಾರಕವಾಗಿರುವ ಕಾರ್ಪೋರೇಟ್ ಮತ್ತು ಕೋಮುವಾದಿ ಶಕ್ತಿಗಳನ್ನು ಪ್ರತಿರೋಧಿಸಿ, ಜನಪ್ರಭುತ್ವವನ್ನು ಎತ್ತಿಹಿಡಿಯುವ ಭಾಗವಾಗಿ ಪಕ್ಷದ ಸಂಸ್ಥಾಪನಾ ಸಿಪಿಐ(ಎಂಎಲ್) ಲಿಬರೇಶನ್ ಪಕ್ಷದಿಂದ 2ನೇ ರಾಜ್ಯ ಸಮ್ಮೇಳನವನ್ನು ಪಕ್ಷದ ಕಛೇರಿಯಲ್ಲಿ ದೇಶಕ್ಕಾಗಿ ಹೋರಾಡಿದ ಹುತಾತ್ಮರಿಗೆ ನಮನ ಸಲ್ಲಿಸಲಾಯಿತು.

ನಂತರ ಮಾತನಾಡಿದ ಸಿಪಿಐಎಂಎಲ್ ಲಿಬರೇಶನ್ ಜಿಲ್ಲಾ ಕಾರ್ಯದರ್ಶಿ ನಾಗರಾಜ ಪೂಜಾರ್ ಅವರು ಕರ್ನಾಟಕ ರಾಜ್ಯದ ಜನರು ಬಿಜೆಪಿಯ ದುರಾಡಳಿತದ ಪರಿಣಾಮ ಭ್ರಷ್ಟಾಚಾರ, ಮಿತಿಮೀರಿದ ಜೀವನವೆಚ್ಚ, ಹೆಚ್ಚಿದ ಜಾತಿ ದೌರ್ಜನ್ಯ, ಮಹಿಳೆಯರ ಮೇಲಿನ ದಬ್ಬಾಳಿಕೆ, ಧಾರ್ಮಿಕ ದ್ವೇಷ ಮತ್ತು ಕೋಮು ಧ್ರುವೀಕರಣ, ಕೋವಿಡ್ ಅಸಮರ್ಪಕ ನಿರ್ವಹಣೆಯಿಂದ ನಲುಗಿ ಈಗಷ್ಟೇ ಅದರಿಂದ ಹೊರಬಂದಿದ್ದಾರೆ.

ರಾಜ್ಯದಲ್ಲಿ ಕಾಂಗ್ರೇಸ್ ನೇತೃತ್ವದ ಸರ್ಕಾರ ಇತ್ತೀಚಿಗೆ ಅಧಿಕಾರಕ್ಕೆ ಬಂದಿದ್ದು, ಕಳೆದ ನಾಲ್ಕಾರು ತಿಂಗಳಲ್ಲಿ ಖಾತರಿ ಯೋಜನೆಗಳನ್ನಷ್ಟೇ ಜಾರಿಗೆ ತಂದಿದೆ.ರಾಜ್ಯದಲ್ಲಿ ಅಶಾಂತಿಯನ್ನು ಉಂಟು ಮಾಡುತ್ತಿವೆ. 2024ರ ಸಾರ್ವತ್ರಿಕ ಚುನಾವಣೆಗಳು ಹತ್ತಿರದಲ್ಲಿದ್ದು, ಈ ಚುನಾ ವಣೆಯಲ್ಲಿ ಜನವಿರೋಧಿ ಫ್ಯಾಸಿಸ್ಟ್ ಬಿಜೆಪಿ ಸರ್ಕಾರವನ್ನು ಎಲ್ಲಾ ಜನ ಸಮುದಾಯಗಳ ದುಡಿಯುವ ಜನರು ಕಿತ್ತೊಗೆಯಲೇಬೇಕಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಕಾರ್ಯದರ್ಶಿ ಬಸವರಾಜ ಬೇಳಗುರ್ಕಿ, ಆರ್.ಎಚ್ ಕಲಮಂಗಿ, ಬಸವರಾಜ ಕೊಂಡೆ, ಹನುಮಂತ ದೀನಸಮ್ರುದ, ಬಸವರಾಜ ರೈತನಗರಕ್ಯಾಂಪ್, ಮಹಾದೇವ, ಸೇರಿದಂತೆ ಇನ್ನಿತರರು ಇದ್ದರು.

> **ಕೋಮುವಾದ, ರಾಜಕೀಯ ವಿಭಜಕ ಕುತಂತ್ರಗಳಿಂದಾಗಿ ರಾಜ್ಯದಲ್ಲಿ 20 19ರ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಭಾರಿ ಗೆಲುವು ಪಡೆದಿತ್ತು. 2024ರ ಸಾರ್ವತ್ರಿಕ ಚುನಾವಣೆಗಳು ಹತ್ತಿರದಲ್ಲಿದ್ದು, ಈ ಚುನಾ ವಣೆಯಲ್ಲಿ ಜನವಿರೋಧಿ ಫ್ಯಾಸಿಸ್ಟ್ ಬಿಜೆಪಿ ಸರ್ಕಾರವನ್ನು ಎಲ್ಲಾ ಜನ ಸಮುದಾಯಗಳ ದುಡಿಯುವ ಜನರು ಕಿತ್ತೊಗೆಯಲೇಬೇಕಿದೆ**
>
> -ನಾಗರಾಜ ಪೂಜಾರ್
> ಜಿಲ್ಲಾ ಕಾರ್ಯದರ್ಶಿ

---

## ಕುರಿ ಸಾಗಾಣಿಕೆ: ಒಂದು ಕೋಟಿ ಸಾಲಕ್ಕೆ 50 ಲಕ್ಷ ಸಬ್ಸಿಡಿ

• **ಉದಯವಾಹಿನಿ, ಇಂಡಿ**


ಉದಯವಾಹಿನಿ ಚಿತ್ರ

ಇಂಡಿ ಸರಕಾರದ ಅನುದಾನ ಪಡೆದು ನಮ್ಮ ರೈತರು ಅರ್ಥಿಕವಾಗಿ ಪ್ರಬಲಗೊಳ್ಳಬೇಕು. ಕುರಿ ಸಾಗಾಣಿಕೆಗೆ ಎಲ್ಲಾ ಸಮುದಾಯದವರಿಗೂ ಬ್ಯಾಂಕಿನವರು ಒಂದು ಕೋಟಿ ಸಾಲದಲ್ಲಿ ಶೇ 50 ರಿಯಾಯ್ತಿ ನೀಡುತ್ತಿದ್ದು ಇಂತಹ ಯೋಜನೆಗಳನ್ನು ಸರಿಯಾಗಿ ಬಳಸಿಕೊಂಡು ಅರ್ಥಿಕವಾಗಿ ಸಬಲರಾಗಲು ಇನ್ನೊಬ್ಬರಿಗೆ ಮಾದರಿಯಾಗಲು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ತಾಲ್ಲೂಕಿನ ಅಂಜುಟಗಿ ಗ್ರಾಮದ ರಾಯಪ್ಪ ಯಲ್ಲಪ್ಪ ಹರಳಯ್ಯ ಇವರ ತೋಟದಲ್ಲಿ ಕುರಿ ಸಾಕಾಣಿಕೆ ಕೇಂದ್ರ ಉದ್ಘಾಟಿಸಿ ಮಾತನಾಡುತ್ತಿದ್ದರು ಪಶು ವೈದ್ಯಾಧಿಕಾರಿ ಡಾ. ಬಿ.ಎಚ್.ಕನ್ನೂರ ಮಾತನಾಡಿ ಸರಕಾರದ ಅನುದಾನ ಪಡೆಯಲು ಈ ಯೋಜನೆಗೆ ಸುಮಾರು 6 ಎಕರೆ ಜಮೀನು ಹೊಂದಿರಬೇಕು. ಅಂತರ್‌ಜಾಲದಲ್ಲಿ ರಾಷ್ಟ್ರೀಯ ಜಾನುವಾರ ಮಿಷನ್ ಮೂಲಕ ಯೋಜನೆಗೆ ಬ್ಯಾಂಕುಗಳು ವಿತರಿಸುವವು. ಈ ಯೋಜನೆಯಲ್ಲಿ 500 ಹೆಣ್ಣು, 25 ಗಂಡು ಆಡುಗಳನ್ನು ಸಾಕುವಷ್ಟು ಶೆಡ್ಡು ನಿರ್ಮಾಣ ಮಾಡಬೇಕು. ತಳಿ ಸುಧಾರಣೆ ಮೂಲಕ ಪ್ರತಿ ಪ್ರಾಣ ಉತ್ಪಾದನೆಯ ಹೆಚ್ಚಳ, ಮಾಂಸ, ಮೇಕೆ ಹಾಲು ಉಣ್ಣೆ ಮತ್ತು ಮೇವಿನ ಉತ್ಪಾದನೆ ಹೆಚ್ಚಳ ಈ ಯೋಜನೆಯ ಮುಖ್ಯ ಉದ್ದೇಶ ಎಂದರು.

ರೈತ ರಾಯಪ್ಪ ಹರಳಯ್ಯ ಮಾತನಾಡಿ ಇಂಡಿಯ ಕೆನರಾ ಬ್ಯಾಂಕಿನಿಂದ 81 ಲಕ್ಷ ಸಾಲ ಪಡೆದಿದ್ದು 50 ಲಕ್ಷ ರೂದಲ್ಲಿ ಶೇಡ್ಡು ನಿರ್ಮಾಣ ಮಾಡಿದ್ದೇನೆ. ಇದಕ್ಕೆ ಸಬ್ಸಿಡಿ ಶೇ 50 ರಷ್ಟಿದೆ ಎಂದರು. ಪಶು ವೈದ್ಯಾಧಿಕಾರಿ ಡಾ. ಸುಧೀರ ನಾಯಕ, ನಾಡಕಚೇರಿಯ ಉಪತಹಶೀಲ್ದಾರ ಎ.ಎಸ್. ಗೊಟ್ಯಾಳ, ಸಣ್ಣಪ್ಪ ತಳವಾರ, ಶಬೀರ ಮುಲ್ಲಾ, ರಾಜಶೇಖರ ಕಾಂಬಳೆ, ರಾಯಗೊಂಡ ರಗಟೆ ಮತ್ತಿತರಿದ್ದರು.

---

# ರೈತರಿಗೆ ಬೆಳೆ ವಿಮೆ ಪರಿಹಾರ ಸಹ ದೊರಕಿಸಿ ಕೊಡುವಲ್ಲಿ ವಿಫಲ

## ಭಗವಂತ ಖೂಬಾ 10ವರ್ಷ ವ್ಯರ್ಥ ಸಮಯ ಕಳೆದು, ಅವರ ಹೆಸರಿರುವ ಅಭಿವೃದ್ಧಿ ಕಾಮಗಾರಿ ಉದ್ಘಾಟನೆಯಿಲ್ಲ: ಪುಣ್ಯಶೇಟ್ಟಿ

• **ಉದಯವಾಹಿನಿ,ಚಿಂಚೋಳಿ**


ಉದಯವಾಹಿನಿ ಚಿತ್ರ

ಬೀದರ ಲೋಕಸಭಾ ಬಿಜೆಪಿ ಅಭ್ಯರ್ಥಿ ಭಗವಂತ ಖೂಬಾ ಕಳೆದ 10ವರ್ಷ ವ್ಯರ್ಥ ಸಮಯ ಕಳೆದು, ಜೀರ್ಣೋದ್ಧಾರ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆಯಲ್ಲಿ ಯಾವುದೇ ಹೆಸರಿಲ್ಲದೆ, ಬರೀ ಜನರಿಗಾಗಿ ಕುಳಿತುಕೊಳ್ಳಲು ಸಿಮೆಂಟ್ ಕುರ್ಚಿಗಳು ನೀಡಿದ್ದಾರೆ ಎಂದು ಜಿಪಂ.ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯಶೇಟ್ಟಿ ಲೇವಡಿ ಮಾಡಿದರು.

ತಾಲ್ಲೂಕಿನ ಐನೋಳ್ಳಿ ಗ್ರಾಮದಲ್ಲಿ ಅವರ ನಿವಾಸದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೀದರ ಲೋಕಸಭಾ ಚುನಾವಣೆ ಕಾಂಗ್ರೇಸ್ ಅಭ್ಯರ್ಥಿ ಸಾಗರ್ ಖಂಡ್ರೆ ಕಳೆದ ಎರಡು ತಿಂಗಳ ಹಿಂದಿನಿಂದ ಪ್ರಚಾರ ಕೈಗೊಂಡಿದ್ದು ಸಮರ್ಥವಾದ ಅಭ್ಯರ್ಥಿಯಾಗಿದ್ದು ಅಭಿವೃದ್ಧಿಗಾಗಿ ಸಾಗರ್ ಖಂಡ್ರೆಗೆ ಗೆಲ್ಲಿಸುವಂತೆ ಮನವಿ ಮಾಡಿದರು.

ಚಿಂಚೋಳಿಯಲ್ಲಿ ಭಗವಂತ ಖೂಬಾ ಯಾವುದೇ ಸಭೆ ಸಮಾರಂಭ ಕಾರ್ಯಕ್ರಮಗಳಲ್ಲಿ ಭಾಗಿಯಾಗದೆ ಅನುದಾನ ಕೊಟ್ಟಿಲ್ಲ, ವಿಶೇಷ ಕೊಡುಗೆ ನೀಡಿಲ್ಲ, ರೈತ ಆತ್ಮಹತ್ಯೆ ಪರಿಹಾರ, ರೈತರಿಗೆ ಬೆಳೆ ವಿಮೆ ಪರಿಹಾರ ಸಹ ದೊರಕಿಸಿ ಕೊಡುವಲ್ಲಿ ವಿಫಲ, ರಾಸಾಯನಿಕ ರಸಗೊಬ್ಬರ ಸಚಿವರಾದರೂ ಸಂಸತ್ತಿನಲ್ಲಿ ಧ್ವನಿ ಎತ್ತಿಲ್ಲ, ಹಾಗೂ ಕೋಲಿ ಕುರುಬ ಸಮಾಜಕ್ಕೆ ಎಸ್.ಟಿ ಮಾಡುತ್ತೇನೆ ಎಂದು ಹೇಳಿ ಸಂಸತ್ತಿನಲ್ಲಿ ಯಾವುದೇ ಧ್ವನಿ ಎತ್ತಿಲ್ಲಾ,ಇಂಥಹ ಸಂಸದ ನಮಗೆ ಸಿಕ್ಕಿದ್ದು ದುರ್ದೈವದ ಸಂಗತಿವಾಗಿದೆ ಎಂದರು. ರಾಜ್ಯಾದ್ಯಂತ ಕಾಂಗ್ರೇಸ್ ಅಲೆಯಿದೆ ಮೋದಿ ಅಲೆಯಿಲ್ಲ,ಬೀದರ ಲೋಕಸಭಾ ಅಭ್ಯರ್ಥಿ ಅತ್ಯಂತ ಕಿರಿಯ ವಯಸ್ಸಿನ ವ್ಯಕ್ತಿ ಸಾಗರ್ ಖಂಡ್ರೆ ಅಭ್ಯರ್ಥಿ ಆಗಿದ್ದಾರೆ.

50ವರ್ಷದಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು ಖಂಡ್ರೆ ಕುಟುಂಬದವರು,ಬಿಜೆಪಿ ಡಬಲ್ ಇಂಜೀನ್ ಸರ್ಕಾರ ಇದ್ದರು ಕೂಡ ಯಾವುದೇ ಅಭಿವೃದ್ಧಿ ಕಂಡಿಲ್ಲ, ಕಾಂಗ್ರೇಸ್ ಕೊಟ್ಟಿರುವ 5ಗ್ಯಾರಂಟಿಗಳು ಅನುಷ್ಠಾನಗೊಳಿಸಲಾಗಿದೆ.

ಬೀದರ ಲೋಕಸಭಾ ಕ್ಷೇತ್ರದ ಮತದಾರರು ಸಾಗರ್ ಖಂಡ್ರೆಗೆ ಗೆಲ್ಲಿಸಿದರೆ ರಾಜ್ಯ ಸರ್ಕಾರ ಕಾಂಗ್ರೆಸ್ ಇರುವುದರಿಂದ ಅಭಿವೃದ್ಧಿಗೊಳಿಸಲು ಇನಷ್ಟು ಅನುಕೂಲವಾಗುತ್ತದೆ.

ಯಾವುದೇ ಯೋಜನೆಗಳು ಬಡವರ ಮಹಿಳೆಯರ ಯುವಕರ ರೈತರ ಅನುಕೂಲಕ್ಕಾಗಿ ಕಾಂಗ್ರೇಸ್ ಪಕ್ಷ ಮಾತ್ರವಿದ್ದು ಐದು ಗ್ಯಾರಂಟಿಗಳು ಆರ್ಥಿಕ ಮಟ್ಟ ಸುಧಾರಿಸಲು ಬಹಳಷ್ಟು ಅನುಕೂಲವಾಗುತ್ತಿದೆ. ಚಿಂಚೋಳಿ ಮತಕ್ಷೇತ್ರದ್ಯಂತ 15ರಿಂದ 20ಸಾವಿರ ಮತ ಗಳು ಕಾಂಗ್ರೇಸ್ ಲೀಡ್ ಬರುತ್ತವೆ, ಕಾಂಗ್ರೇಸ್ ಕೇಂದ್ರ ಸರ್ಕಾರವಿರುವಾಗ ಸಾಲಮನ್ನಾ, ಆರ್.ಟಿ ಯೋಜನೆ, ಬಡವರ ಅನುಕೂಲಕ್ಕಾಗಿ ಆಸ್ಪತ್ರೆಗಳು, ಬಡವರಿಗೆ ಅಕ್ಕಿಯೋಜನೆ, ನರೇಗಾ ಯೋಜನೆ, ಹೀಗೆ ಹತ್ತಾರು ಯೋಜನೆಗಳು ಬಡವರಿಗೆ ಅನುಕೂಲವಾಗಲು ಕಾಂಗ್ರೇಸ್ ಪಕ್ಷ ಕೆಲಸ ಮಾಡಿದೆ. ಭಗವಂತ ಖೂಬಾರವರಿಗೆ ಪ್ರಚಾರಕ್ಕೆ ಹೋದಗೆಲ್ಲಾ ಸ್ವಪಕ್ಷದವರೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ವೀರಶೇಟ್ಟಿ ಪೋಲಿಸ್ ಪಾಟೀಲ ನಾಗಾಯಿದ್ಲಾಯಿ, ಅಲಾವೋದ್ದಿನ್ ಅನ್ಸಾರಿ, ಇಬ್ರಾಹಿಂಸಾಬ, ಶರಣು ಪಪ್ಪಾ, ಖಾಜಾಪಟೇಲ ನಿರ್ಣಾ, ನಂದಕುಮಾರ, ರಾಜು ಮಂದಾ ಅನೇಕರಿದ್ದರು.

> **ಬೀದರ ಲೋಕಸಭಾ ಕ್ಷೇತ್ರದ ಮತದಾರರು ಸಾಗರ್ ಖಂಡ್ರೆಗೆ ಗೆಲ್ಲಿಸಿದರೆ ರಾಜ್ಯ ಸರ್ಕಾರ ಕಾಂಗ್ರೇಸ್ ಇರುವುದರಿಂದ ಅಭಿವೃದ್ಧಿಗೊಳಿಸಲು ಇನಷ್ಟು ಅನುಕೂಲವಾಗುತ್ತದೆ.**
>
> - ದೀಪಕನಾಗ್ ಪುಣ್ಯಶೇಟ್ಟಿ ಐನೋಳ್ಳಿ
> ಜಿಪಂ.ಮಾಜಿ ಅಧ್ಯಕ್ಷರು ಕಲಬುರ್ಗಿ

### ರಾಜ್ಯಾದ್ಯಂತ ಕಾಂಗ್ರೇಸ್ ಅಲೆಯಿದೆ ಮೋದಿ ಅಲೆಯಿಲ್ಲ

**ರಾಜ್ಯಾದ್ಯಂತ ಕಾಂಗ್ರೇಸ್ ಅಲೆಯಿದೆ ಮೋದಿ ಅಲೆಯಿಲ್ಲ,ಬೀದರ ಲೋಕಸಭಾ ಅಭ್ಯರ್ಥಿ ಅತ್ಯಂತ ಕಿರಿಯ ವಯಸ್ಸಿನ ವ್ಯಕ್ತಿ ಸಾಗರ್ ಖಂಡ್ರೆ ಅಭ್ಯರ್ಥಿ ಆಗಿದ್ದಾರೆ. 50ವರ್ಷದಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು ಖಂಡ್ರೆ ಕುಟುಂಬದವರು,ಬಿಜೆಪಿ ಡಬಲ್ ಇಂಜೀನ್ ಸರ್ಕಾರ ಇದ್ದರು ಕೂಡ ಯಾವುದೇ ಅಭಿವೃದ್ಧಿ ಕಂಡಿಲ್ಲ, ಕಾಂಗ್ರೇಸ್ ಕೊಟ್ಟಿರುವ 5ಗ್ಯಾರಂಟಿಗಳು ಅನುಷ್ಠಾನಗೊಳಿಸಲಾಗಿದೆ.**

---

## ಮಿನಿ ನ್ಯೂಸ್


### ಹಾಜಿ ಸರ್ವರ್ ಉರ್ಸ್ ನಾಳೆಯಿಂದ ಪ್ರಾರಂಭ: ಪಟ್ಟೆದಾರ


ಉದಯವಾಹಿನಿ ಚಿತ್ರ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಗಡಿಕೇಶ್ವಾರ ಗ್ರಾಮದ ಪೀರ್ ಹಜರತ್ ಹಾಜಿ ಸರ್ವರ್ ಅವರ ಉರ್ಸ್‌ಅನ್ನು ಪ್ರತಿ ವರ್ಷದಂತೆ ಈ ವರ್ಷವು ಏ. 24 ರಿಂದ 27ರವರೆಗೆ ಉರ್ಸ್ ಹಮ್ಮಿಕೊಳ್ಳಲಾಗಿದ್ದು ನಾಲ್ಕು ದಿನಗಳ ಕಾಲ ನಡೆದು 29ಕ್ಕೂ ಹೆಚ್ಚು ಗ್ರಾಮಗಳ ಭಕ್ತರು ಭಾಗಿಯಾಗಲಿದ್ದಾರೆ ಎಂದು ದರ್ಗಾದ ಮುತ್ತುವಲಿ ಮಸ್ತಾನ ಅಲಿ ಪಟ್ಟೆದಾರ ತಿಳಿಸಿದ್ದಾರೆ. ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, 24 ರಂದು ರಾತ್ರಿ 8ಗಂಟೆಗೆ ಮಸ್ತಾನ ಅಲಿ ಪಟ್ಟೆದಾರ ಅವರ ಮನೆ ಯಿಂದ ದರ್ಗಾದವರೆಗೆ ಗಂಧದ ಮೆ ರೆವಣಿಗೆ ನಡೆಯಲಿದ್ದು, 25ರಂದು ರಾತ್ರಿ 9ಗಂಟೆಗೆ ದರ್ಗಾದ ಅವರಣದಲ್ಲಿ ದೀಪೋತ್ಸವ, ಖವಾಲಿ, ಮಿಲ್ಲಾದುನ್ನಬಿ ಕಾ ರ್ಯಕ್ರಮ ನಡೆಯಲಿದೆ, 26ರಂದು ಬೆಳ್ಳಿಗ್ಗೆ 6ಗಂಟೆಗೆ ಪ್ರಸಾದ ವಿತರಣೆ ಕಾರ್ಯಕ್ರಮ ನಡೆಯಲಿದೆ, 27ರಂದು ಭಾರಿ ಪ್ರಮಾಣದಲ್ಲಿ ಹರಿ ಜಾತ್ರೆ ನಡೆದು ಮಸ್ತಾನ ಅಲಿ ಪಟ್ಟೆದಾರ ಅವರ ಮನೆಗೆ ಮರಳಿ ದೇವ ರನ್ನು ತರುವುದೊಂದಿಗೆ ಉರ್ಸ ಮುಕ್ತಾಯಗೊಳ್ಳಲಿದೆ. ಉರ್ಸನಲ್ಲಿ ಗಡಿಕೇಶ್ವಾರ, ಕುಪನೂರ, ಭಂಟನಳ್ಳಿ, ಹೊಡೆಬೀರನಳ್ಳಿ, ಸುಲೇಪೇಟ, ಪೇಂಚನಪಳ್ಳಿ, ರುದ್ನೂರ, ಕೇರೋಳ್ಳಿ, ಸಿರೋಳ್ಳಿ, ಯಾಕಾಪೂರ, ಚಿಂಚೋಳಿ ಸೇರಿದಂತೆ ವಿವಿಧ ಗ್ರಾಮದ ಭಕ್ತರು ಪಾಲ್ಗೊಳುತ್ತಾರೆ ಎಂದು ತಿಳಿಸಿದ್ದಾರೆ.

### ನನ್ನ ಮಗಳು ಮತಾಂತರಗೊಳ್ಳಲು ನಿರಾಕರಿಸಿದಳು: ನಿರಂಜನ್ ಹಿರೇಮಠ್



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಹುಬ್ಬಳ್ಳಿ**

ಕಳೆದ ವಾರ ಹುಬ್ಬಳ್ಳಿಯಲ್ಲಿ ತನ್ನ ಮಾಜಿ ಸಹಪಾಠಿ ಫಯಾಜ್ ನಿಂದ ಚಾಕುವಿನಿಂದ ಇರಿದು ಹತ್ಯೆಗೀಡಾದ ನೇಹಾ ಹಿರೇಮಠ್ ಅವರ ತಂದೆ ನಿರಂಜನ್ ಹಿರೇಮಠ್ ಅವರು ಮಾಧ್ಯಮಗಳೊಂದಿಗೆ ಮಾತನಾಡುತ್ತಾ, ತಮ್ಮ ಮಗಳನ್ನು ಬಲವಂತವಾಗಿ ಮತಾಂತರಿಸಲು ಒತ್ತಾಯಿಸಲಾಯಿತು, ಅವಳು ನಿರಾಕರಿಸಿದಳು ಎಂದು ಹೇಳಿದ್ದಾರೆ. ಇಸ್ಲಾಂಗೆ ಮತಾಂತರಗೊಳ್ಳಲು ನಿರಾಕರಿಸಿದ್ದಕ್ಕಾಗಿ ಫಯಾಜ್ ನೇಹಾ ಅವರನ್ನು ಕೊಂದಿದ್ದಾನೆ ಎಂದು ಕಾಂಗ್ರೇಸ್ ಮುಖಂಡ ನಿರಂಜನ್ ಹಿರೇಮಠ್ ಮಾಧ್ಯಮಗಳ ಮುಂದೆ ಹೇಳಿದ್ದಾರೆ.

ಅವರು ಅವಳನ್ನು ಮತಾಂತರಗೊಳ್ಳುವಂತೆ ಒತ್ತಾಯಿಸುತ್ತಿದ್ದರು. ಧಾರ್ಮಿಕ ಮತಾಂತರಕ್ಕೆ ಒಪ್ಪದ ಕಾರಣ ಆಕೆಯನ್ನು ಕೊಲೆ ಮಾಡಲಾಗಿದೆ ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಕಾಂಗ್ರೇಸ್ ಕೌನ್ಸಿಲರ್ ನಿರಂಜನ್ ಹಿರೇಮಠ್ ಹೇಳಿದ್ದಾರೆ.

### ನಾಮಪತ್ರ ಹಿಂಪಡೆಯದೇ ಶಿವಮೊಗ್ಗದಲ್ಲಿ ಬಂಡಾಯ ಅಭ್ಯರ್ಥಿಯಾಗಿ ಕಣದಲ್ಲಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಶಿವಮೊಗ್ಗ**

ಮೇ 7 ರಂದು ನಡೆಯಲಿರುವ ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಹಿರಿಯ ನಾಯಕ ಕೆ.ಎಸ್.ಈಶ್ವರಪ್ಪ ಕಣದಲ್ಲಿ ಉಳಿಯುವ ಮೂಲಕ ಪಕ್ಷದ ವಿರುದ್ಧ ಬಂಡಾಯದ ಸಮರಕ್ಕೆ ಸನ್ನದ್ಧರಾಗಿದ್ದೇನೆಂಬ ಸಂದೇಶವನ್ನು ಮಾಜಿ ಸಿಎಂ ಯಡಿಯೂರಪ್ಪ ಕುಟುಂಬ ಮತ್ತು ಬಂದ ಬಿಜೆಪಿ ಹೈಕಮಾಂಡ್ ಗೆ ರವಾನಿಸಿದ್ದಾರೆ. ನಾಮಪತ್ರ ಹಿಂತೆಗೆತಕ್ಕೆ ಸೋಮವಾರ ಅಂತಿಮ ದಿನವಾಗಿದ್ದು ಈಶ್ವರಪ್ಪ ನಾಮ ಪತ್ರ ಹಿಂತೆದುಕೊಂಡಿಲ್ಲ. ಸೋಮವಾರ ಸಹ ಈಶ್ವರಪ್ಪನವರು ಯಡಿಯೂರಪ್ಪ ಕುಟುಂಬದ ವಿರುದ್ಧ ತಮ್ಮ ಪ್ರಚಾರ ಸಭೆಗಳಲ್ಲಿ ವಾಗ್ದಾಳಿ ನಡೆಸಿದ್ದಾರೆ.

2013 ರ ವಿಧಾನಸಭೆ ಚುನಾವಣೆಯಲ್ಲಿ ಯಡಿಯೂರಪ್ಪ ಬಿಜೆಪಿ ಕಟ್ಟಿ ಅದರಿಂದ ರುದ್ರೇಗೌಡರನ್ನು ಕಣಕ್ಕಿಳಿಸಿ ಈಶ್ವರಪ್ಪ ಸೋಲಿಗೆ ಕಾರಣರಾಗಿದ್ದರು. ಈಗ ಈಶ್ವರಪ್ಪ ಬಿಜೆಪಿ ಅಧಿಕೃತ ಅಭ್ಯರ್ಥಿ, ಯಡಿಯೂರಪ್ಪ ಪುತ್ರ ರಾಘವೇಂದ್ರರನ್ನು ಪರಾಭವಗೊಳಿಸಿ ಸೇಡು ತೀರಿಸಿಕೊಳ್ಳಲು ಮುಂದಾಗಿದ್ದಾರೆ.ಶಿವ ಮೊಗ್ಗ ಲೋಕಸಭಾ ಚುನಾವಣೆಯಲ್ಲಿ ಅಂತಿಮ ಕಣದಲ್ಲಿ 23 ಅಭ್ಯರ್ಥಿಗಳು ಶಿವಮೊಗ್ಗ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಏ.22 ಉಮೇದುವಾರಿಕೆ ಹಿಂಪಡೆಯಲು ಕಡೆಯ ದಿನವಾಗಿದ್ದು, ಜಿಲ್ಲೆಯಲ್ಲಿ ಚುನಾವಣೆ ಎದುರಿಸಲು ಅಂತಿಮವಾಗಿ 23 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.

### ಎಟಿಎಂನಲ್ಲಿ ಅಗ್ನಿ ಅವಘಡ; ಸುಟ್ಟು ಕರಕಲಾದ ಲಕ್ಷ ಲಕ್ಷ ಹಣ

• **ಉದಯವಾಹಿನಿ, ಚಿಕ್ಕಮಗಳೂರು**

ನಗರದ ಎಟಿಎಂ ಒಂದರಲ್ಲಿ ಆಕಸ್ಮಿಕ ಅಗ್ನಿ ಅವಘಡ ನಡೆದು ಐದು ಲಕ್ಷ ರೂಪಾಯಿ ಬೆಂಕಿಗೆ ಆಹುತಿಯಾಗಿರುವ ಘಟನೆ ನಡೆದಿದೆ.

ನಗರ ಐ.ಜಿ.ರಸ್ತೆಯಲ್ಲಿರುವ ಕರ್ನಾಟಕ ಬ್ಯಾಂಕ್ ಎಟಿಎಂಗೆ ಭಾನುವಾರ ಮಧ್ಯರಾತ್ರಿ ಬೆಂಕಿ ತಗುಲಿ ಐದು ಲಕ್ಷ ರೂ. ಬೆಂಕಿಗೆ ಆಹುತಿಯಾಗಿದೆ. ಎಟಿಎಂ ಕೊಠಡಿಯಲ್ಲಿ ಅಳವಡಿಸಿರುವ ಎಸಿ ಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಬೆಂಕಿ ಆವರಿಸಿದೆ ಎಂದು ಅಂದಾ ಜಿಸಲಾಗಿದೆ. ಎಸಿಯಲ್ಲಿ ಕಾಣಿಸಿಕೊಂಡ ವಿದ್ಯುತ್ ಶಾರ್ಟ ಸರ್ಕ್ಯೂಟ್ ನಿಂದ ಬೆಂಕಿ ಇಡೀ ಎಟಿಎಂ ಆವರಿಸಿದ್ದು ಎಟಿಎಂ ನಲ್ಲಿದ್ದ ಐದು ಲಕ್ಷ ರೂ. ಬೆಂಕಿಗೆ ಸುಟ್ಟು ಕರಕಲಾಗಿದೆ. ಎಟಿಎಂ ಕೊಠಡಿ ಯಲ್ಲಿದ್ದ ಹಣ ತುಂಬುವ ಮೆಷಿನ್, ಎಟಿಎಂ ಮೆ ಷಿನ್ ಸುಟ್ಟು ಹೋಗಿದೆ. ಎಟಿಎಂಗೆ ಬೆಂಕಿ ತಗುಲಿರುವ ವಿಷಯ ತಿಳಿಯುತ್ತಿದ್ದಂತೆ ಆಗ್ನಿ ಶಾಮಕ ಸಿಬ್ಬಂದಿಗಳು ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸಿದ್ದಾರೆ. ಎಟಿಎಂ ಕೊಠಡಿ ಮೇಲ್ಭಾಗದಲ್ಲಿ ಕರ್ನಾಟಕ ಬ್ಯಾಂಕ್ ಶಾಖೆ ಇದ್ದು ದೊಡ್ಡ ಅನಾಹುತ ತಪ್ಪಿದೆ.

### ಬೈಕ್‌ಗಳ ನಡುವೆ ಅಪಘಾತ ಇಬ್ಬರು ಸಾವು

• **ಉದಯವಾಹಿನಿ, ಹುಬ್ಬಳ್ಳಿ**

ಇಲ್ಲಿನ ವಿದ್ಯಾನಗರದ ಕಿಮ್ಸ್ ಆಸ್ಪತ್ರೆ ಎದುರು ಎರಡು ಬೈಕ್‌ಗಳ ನಡುವೆ ಅಪಘಾತ ನಡೆದು, ಇಬ್ಬರು ಸವಾರರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಒಬ್ಬ ಗಂಭೀರ ಗಾಯಗೊಂಡಿದ್ದು, ಕಿಮ್ಸ್‌ಗೆ ದಾಖಲಿಸಲಾಗಿದೆ. ರಾಮನಗರ ನಿವಾಸಿ ಆದಿತ್ಯ(17), ರಾಹುಲ್ ಗಾಣಿಗೇರ(30) ಮೃತಪಟ್ಟವರು. ಕೇಶ್ವಾಪುರದ ನಿವಾಸಿ ಸಂಜಯ ಆರ್. ಗಾಯಗೊಂಡವರು. ಉತ್ತರ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಾಸಕರು, ಸಂಸದರ 2 ಸಾವಿರಕ್ಕೂ ಹೆಚ್ಚು ಕ್ರಿಮಿನಲ್ ಪ್ರಕರಣಗಳ ಇತ್ಯರ್ಥ


## • ಕ್ರಿಮಿನಲ್ ಪ್ರಕರಣಗಳ ವಿಚಾರಣೆಗಾಗಿ ವಿಶೇಷ ನ್ಯಾಯಾಲಯಗಳು 2023ರಲ್ಲಿ 2,000 ಕ್ಕೂ ಹೆಚ್ಚು ಪ್ರಕರಣಗಳನ್ನು ಇತ್ಯರ್ಥ

**ನವದೆಹಲಿ:** ಸಂಸತ್ ಸದಸ್ಯರು ಮತ್ತು ವಿಧಾನಸಭೆಯ ಸದಸ್ಯರಿಗೆ ಸಂಬಂಧಿಸಿದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಗಾಗಿ ವಿಶೇಷ ನ್ಯಾಯಾಲಯಗಳು 2023 ರಲ್ಲಿ 2,000 ಕ್ಕೂ ಹೆಚ್ಚು ಪ್ರಕರಣಗಳನ್ನು ಇತ್ಯರ್ಥಪಡಿಸಿವೆ ಎಂದು ಸುಪ್ರೀಂ ಕೋರ್ಟ್‌ಗೆ ತಿಳಿಸಲಾಗಿದೆ.

ಸಂಸದರು ಮತ್ತು ಶಾಸಕರ ವಿರುದ್ಧದ ಕ್ರಿಮಿನಲ್ ಮೊಕದ್ದಮೆಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಕೋರಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ಅಮಿಕಸ್ ಕ್ಯೂರಿಯಾಗಿ ನೇಮಕಗೊಂಡಿರುವ ಹಿರಿಯ ವಕೀಲ ವಿಜಯ್ ಹನ್ಸಾರಿಯಾ ಅವರು ಸಲ್ಲಿಸಿರುವ ಅಫಿಡವಿಟ್‌ನಲ್ಲಿ, ಬಾಕಿ ಉಳಿದಿರುವ ವಿಚಾರಣೆಗಳ ತ್ವರಿತ ತೀರ್ಪು ಮತ್ತು ತನಿಖೆಯ ಕಟ್ಟುನಿಟ್ಟಿನ ಮೇಲ್ವಿಚಾರಣೆಯಲ್ಲಿ ಹೆಚ್ಚಿನ ನಿರ್ದೇಶನಗಳ ಅಗತ್ಯವಿದೆ ಎಂದು ಹೇಳಿದ್ದಾರೆ. ಆಯಾ ಹೈಕೋರ್ಟ್‌ಗಳು, ಮೊದಲ ಎರಡು ಹಂತಗಳಲ್ಲಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸುವ ಸುಮಾರು 501 ಕ್ರಿಮಿನಲ್ ಪ್ರಕರಣಗಳನ್ನು ಹೊಂದಿರುವ ಅಭ್ಯರ್ಥಿಗಳು ಇದ್ದಾರೆ.

ಎನ್‌ಜಿಒ ಅಸೋಸಿಯೇಷನ್ ಆಫ್ ಡೆಮಾಕ್ರಟಿಕ್ ರಿಫಾರ್ಮ್ಸ್ ಲೋಕಸಭೆ ಚುನಾವಣೆ 2024ರ ಹಂತ ಒಂದು ಮತ್ತು ಹಂತ 11 ರ ವರದಿಯನ್ನು ಉಲ್ಲೇಖಿಸಿ, ಹನ್ಸಾರಿಯಾ ಅವರು 2,810 ಅಭ್ಯರ್ಥಿಗಳಲ್ಲಿ (ಹಂತ 1 – 1618 ಅಭ್ಯರ್ಥಿಗಳು ಮತ್ತು ಹಂತ 11 1192 ಅಭ್ಯರ್ಥಿಗಳು. ), 501 (ಶೇ. 18) ಅಭ್ಯರ್ಥಿಗಳು ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಹೊಂದಿದ್ದಾರೆ, ಅದರಲ್ಲಿ 327 (ಶೇ. 12) ಗಂಭೀರ ಕ್ರಿಮಿನಲ್ ಮೊಕದ್ದಮೆಗಳು (5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಜೈಲು ಶಿಕ್ಷೆಯೊಂದಿಗೆ ದಂಡನೀಯ). ಇವೆ ಎಂದು ತಿಳಿಸಿದ್ದಾರೆ. 2019 ರ ಲೋಕಸಭೆ ಚುನಾವಣೆಯಲ್ಲಿ ಇದೇ ಸ್ಥಿತಿ ಇತ್ತು, ಇದರಲ್ಲಿ 7928 ಅಭ್ಯರ್ಥಿಗಳಲ್ಲಿ 1500 ಅಭ್ಯರ್ಥಿಗಳು (19%) ಕ್ರಿಮಿನಲ್ ಪ್ರಕರಣಗಳನ್ನು ಹೊಂದಿದ್ದರು, ಅದರಲ್ಲಿ 1070 ಅಭ್ಯರ್ಥಿಗಳು (13%) ಗಂಭೀರ ಕ್ರಿಮಿನಲ್ ಪ್ರಕರಣಗಳನ್ನು ಹೊಂದಿದ್ದಾರೆ. ಆದಾಗ್ಯೂ, 514 ಚುನಾಯಿತ ಸದಸ್ಯರಲ್ಲಿ 17 ನೇ ಲೋಕಸಭೆ (2019–2024), 225 ಸದಸ್ಯರು (44%) ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಹೊಂದಿದ್ದರು.

ಹೀಗಾಗಿ, ಕ್ರಿಮಿನಲ್ ಪ್ರಕರಣಗಳಿಲ್ಲದ ಅಭ್ಯರ್ಥಿಗಳಿಗಿಂತ ಕ್ರಿಮಿನಲ್ ಪ್ರಕರಣಗಳನ್ನು ಹೊಂದಿರುವ ಅಭ್ಯರ್ಥಿಗಳು ಹೆಚ್ಚು ಸ್ಥಾನಗಳನ್ನು ಗೆದ್ದಿದ್ದಾರೆ. ಈ ಸಂದರ್ಭದಲ್ಲಿ, ಆಯಾ ಹೈಕೋರ್ಟ್‌ಗಳ ಕಟ್ಟುನಿಟ್ಟಿನ ಮೇಲ್ವಿಚಾರಣೆಯಲ್ಲಿ ಬಾಕಿ ಉಳಿದಿರುವ ವಿಚಾರಣೆಗಳು ಮತ್ತು ತನಿಖೆಯ ತ್ವರಿತ ವಿಲೇವಾರಿಗೆ ಈ ನ್ಯಾಯಾಲಯವು ಹೆಚ್ಚಿನ ಆದೇಶಗಳನ್ನು ನೀಡುವುದು ಅವಶ್ಯಕ ಎಂದು ಅಫಿಡವಿಟ್ ಹೇಳಿದೆ.ಅವರು ವಿವಿಧ ಹೈಕೋರ್ಟ್‌ಗಳಿಂದ ಪಡೆದ ಮಾಹಿತಿಯ ಆಧಾರದ ಮೇಲೆ ಕೋಷ್ಟಕ ಚಾರ್ಟ್ ಅನ್ನು ನೀಡಿದರು, ಅದರ ಅಡಿಯಲ್ಲಿ ಜನವರಿ 1, 2023 ರವರೆಗೆ ಶಾಸಕರ ವಿರುದ್ಧ 4,697 ಕ್ರಿಮಿನಲ್ ಪ್ರಕರಣಗಳು ಮತ್ತು ಕಳೆದ ವರ್ಷ 2,018 ಪ್ರಕರಣಗಳನ್ನು ತೀರ್ಮಾನಿಸಲಾಗಿದೆ. ಸಂಸದರು ಮತ್ತು ಶಾಸಕರ ವಿರುದ್ಧ 2023 ರಲ್ಲಿ 1,746 ಹೊಸ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗಿದೆ ಮತ್ತು ಆದ್ದರಿಂದ ಒಟ್ಟು 4,474 ಪ್ರಕರಣಗಳು ಜನವರಿ 1, 2024 ಕ್ಕೆ ಬಾಕಿ ಉಳಿದಿವೆ ಎಂದು ಅಫಿಡವಿಟ್ ಹೇಳಿದೆ.



**ತನಿಖೆಯ ಕಟ್ಟುನಿಟ್ಟಿನ ಮೇಲ್ವಿಚಾರಣೆಯಲ್ಲಿ ಹೆಚ್ಚಿನ ನಿರ್ದೇಶನಗಳ ಅಗತ್ಯವಿದೆ**

### ತ್ವರಿತ ವಿಲೇವಾರಿ

**ಶಾಸಕರ ವಿರುದ್ಧದ ಮೊಕದ್ದಮೆಗಳ ತ್ವರಿತ ವಿಲೇವಾರಿಗಾಗಿ ಅಶ್ವಿನಿ ಉಪಾಧ್ಯಾಯ ಅವರು ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ನ್ಯಾಯಾಲಯಕ್ಕೆ ಸಹಾಯ ಮಾಡುತ್ತಿರುವ ಹನ್ಸಾರಿಯಾ ಅವರು, ಈ ನ್ಯಾಯಾಲಯವು ಪ್ರಸ್ತುತ ಪ್ರಕ್ರಿಯೆಯಲ್ಲಿ ನೀಡಿರುವ ನಿರ್ದೇಶನವನ್ನು ಗಮನದಲ್ಲಿಟ್ಟುಕೊಂಡು, ಕ್ರಮಗಳನ್ನು ತೆಗೆದುಕೊಂಡಿದೆ ಎಂಬುದನ್ನು ಗಮನಿಸಬಹುದು.**

# ಸೂರತ್: ಮತದಾನಕ್ಕೂ ಮುನ್ನವೇ ಮೊದಲ ಜಯಗಳಿಸಿದ ಬಿಜೆಪಿ

**ಸೂರತ್:** ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನ ಮಾತ್ರ ಮುಗಿದಿದೆ, ಇನ್ನೂ ಆರು ಹಂತದ ಚುನಾವಣೆ ಬಾಕಿಯಿದೆ. ಆದರೂ, ಬಿಜೆಪಿ ಈ ಬಾರಿಯ ಚುನಾವಣೆಯಲ್ಲಿ ದೇಶದ ಮೊಟ್ಟ ಮೊದಲ ಸೀಟ್ ಅನ್ನು ಗೆದ್ದಿವೆ, ಆ ಮೂಲಕ ಫಲಿತಾಂಶಕ್ಕೂ ಮುನ್ನವೇ ಭರ್ಜರಿ ಬೂಸ್ಟರ್ ಪಡೆದುಕೊಂಡಿದೆ.

ಬಿಜೆಪಿಯ ಭದ್ರಕೋಟೆ ಗುಜರಾತ್ ರಾಜ್ಯದ ಸೂರತ್ ಲೋಕಸಭಾ ಕ್ಷೇತ್ರವನ್ನು ಬಿಜೆಪಿ ಗೆದ್ದಿದೆ, ಅವಿರೋಧವಾಗಿ ಬಿಜೆಪಿ ಅಭ್ಯರ್ಥಿ ಮುಕೇಶ್ ದಲಾಲ್ ಆಯ್ಕೆಯಾಗಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಯ ನಾಮಪತ್ರ ತಿರಸ್ಕಾರಗೊಂಡಿದೆ.

ಕಾಂಗ್ರೆಸ್ ಅಭ್ಯರ್ಥಿ ನೀಲೇಶ್ ಕುಂಭಾನಿ ಅವರ ನಾಮಪತ್ರ ತಿರಸ್ಕೃತಗೊಂಡ ನಂತರ ಮತ್ತು ಕಣದಲ್ಲಿದ್ದ ಎಲ್ಲಾ ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ಹಿಂದಕ್ಕೆ ಪಡೆದುಕೊಂಡಿದ್ದಾರೆ. ಹಾಗಾಗಿ, ಮುಖೇಶ್ ದಲಾಲ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಗುಜರಾತ್ ಬಿಜೆಪಿ ಘಟಕದ ಮುಖ್ಯಸ್ಥ ಸಿ ಆರ್ ಪಾಟೀಲ್ ತಿಳಿಸಿದ್ದಾರೆ. ಬಿಜೆಪಿಯ ದಲಾಲ್ ಮತ್ತು ಕಾಂಗ್ರೆಸ್ಸಿನ ಕುಂಭಾನಿ ಹೊರತುಪಡಿಸಿ, ಸೂರತ್ ಲೋಕಸಭಾ ಸ್ಥಾನಕ್ಕೆ ಇನ್ನೂ ಎಂಟು ಮಂದಿ ಸ್ಪರ್ಧಿಗಳು ನಾಮಪತ್ರ ಸಲ್ಲಿಸಿದ್ದರು. ಬಹುಜನ ಸಮಾಜ ಪಾರ್ಟಿಯ (ಬಿಎಸ್‌ಪಿ) ಪ್ಯಾರೇಲಾಲ್ ಭಾರತಿ ಕಣದಿಂದ ಹಿಂದಕ್ಕೆ ಸರಿದರು. ಇದರ ಜೊತೆಗೆ, ಏಳು ಇತರರು ಮತ್ತು ಪಕ್ಷೇತರರು ಕೂಡಾ ನಾಮಪತ್ರ ಹಿಂದಕ್ಕೆ ಪಡೆದ ನಾಟಕೀಯ ಬೆಳವಣಿಗೆ ನಡೆದಿದೆ.

ಬಿಜೆಪಿಯ ಅಭ್ಯರ್ಥಿ ಮುಕೇಶ್ ದಲಾಲ್ ಗೆಲುವಿನ ಅಧಿಕೃತ ಘೋಷಣೆ ಇನ್ನಷ್ಟೇ ಹೊರಬೀಳಬೇಕಿದೆ. ಕೇಂದ್ರ ಚುನಾವಣಾಧಿಕಾರಿಗಳು ಶೀಘ್ರದಲ್ಲೇ ಘೋಷಣೆ ಮಾಡುವ ಸಾಧ್ಯತೆ ಇದೆ ಎಂದು ಬಿಜೆಪಿ ನಾಯಕರು ಹೇಳಿದ್ದಾರೆ. ಗುಜರಾತ್ ಬಿಜೆಪಿ ಘಟಕದ ಅಧ್ಯಕ್ಷ ಸಿ.ಆರ್.ಪಾಟೀಲ್ ಈ ಬಗ್ಗೆ ಟ್ವೀಟ್ (ಎಕ್ಸ್) ಮಾಡಿ, ನಮ್ಮ ಸೂರತ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮುಕೇಶ್ ದಲಾಲ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಕ್ಕೆ ಅವರಿಗೆ ಅಭಿನಂದನೆಗಳು ಎಂದು ಶುಭ ಕೋರಿದ್ದಾರೆ.

ಗುಜರಾತ್ ರಾಜ್ಯದ ಎಲ್ಲಾ 26 ಲೋಕಸಭಾ ಸ್ಥಾನಗಳಿಗೆ ಮೂರನೇ ಹಂತದಲ್ಲಿ ( ಮೇ 7 ) ಮತದಾನ ನಡೆಯಲಿದೆ. ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ ಏಪ್ರಿಲ್ 19ಕ್ಕೆ ಮುಗಿದಿತ್ತು. ನಾಮಪತ್ರಗಳನ್ನು ಹಿಂತೆಗೆದುಕೊಳ್ಳುವ ಇಂದು ( ಏಪ್ರಿಲ್ 22) ಕೊನೆಯ ದಿನವಾಗಿತ್ತು.

ಬಿಜೆಪಿ ನೀಡಿದ್ದ ದೂರಿನ ನಂತರ, ಕಾಂಗ್ರೆಸ್ ಅಭ್ಯರ್ಥಿ ನೀಲೇಶ್ ಕುಂಭಾನಿ ಅವರ ನಾಮಪತ್ರ ತಿರಸ್ಕರಿಸಲಾಗಿದೆ. ಒಂದು ಕಾಲದಲ್ಲಿ ಕಾಂಗ್ರೆಸ್ಸಿನ ಸೇಫ್ ಕ್ಷೇತ್ರವಾಗಿದ್ದ ಸೂರತ್ ನಲ್ಲಿ, ದೇಶದ ಮಾಜಿ ಪ್ರಧಾನಿ ಮೊರಾರ್ಜಿ ದೇಸಾಯಿ ಇಲ್ಲಿಂದ 5 ಬಾರಿ ಆಯ್ಕೆಯಾಗಿದ್ದರು.



- ಮತದಾನಕ್ಕೂ ಮುನ್ನವೇ ಮೊದಲ ಜಯಗಳಿಸಿದ ಬಿಜೆಪಿ
- ಗುಜರಾತಿನ ಸೂರತ್ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಗೆಲುವು
- ಬಿಜೆಪಿ ಅಭ್ಯರ್ಥಿ ಮುಕೇಶ್ ದಲಾಲ್ ಅವಿರೋಧ ಆಯ್ಕೆ

# 65 ಸಾವಿರ ಭಾರತೀಯರು ಅಧಿಕೃತ ಅಮೆರಿಕದ ಪ್ರಜೆಗಳು

**ವಾಷಿಂಗ್ಟನ್:** ಇತ್ತೀಚಿನ ಕಾಂಗ್ರೆಷನಲ್ ವರದಿಯ ಪ್ರಕಾರ ಒಟ್ಟು 65,960 ಭಾರತೀಯರು ಅಧಿಕೃತವಾಗಿ ಅಮೆರಿಕದ ಪ್ರಜೆಗಳಾಗಿದ್ದಾರೆ, ಇದು ಮೆಕ್ಸಿಕೊದ ನಂತರ ಅಮೆರಿಕಾದಲ್ಲಿ ಹೊಸ ನಾಗರಿಕರಿಗೆ ಎರಡನೇ ಅತಿದೊಡ್ಡ ಮೂಲ ದೇಶವಾಗಿದೆ.

ಅಮೆರಿಕದ ಜನಗಣತಿ ಬ್ಯೂರೋದ ಅಮೇರಿಕನ್ ಸಮುದಾಯ ಸಮೀಕ್ಷೆಯ ಮಾಹಿತಿಯ ಪ್ರಕಾರ, 2022 ರಲ್ಲಿ ಅಂದಾಜು 46 ಮಿಲಿಯನ್ ವಿದೇಶಿ ಸಂಜಾತ ವ್ಯಕ್ತಿಗಳು ಯುನೈಟೆಡ್ ಸ್ಟೇಟ್ಸ್‌ನಲ್ಲಿ ನೆಲೆಸಿದ್ದಾರೆ, ಒಟ್ಟು ಅಮೆರಿಕ ಜನಸಂಖ್ಯೆಯ 333 ಮಿಲಿಯನ್‌ನ ಸರಿಸುಮಾರು 14 ಪ್ರತಿಶತ ವಿದೇಶಿಯರಿದ್ದಾರೆ. 2022 ರ ಆರ್ಥಿಕ ವರ್ಷದಲ್ಲಿ ಸ್ವತಂತ್ರ ಕಾಂಗ್ರೆಷನಲ್ ರಿಸರ್ಚ್ ಸರ್ವೀಸ್ ಏಪ್ರಿಲ್ 15 ರ ಅದರ ಇತ್ತೀಚಿನ ಯುಎಸ್ ನ್ಯಾಚುರಲೈಸೇಶನ್ ಪಾಲಿಸಿ ವರದಿಯಲ್ಲಿ ಒಟ್ಟು 969,380 ವ್ಯಕ್ತಿಗಳು ಸ್ವಾಭಾವಿಕ ಅಮೆರಿಕ ನಾಗರಿಕರಾಗಿದ್ದಾರೆ ಎಂದು ಮಾಹಿತಿ ನೀಡಿದೆ. ಮೆಕ್ಸಿಕೋದಲ್ಲಿ ಜನಿಸಿದ ವ್ಯಕ್ತಿಗಳು ಹೆಚ್ಚಿನ ಸಂಖ್ಯೆಯ ನೈಸರ್ಗಿಕೀಕರಣಗಳನ್ನು ಪ್ರತಿನಿಧಿಸುತ್ತಾರೆ, ನಂತರ ಭಾರತ, ಫಿಲಿಪೈನ್ಸ್, ಕ್ಯೂಬಾ ಮತ್ತು ಡೊಮಿನಿಕನ್ ರಿಪಬ್ಲಿಕ್ನ ವ್ಯಕ್ತಿಗಳು ಎಂದು ವರದಿ ತಿಳಿಸಿದೆ. ಇತ್ತೀಚಿನ ಲಭ್ಯವಿರುವ ಡೇಟಾದ ಆಧಾರದ ಮೇಲೆ, 2022 ರಲ್ಲಿ 128,878 ರಂತೆ ಮೆಕ್ಸಿಕನ್ ಪ್ರಜೆಗಳು ಅಮೇರಿಕನ್ ಪ್ರಜೆಗಳಾದರು. ಅವರ ನಂತರ ಭಾರತೀಯರು (65,960), ಫಿಲಿಪೈನ್ಸ್ (53,413), ಕ್ಯೂಬಾ (46,913), ಡೊಮಿನಿಕನ್ ರಿಪಬ್ಲಿಕ್ (34,525), ವಿಯೆಟ್ನಾಂ (33,246) ಮತ್ತು ಚೀನಾ (27,038)ರಷ್ಟಿದೆ. 2023 ರ ವರದಿ ಪ್ರಕಾರ, ಒಟ್ಟು 2,831,330 ವಿದೇಶಿ-ಸಂಜಾತ ಅಮೇರಿಕನ್ ಪ್ರಜೆಗಳು ಭಾರತದಿಂದ ಬಂದವರು, ಇದು ಮೆಕ್ಸಿಕೋದ 10,638,429 ರ ನಂತರ ಎರಡನೇ ದೊಡ್ಡ ಸಂಖ್ಯೆಯಾಗಿದೆ. 2,225,447 ವಿದೇಶಿ ಮೂಲದ ಅಮೆರಿಕನ್ ಪ್ರಜೆಗಳೊಂದಿಗೆ ಮೆಕ್ಸಿಕೋ ಮತ್ತು ಭಾರತವನ್ನು ಚೀನಾ ಅನುಸರಿಸುತ್ತದೆ.

ಆದಾಗ್ಯೂ, ಅಮೆರಿಕದಲ್ಲಿ ವಾಸಿಸುತ್ತಿರುವ ಭಾರತದಲ್ಲಿ ಸಂಜಾತ ವಿದೇಶಿ ಪ್ರಜೆಗಳಲ್ಲಿ 42 ಪ್ರತಿಶತದಷ್ಟು ಜನರು ಪ್ರಸ್ತುತ ಅಲ್ಲಿನ ನಾಗರಿಕರಾಗಲು ಅನರ್ಹರಾಗಿದ್ದಾರೆ ಎಂದು ವರದಿ ಹೇಳಿದೆ.

**46 ಮಿಲಿಯನ್ ವಿದೇಶಿ ಸಂಜಾತ ವ್ಯಕ್ತಿಗಳು**

# ಹಿಂದೂ ಮಹಿಳೆ ಮೇಲೆ ಅತ್ಯಾಚಾರವೆಸಗಿದ ಮುಸ್ಲಿಂ ಯುವಕ ಅರೆಸ್ಟ್, ಮನೆ ನೆಲಸಮ

**ಗುಣಾ:** ತನ್ನ ಸ್ನೇಹಿತೆಯ ಮೇಲೆ ಅಮಾನುಷವಾಗಿ ಅತ್ಯಾಚಾರ ನಡೆಸಿ ಕೊಲೆಗೆ ಯತ್ನಿಸಿದ ಆರೋಪದ ಮೇಲೆ ವ್ಯಕ್ತಿಯೊಬ್ಬನನ್ನು ಬಂಧಿಸಿರುವ ಪೊಲೀಸರು ನಂತರ ಆತನ ಮನೆಯ ಅಕ್ರಮ ಭಾಗವನ್ನು ಕೆಡವಿರುವ ಘಟನೆ ಮಧ್ಯಪ್ರದೇಶದ ಗುನಾ ಜಿಲ್ಲೆಯಲ್ಲಿ ನಡೆದಿದೆ.

ಅಯಾನ್ ಖಾನ್ (20)ಬಂಧಿತ ಆರೋಪಿಯಾಗಿದ್ದು ಈತ 23 ವರ್ಷದ ಯುವತಿಯ ಮೇಲೆ ಅತ್ಯಾಚಾರ ಮಾಡುವ ಮುನ್ನ ಕಣ್ಣಿಗೆ ಅಂಟಿನ ರಸಾಯನಿಕ ಹಾಕಿದ್ದ ಹಿನ್ನಲೆಯಲ್ಲಿ ಆಕೆಯ ಒಂದು ಕಣ್ಣಿಗೆ ಗಂಭೀರ ಗಾಯಗಳಾಗಿವೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಕಳೆದ 10 ದಿನಗಳಿಂದ ಆರೋಪಿಯೊಂದಿಗೆ ಇದ್ದೆ, ತನ್ನನ್ನು ಮದುವೆಯಾಗುವಂತೆ ಕೇಳಿದಾಗ ದೌರ್ಜನ್ಯ ಎಸಗಿದ್ದಾನೆ, ಬೆಲ್ಟ್‌ನಿಂದ ಥಳಿಸಿದ್ದಾನೆ ಮತ್ತು ಆಕೆಯ ಕಣ್ಣಿಗೆ ಬಲವಾದ ಅಂಟು ಹಾಕಿದ್ದಾನೆ ಎಂದು ಸಂತ್ರಸ್ಥೆ ದೂರನ್ನು ಉಲ್ಲೇಖಿಸಿದ್ದಾಳೆ

ಏಪ್ರಿಲ್ 18 ರಂದು ತನ್ನ ಬೈಕ್‌ನಲ್ಲಿ 60 ಲೀಟರ್ ಮದ್ಯವನ್ನು ಸಾಗಿಸುತ್ತಿದ್ದಾಗ ಆರೋಪಿಯನ್ನು ಬಂಧಿಸಲಾಯಿತು. ಅಬಕಾರಿ ಕಾಯ್ದೆ. ಅತ್ಯಾಚಾರ, ಹಲ್ಲೆ ಸೇರಿ ವಿವಿಧ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ ಮತ್ತು ಇದೇ ವೇಳೆ ಆತನ ಮನೆಯ ಅಕ್ರಮ ಭಾಗವನ್ನು ಕೆಡವಿದ್ದಾರೆ. ಮಹಿಳೆಗೆ ಚಿಕಿತ್ಸೆ ನೀಡಿದ ಗುಣಾ ಮೂಲದ ಖಾಸಗಿ ಆಸ್ಪತ್ರೆಯ ನೇತ್ರಶಾಸ್ತ್ರಜ್ಞರು ಆಕೆಯ ಒಂದು ಕಣ್ಣಿಗೆ ಗಂಭೀರ ಗಾಯಗಳಾಗಿವೆ ಎಂದು ಹೇಳಿದರು.



# ವಿಶ್ವದ ಅತಿ ಎತ್ತರದ ಯುದ್ಧಭೂಮಿ ಸಿಯಾಚಿನ್‌ಗೆ ರಾಜನಾಥ್ ಸಿಂಗ್ ಭೇಟಿ

**ನವದೆಹಲಿ:** ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಇಂದು ವಿಶ್ವದ ಅತಿ ಎತ್ತರದ ಯುದ್ಧಭೂಮಿ ಸಿಯಾಚಿನ್‌ಗೆ ಭೇಟಿ ನೀಡಿ ಈ ಪ್ರದೇಶದಲ್ಲಿ ಭಾರತದ ಒಟ್ಟಾರೆ ಮಿಲಿಟರಿ ಸನ್ನದ್ಧತೆಯನ್ನು ಪರಿಶೀಲಿಸಿದ್ದಾರೆ. ಆಯಕಟ್ಟಿನ ಪ್ರಮುಖ ಪ್ರದೇಶದಲ್ಲಿ ಭಾರತೀಯ ಸೇನೆಯು ತನ್ನ ಅಸ್ತಿತ್ವದ 40 ನೇ ವರ್ಷವನ್ನು ಗುರುತಿಸಿದ ಒಂದು ವಾರದ ನಂತರ ಸಚಿವ ಸಿಂಗ್ ಅವರ ಸಿಯಾಚಿನ್ ಭೇಟಿ ನೀಡಿದ್ದಾರೆ.

ಸೇನಾ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ ಅವರೊಂದಿಗೆ ರಕ್ಷಣಾ ಸಚಿವರು ಈ ಪ್ರದೇಶದ ಒಟ್ಟಾರೆ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದರು ಎಂದು ಅದಿಕಾರಿಗಳು ತಿಳಿಸಿದ್ದಾರೆ. ಇದೇ ವೇಳೆ ಸಿಂಗ್ ಅವರು ಸಿಯಾಚಿನ್‌ನಲ್ಲಿ ನಿಯೋಜಿಸಲಾದ ಸೈನಿಕರೊಂದಿಗೆ ಸಂವಾದ ನಡೆಸಿದರು. ಕಾರಕೋರಂ ಶ್ರೇಣಿಯಲ್ಲಿ ಸುಮಾರು 20,000 ಅಡಿ ಎತ್ತರದಲ್ಲಿರುವ ಸಿಯಾಚಿನ್ ಹಿಮನದಿಯು ವಿಶ್ವದ ಅತಿ ಎತ್ತರದ ಮಿಲಿಟರಿ ವಲಯ ಎಂದು ಕರೆಯಲ್ಪಡುತ್ತದೆ, ಅಲ್ಲಿ ಸೈನಿಕರು ಹಿಮಪಾತ ಮತ್ತು ಹೆಚ್ಚಿನ ಗಾಳಿಯೊಂದಿಗೆ ಹೋರಾಡಬೇಕಾಗುತ್ತದೆ.

ಆಪರೇಷನ್ ಮೇಘದೂತ್ ಅಡಿಯಲ್ಲಿ ಭಾರತೀಯ ಸೇನೆಯು ಏಪ್ರಿಲ್, 1984 ರಲ್ಲಿ ಸಿಯಾಚಿನ್ ಹಿಮನದಿಯ ಮೇಲೆ ತನ್ನ ಸಂಪೂರ್ಣ ನಿಯಂತ್ರಣವನ್ನು ಸ್ಥಾಪಿಸಿತು. ಕಳೆದ ಕೆಲವು ವರ್ಷಗಳಿಂದ ಭಾರತೀಯ ಸೇನೆಯು ಸಿಯಾಚಿನ್‌ನಲ್ಲಿ ತನ್ನ ಅಸ್ತಿತ್ವವನ್ನು ಬಲಪಡಿಸಿದೆ. ಕಳೆದ ವರ್ಷ ಜನವರಿಯಲ್ಲಿ, ಸೇನೆಯ ಕಾಪ್ಸ್ ಆಫ್ ಇಂಜಿನಿಯರ್ಸ್‌ನ ಕ್ಯಾಪ್ಟನ್ ಶಿವ ಚೌಹಾಣ್ ಅವರನ್ನು ಸಿಯಾಚಿನ್ ಗ್ಲೇಸಿಯರ್ನಲ್ಲಿ ಮುಂಚೂಣಿಯ ಪೋಸ್ಟ್ ನಲ್ಲಿ ನಿಯೋಜಿಸಲಾಯಿತು, ಪ್ರಮುಖ ಯುದ್ಧ ಭೂಮಿಯಲ್ಲಿ ಮಹಿಳಾ ಸೇನಾ ಅಧಿಕಾರಿಯ ಮೊದಲ ಕಾರ್ಯಾಚರಣೆಯ ನಿಯೋಜನೆ ಕೂಡ ಬರಲಿದೆ.



### ಸಾಟಿಯಿಲ್ಲದ ಶೌರ್ಯ

**ಸಿಯಾಚಿನ್ ಹಿಮನದಿಯ ಮೇಲಿನ ಭಾರತೀಯ ಸೇನೆಯ ನಿಯಂತ್ರಣವು ಸಾಟಿಯಿಲ್ಲದ ಶೌರ್ಯ ಮತ್ತು ನಿರ್ಣಯದ ಕಥೆ ಮಾತ್ರವಲ್ಲದೆ ತಾಂತ್ರಿಕ ಪ್ರಗತಿಗಳು ಮತ್ತು ವ್ಯವಸ್ಥಾಪನಾ ಸುಧಾರಣೆಗಳ ಅದ್ಭುತ ಪ್ರಯಾಣವಾಗಿದೆ, ಅದು ಅತ್ಯಂತ ಭೀಕರವಾದ ಭೂ ಪ್ರದೇಶದಿಂದ ಅದಮ್ಯ ಚೈತನ್ಯ ಮತ್ತು ನಾವೀನ್ಯತೆಯ ಸಂಕೇತವಾಗಿ ಪರಿವರ್ತಿಸಿತು ಎಂದು ಸೇನೆಯ ಅಧಿಕಾರಿಯೊಬ್ಬರು ಹೇಳಿದ್ದಾರೆ.**

# ಜಪಾನ್ ನೌಕಾಪಡೆಯ ಹೆಲಿಕಾಪ್ಟರ್ ಅಪಘಾತ, 7 ಸಿಬ್ಬಂದಿ ನಾಪತ್ತೆ

**ಟೋಕಿಯೊ:** ಜಪಾನ್‌ನ ಎರಡು ನೌಕಾಪಡೆಯ ಹೆಲಿಕಾಪ್ಟರ್‌ಗಳ ಅಪಘಾತಕ್ಕೆ ಒಳಗಾಗಿ ಎಂಟು ಸಿಬ್ಬಂದಿಗಳಲ್ಲಿ ಒಬ್ಬರು ಮೃತಪಟ್ಟಿದ್ದು, ಏಳು ನಾಪತ್ತೆಯಾಗಿದ್ದು ಅವರಿಗಾಗಿ ಶೋಧ ಮುಂದುವರಿದಿದೆ. ಅಪಘಾತದ ಬಗ್ಗೆ ಫ್ಲೈಟ್ ಡೇಟಾ ರೆಕಾರ್ಡರ್ ಆರಂಭಿಕ ವಿಶ್ಲೇಷಣೆಯು ತಾಂತ್ರಿಕ ಸಮಸ್ಯೆಗಳ ಯಾವುದೇ ಲಕ್ಷಣವನ್ನು ತೋರಿಸಿಲ್ಲ ಎಂದು ಜಪಾನ್‌ನ ರಕ್ಷಣಾ ಸಚಿವರು ಹೇಳಿದ್ದಾರೆ, ಇದು ಮಾನವ ದೋಷದ ಸಾಧ್ಯತೆಯನ್ನು ಸೂಚಿಸುತ್ತದೆ ಎಂದು ಶಂಕಿಸಲಾಗಿದೆ. ಪ್ರತಿ ಹೆಲಿಕಾಪ್ಟರ್‌ನಲ್ಲಿರುವ ಎರಡು ಫ್ಲೈಟ್ ಡೇಟಾ ರೆಕಾರ್ಡರ್‌ಗಳ ದತ್ತಾಂಶದ ಆರಂಭಿಕ ವಿಶ್ಲೇಷಣೆಯು ಅವರ ಹಾರಾಟದ ಸಮಯದಲ್ಲಿ ಯಾವುದೇ ಅಸಹಜತೆಯನ್ನು ತೋರಿಸಿಲ್ಲ ಮತ್ತು ಯಾಂತ್ರಿಕ ವೈಫಲ್ಯವು ಅಪಘಾತಕ್ಕೆ ಕಾರಣವಲ್ಲ ಎಂದು ರಕ್ಷಣಾ ಸಚಿವ ಮಿನೋರು ಕಿಹರಾ ಹೇಳಿದ್ದಾರೆ.

ಟೋಕಿಯೊದಿಂದ ದಕ್ಷಿಣಕ್ಕೆ 600 ಕಿಲೋ ಮೀಟರ್ ದೂರದಲ್ಲಿರುವ ತೊರಿಶಿಮಾ ದ್ವೀಪದ ಬಳಿ ರಾತ್ರಿ ಜಲಾಂತರ್ಗಾಮಿ ವಿರೋ ತರಬೇತಿಯ ಸಮಯದಲ್ಲಿ ಕಡಲ ಸ್ವ-ರಕ್ಷಣಾ ಪಡೆಯ ಎರಡು ಎಸ್‌ಎಚ್-60 ವಿಚಕ್ಷಣ ಹೆಲಿಕಾಪ್ಟರ್‌ಗಳು ಸಂಪರ್ಕವನ್ನು ಕಳೆದುಕೊಂಡವು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನೀರಿಗೆ ಹಾರಿ ಚೇತರಿಸಿಕೊಂಡಿದ್ದ ಸಿಬ್ಬಂದಿ ಮೃತಪಟ್ಟಿದ್ದಾರೆ ಎಂದು ಘೋಷಿಸಲಾಗಿದೆ ಇನ್ನೂ ನಾಪತ್ತೆಯಾಗಿರುವ ಏಳು ಮಂದಿಗಾಗಿ ಶೋಧ ಕಾರ್ಯ ಮುಂದುವರೆದಿದೆ. ತೋರಿಶಿಮಾದ ಪೂರ್ವಕ್ಕೆ ಕ್ರ್ಯಾಶ್ ಸೈಟ್‌ನಲ್ಲಿರುವ ಸಮುದ್ರತಳವು ಸುಮಾರು 5.5 ಕಿಲೋಮೀಟರ್ ಆಳದಲ್ಲಿದೆ ಮತ್ತು ರಕ್ಷಣಾ ಕಾರ್ಯ ಒಂದು ಸವಾಲಾಗಿದೆ ಎಂದು ಪರಿಗಣಿಸಲಾಗಿದೆ.

ಎರಡು ಹೆಲಿಕಾಪ್ಟರ್‌ಗಳು ತುಂಬಾ ಹತ್ತಿರ ಬಂದು ಡಿಕ್ಕಿ ಹೊಡೆದಿರಬಹುದು ಎಂದು ಅಧಿಕಾರಿಗಳು ಅಂದಾಜಿಸಿದ್ದಾರೆ ಎಂದು ಕಿಹರಾ ಹೇಳಿದ್ದಾರೆ. ಎರಡು ವಿಮಾನಗಳ ಫ್ಲೈಟ್ ಡೇಟಾ ರೆಕಾರ್ಡರ್‌ಗಳು ಹತ್ತಿರದಲ್ಲಿ ಕಂಡುಬಂದಿವೆ, ಜೊತೆಗೆ ಪ್ರತಿ ಹೆಲಿಕಾಪ್ಟರ್ನಿಂದ ಬ್ಲೇಡ್, ಹಲವಾರು ಹೆಲ್ಮೆಟ್‌ಗಳು ಮತ್ತು ಎರಡೂ ವಿಮಾನಗಳಿಂದ ಎಂದು ನಂಬಲಾದ ತುಣುಕುಗಳು ಕಾಣುತ್ತಿವೆ. ಎಸಿಕೋಸ್ಕಿ ಅಭಿವೃದ್ಧಿಪಡಿಸಿದ ಮತ್ತು ಸೀಹಾಕ್ಸ್ ಎಂದು ಕರೆಯಲ್ಪಡುವ ಅವಳಿ-ಎಂಜಿನ್, ಬಹು-ಮಿಷನ್ ಹೆಲಿಕಾಪ್ಟರ್‌ಗಳನ್ನು ಜಪಾನ್‌ನಲ್ಲಿ ಮಿತ್ಸುಬಿಷಿ ಹೆವಿ ಇಂಡಸ್ಟ್ರೀಸ್‌ನಿಂದ ಮಾರ್ಪಡಿಸಲಾಗಿದೆ ಮತ್ತು ಉತ್ಪಾದಿಸಲಾಗಿದೆ.




### ರಕ್ಷಣೆಯನ್ನು ಬಲಪಡಿಸುತ್ತದೆ

**ಜಪಾನ್ ತನ್ನ 2022 ರ ಭದ್ರತಾ ಕಾರ್ಯತಂತ್ರದ ಅಡಿಯಲ್ಲಿ, ತನ್ನ ಮಿಲಿಟರಿ ರಚನೆಯನ್ನು ವೇಗಗೊಳಿಸುತ್ತದೆ ಮತ್ತು ಪೆಸಿಫಿಕ್ ಮತ್ತು ಪೂರ್ವ ಚೀನಾ ಸಮುದ್ರದ ನೈಋತ್ಯ ಜಪಾನಿನ ದ್ವೀಪಗಳಲ್ಲಿ ಚೀನಾದ ಹೆಚ್ಚುತ್ತಿರುವ ದೃಢವಾದ ಮಿಲಿಟರಿಯಿಂದ ಬೆದರಿಕೆಗಳನ್ನು ಎದುರಿಸಲು ತನ್ನ ರಕ್ಷಣೆಯನ್ನು ಬಲಪಡಿಸುತ್ತದೆ.**

# ಕಾಶ್ಮೀರದಲ್ಲಿ ಒಂಬತ್ತು ಸ್ಥಳಗಳಲ್ಲಿ ಎನ್‌ಐಎ ದಾಳಿ

**ನವದೆಹಲಿ:** ಭಯೋತ್ಪಾದನಾ ಚಟುವಟಿಕೆಗಳಿಗೆ ಸಂಬಂಧಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಜಮ್ಮು ಮತ್ತು ಕಾಶ್ಮೀರದ ಶ್ರೀನಗರದ ಒಂಬತ್ತು ಸ್ಥಳಗಳಲ್ಲಿ ಶೋಧ ನಡೆಸಿದೆ. 2022 ರಲ್ಲಿ ಏಜೆನ್ಸಿ ದಾಖಲಿಸಿದ ಪ್ರಕರಣದ ಭಾಗವಾಗಿ ಭಯೋತ್ಪಾದನೆಗೆ ಸಂಬಂಧಿಸಿದ ವ್ಯಕ್ತಿಗಳಿಗೆ ಸಂಬಂಧಿಸಿದ ವಿವಿಧ ಸೈಟ್‌ಗಳಲ್ಲಿ ಭದ್ರತಾ ಪಡೆಗಳ ಸಹಯೋಗದೊಂದಿಗೆ ಈ ದಾಳಿ ನಡೆಸಲಾಗಿದೆ.

ಶ್ರೀನಗರದಲ್ಲಿ ನೆಲೆಸಿರುವ ಕೆಲವು ಶಂಕಿತರ ಬಗ್ಗೆ ಪಡೆದ ನಿರ್ದಿಷ್ಟ ಮಾಹಿತಿಯ ಮೇರೆಗೆ ಭಯೋತ್ಪಾದನಾ ನಿಗ್ರಹ ದಳವು ಹುಡುಕಾಟವನ್ನು ಪ್ರಾರಂಭಿಸಿದೆ. ಕೋಕರ್ನಾಗ್ ಎನ್ ಕೌಂಟರ್ ಪ್ರಕರಣದಲ್ಲಿ ಇಬ್ಬರು ಆರೋಪಿಗಳನ್ನು ಎನ್‌ಐಎ ಚಾರ್ಜ್‌ಶೀಟ್ ಮಾಡಿದ ಸುಮಾರು ಒಂದು ತಿಂಗಳ ನಂತರ ಶೋಧ ಕಾರ್ಯಾಚರಣೆಯನ್ನು ನಡೆಸಲಾಯಿತು. ಪ್ರಕರಣದ ಶಂಕಿತರು ಲಷ್ಕರ್-ಎ-ತೊಯ್ಬಾದ (ಎಲ್‌ಇಟಿ) ಶಾಖೆಯಾದ ದಿ ರೆಸಿಸ್ಟೆಂಟ್ ಫ್ರಂಟ್ (ಟಿಆರೆಫ್ ) ಗೆ ಸಂಪರ್ಕ ಹೊಂದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಎಲ್‌ಇಟಿ ಮತ್ತು ಟಿಆರೆಫ್ ಎರಡೂ ನಿಷೇಧಿತ ಸಂಘಟನೆಗಳಾಗಿವೆ ಮತ್ತು ಕಾಶ್ಮೀರಿ ಯುವಕರನ್ನು ಜಿಹಾದ್ ಹೆಸರಿನಲ್ಲಿ ಭಯೋತ್ಪಾದಕ ಸಂಘಟನೆಗಳಿಗೆ ಸೇರಲು ನಿರಂತರ ಪ್ರಚೋದನೆ ಮತ್ತು ಪ್ರೇರಣೆಯಲ್ಲಿ ತೊಡಗಿಸಿಕೊಂಡಿವೆ ಎಂದು ಆರೋಪಿಸಲಾಗಿದೆ. ಟ್ವಿಟರ್, ಟೆಲಿಗ್ರಾಮ್ ಮತ್ತು ಯುಟ್ಯೂಬ್ ಚಾನೆಲ್‌ಗಳಂತಹ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ಗಳಲ್ಲಿ ತಮ್ಮ ಉದ್ದೇಶವನ್ನು ಉತ್ತೇಜಿಸಲು ಮತ್ತು ನಿರುದ್ಯೋಗಿ ಯುವಕರನ್ನು ಭಯೋತ್ಪಾದಕ ಚಟುವಟಿಕೆಗಳನ್ನು ನಡೆಸಲು ಎರಡು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಎಲ್‌ಇಟಿಯು 1990 ರ ದಶಕದ ಆರಂಭದಲ್ಲಿ ರೂಪುಗೊಂಡ ಅತಿದೊಡ್ಡ ಭಯೋತ್ಪಾದಕ ಗುಂಪು ಮತ್ತು ಅನಂತನಾಗ್ ಪ್ರದೇಶದಲ್ಲಿ ಜಾಲವನ್ನು ಪುನರುಜ್ಜೀವನಗೊಳಿಸುವಲ್ಲಿ ತೊಡಗಿಸಿಕೊಂಡಿದೆ.




**ಸೈಟ್‌ಗಳಲ್ಲಿ ಭದ್ರತಾ ಪಡೆಗಳ ದಾಳಿ**

# ಜೈಲುವಾಸಿ ಕೇಜ್ರಿವಾಲ್ ಮನವಿ ತಿರಸ್ಕರಿಸಿದ ಕೋರ್ಟ್

## • ಕೇಜ್ರಿವಾಲ್ ಅವರಿಗೆ ಪ್ರತಿ ದಿನ ಇನ್ಸುಲಿನ್ ನೀಡಬೇಕೇ? ಬೇಡವೇ? ಅನ್ನೋದನ್ನ ತಂಡ ನಿರ್ಧರಿಸಲಿ: ದಿಲ್ಲಿ ನ್ಯಾಯಾಲಯ

**ಹೊಸ ದಿಲ್ಲಿ:** ಪ್ರತಿ ದಿನ 15 ನಿಮಿಷಗಳ ಕಾಲ ವೈದ್ಯರೊಂದಿಗೆ ವಿಡಿಯೋ ಸಂವಾದ ನಡೆಸಲು ಅವಕಾಶ ನೀಡುವಂತೆ ಕೋರಿ ದಿಲ್ಲಿ ಸಿಎಂ ಅರವಿಂದ ಕೇಜ್ರಿವಾಲ್ ಸಲ್ಲಿಕೆ ಮಾಡಿದ್ದ ಅರ್ಜಿಯನ್ನು ದಿಲ್ಲಿ ನ್ಯಾಯಾಲಯ ತಿರಸ್ಕರಿಸಿದೆ. ತಾವು ಟೈಪ್ 2 ಡಯಾ ಬಿಟೀಸ್‌ನಿಂದ ಬಳಲುತ್ತಿದ್ದು, ತಮಗೆ ಪ್ರತಿ ದಿನ ವೈದ್ಯರ ಸಲಹೆಯ ಅಗತ್ಯತೆ ಇದೆ ಎಂದು ದಿಲ್ಲಿಯ ರೋಸ್ ಅವೆನ್ಯೂ ನ್ಯಾಯಾಲಯಕ್ಕೆ ಮನವಿ ಸಲ್ಲಿಕೆ ಮಾಡಿದ್ದರು.

ದಿಲ್ಲಿ ಸಿಎಂ ಸಲ್ಲಿಕೆ ಮಾಡಿದ್ದ ಮನವಿ ತಿರಸ್ಕರಿಸಿರುವ ನ್ಯಾಯಾಲಯ, ಕೇಜ್ರಿವಾಲ್ ಅವರಿಗೆ ಚಿಕಿತ್ಸೆ ನೀಡುವ ಸಂಬಂಧ ವೈದ್ಯಕೀಯ ಸಲಹಾ ತಂಡ ರಚಿಸುವಂತೆ ಸೂಚನೆ ನೀಡಿದ್ದು. ಈ ತಂಡದಲ್ಲಿ ತಜ್ಞ ವೈದ್ಯರು ಇರಬೇಕು ಎಂದು ಹೇಳಿದೆ. ಈ ತಂಡವು ಕೇಜ್ರಿವಾಲ್ ಅವರಿಗೆ ಪ್ರತಿ ದಿನ ಇನ್ಸುಲಿನ್ ನೀಡಬೇಕೇ? ಬೇಡವೇ? ಅನ್ನೋದನ್ನ ನಿರ್ಧರಿಸಲಿ ಎಂದೂ ನ್ಯಾಯಾಲಯ ಸೂಚಿಸಿದೆ.

ಇದೇ ವೇಳೆ ದಿಲ್ಲಿ ನ್ಯಾಯಾಲಯ ಕೇಜ್ರಿವಾಲ್ ಅವರಿಗೆ ಸೂಕ್ತ ವೈದ್ಯಕೀಯ ಸೌಲಭ್ಯ ಸಿಗುವಂತೆ ನೋಡಿಕೊಳ್ಳಿ ಎಂದು ಜೈಲಿನ ಅಧಿಕಾರಿಗಳಿಗೆ ತಾಕೀತು ಮಾಡಿದೆ.

ಡಯಾಬಿಟಾಲಜಿಸ್ಟ್‌ಗಳು, ಎಂಡೋಕ್ರೂನಾಲಜಿಸ್ಟ್‌ಗಳು ಸೇರಿದಂತೆ ತಜ್ಞರ ತಂಡದ ನೆರವಿನಿಂದ ವಿಶೇಷ ಚಿಕಿತ್ಸೆ ನೀಡುವಂತೆ ಸೂಚಿಸಿದೆ. ಈ ವೇಳೆ ತನ್ನ ವಾದ ಮಂಡಿಸಿದ್ದ ಇಡಿ ಪರ ವಕೀಲರು, ಕೇಜ್ರಿವಾಲ್ ಅವರು ತಮ್ಮ ರಕ್ತದಲ್ಲಿನ ಸಕ್ಕರೆ ಪ್ರಮಾಣ ಹೆಚ್ಚಿಸಿಕೊಳ್ಳಲು ಅಧಿಕ ಸಕ್ಕರೆಯುಕ್ತ ಆಹಾರ ಸೇವನೆ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದರು. ಸಿಹಿ ತಿನಿಸು, ಮಾವಿನ ಹಣ್ಣು, ಆಲೂ ಪೂರಿ ಸೇವನೆ ಮಾಡುತ್ತಿದ್ದಾರೆ ಎಂದು ಇಡಿ ಪರ ವಕೀಲರು ಆರೋಪಿಸಿದ್ದರು.

ಈ ರೀತಿ ತಮ್ಮ ದೇಹದಲ್ಲಿ ಸಕ್ಕರೆ ಪ್ರಮಾಣ ಹೆಚ್ಚಿಸಿಕೊಂಡು ಇದರ ಆಧಾರದ ಮೇಲೆ ಜಾಮೀನು ಪಡೆಯಲು ಕೇಜ್ರಿವಾಲ್ ಯತ್ನಿಸುತ್ತಿದ್ದಾರೆ ಎಂದು ಇಡಿ ಪರ ವಕೀಲರು ವಾದಿಸಿದ್ದರು. ಕೇಜ್ರಿವಾಲ್ ಅವರ ಡಯಟ್ ಚಾರ್ಟ್ ಅನ್ನು ನ್ಯಾಯಾಲಯಕ್ಕೆ ವಿವರಿಸಿದ್ದ ಸಿಂಘ್ವಿ, ಕೇಜ್ರಿವಾಲ್ ಅವರು ಕಳೆದ 45 ದಿನಗಳಲ್ಲಿ 3 ಬಾರಿ ಮಾತ್ರ ಮಾವು ಸೇವಿಸಿದ್ದಾರೆ ಎಂದು ಹೇಳಿದ್ದರು.

- ಕೇಜ್ರಿವಾಲ್ ಅವರಿಗೆ ಚಿಕಿತ್ಸೆ ನೀಡಲು ವೈದ್ಯಕೀಯ ಸಲಹಾ ತಂಡ ರಚಿಸಿ
- ಈ ತಂಡದಲ್ಲಿ ತಜ್ಞ ವೈದ್ಯರು ಇರಬೇಕು
- ಕೇಜ್ರಿವಾಲ್ ಅವರಿಗೆ ಪ್ರತಿ ದಿನ ಇನ್ಸುಲಿನ್ ನೀಡಬೇಕೇ? ಬೇಡವೇ? ಅನ್ನೋದನ್ನ ತಂಡ ನಿರ್ಧರಿಸಲಿ: ದಿಲ್ಲಿ ನ್ಯಾಯಾಲಯ



**ವೈದ್ಯರ ಸಲಹೆ ಅಗತ್ಯತೆ**

### ಮಧುಮೇಹ ನಿರ್ವಹಣೆಗೆ ಇನ್ಸುಲಿನ್ ಅತ್ಯಗತ್ಯ

**ದಿಲ್ಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ಕಳೆದ ತಿಂಗಳು ದಿಲ್ಲಿ ಸಿಎಂ ಅರವಿಂದ ಕೇಜ್ರಿವಾಲ್ ಅವರನ್ನು ಬಂಧನ ಮಾಡಲಾಗಿತ್ತು. ಕಳೆದ ವಾರವಷ್ಟೇ ನ್ಯಾಯಾಲಯದ ಮೆಟ್ಟಿಲೇರಿದ್ದ ಅರವಿಂದ ಕೇಜ್ರಿವಾಲ್, ತಿಹಾರ್ ಜೈಲಿನ ಸಿಬ್ಬಂದಿ ತಮಗೆ ದೈನಂದಿನ ಇನ್ಸುಲಿನ್ ಒದಗಿಸುವಿಕೆಯಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದರು. ತಾವು ಮಧುಮೇಹಿ ಆಗಿದ್ದು, ತಮಗೆ ಮಧುಮೇಹ ನಿರ್ವಹಣೆಗೆ ಇನ್ಸುಲಿನ್ ಅತ್ಯಗತ್ಯವಾಗಿ ಬೇಕಿದೆ ಎಂದು ಕೇಜ್ರಿವಾಲ್ ಹೇಳಿದ್ದರು.**

### ಆರೋಗ್ಯ ಸಮಸ್ಯೆಗಳನ್ನು ಮೈ ಮೇಲೆ ಎಳೆದುಕೊಳ್ಳೋದಿಲ್ಲ

**ಇಡಿ ಪರ ವಕೀಲರ ಈ ಆರೋಪವನ್ನು ಸ್ಪಷ್ಟವಾಗಿ ತಳ್ಳಿ ಹಾಕಿದ್ದ ಕೇಜ್ರಿವಾಲ್ ಪರ ವಕೀಲ ಅಭಿ ಷೇಕ್ ಮನು ಸಿಂಘ್ವಿ, ಯಾರೂ ಕೂಡಾ ಕೇವಲ ಜಾಮೀನು ಪಡೆದುಕೊಳ್ಳಬೇಕು ಅನ್ನೋ ಕಾರಣಕ್ಕೆ ಶುಗರ್ ಹೆಚ್ಚಿಸಿಕೊಂಡು ಪಾರ್ಶ್ವವಾಯುನಂಥಾ ಗಂಭೀರ ಆರೋಗ್ಯ ಸಮಸ್ಯೆಗಳನ್ನು ಮೈಮೇಲೆ ಎಳೆದುಕೊಳ್ಳೋದಿಲ್ಲ ಎಂದು ಹೇಳಿದ್ದರು.**

## ಮಿನಿ ನ್ಯೂಸ್

### ಜೈನ ಸಮುದಾಯಕ್ಕೆ ಬೈಡೆನ್ ಶುಭಾಶಯ

**ವಾಷಿಂಗ್ಟನ್:** ಮಹಾವೀರ ಜಯಂತಿ ಸಂದರ್ಭದಲ್ಲಿ ಅಮೆರಿಕ ಅಧ್ಯಕ್ಷ ಜೋ ಬೈಡನ್ ಮತ್ತು ಪ್ರಥಮ ಮಹಿಳೆ ಜಿಲ್ ಬೈಡನ್ ಜೈನ ಧರ್ಮೀಯರಿಗೆ ಶುಭಾಶಯ ಕೋರಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ ಅವರು, ಬಾಲ್ಯದಲ್ಲಿ ವರ್ಧಮಾನ ಎಂದು ಕರೆಯಲ್ಪಡುತ್ತಿದ್ದ ಭಗವಾನ್ ಮಹಾವೀರರ ಹುಟ್ಟಿದ ಹಬ್ಬವನ್ನು ಮಹಾವೀರ ಜಯಂತಿಯಾಗಿ ಆಚರಿಸಲಾಗುತ್ತದೆ. ಮಹಾವೀರರು ಕ್ರಿಸ್ತಪೂರ್ವ 615ರಲ್ಲಿ ರಾಜವಂಶದಲ್ಲಿ ಜನಿಸಿದ್ದರು. ಪ್ರೀತಿ, ಸಂತಸ ಮತ್ತು ಸಾಮರಸ್ಯವನ್ನು ಹರಡುವ ಮಹಾವೀರ ಸ್ವಾಮಿಯವರ ಮೌಲ್ಯಗಳನ್ನು ಗುರುತಿಸಿ ಗೌರವಿಸೋಣ ಎಂದು ಹೇಳಿದ್ದಾರೆ. ಬಾಲ್ಯದಲ್ಲಿ ವರ್ಧಮಾನ ಎಂದು ಕರೆಯಲ್ಪಡುತ್ತಿದ್ದ ಭಗವಾನ್ ಮಹಾವೀರರ ಹುಟ್ಟಿದ ಹಬ್ಬವನ್ನು ಮಹಾವೀರ ಜಯಂತಿಯಾಗಿ ಆಚರಿಸಲಾಗುತ್ತದೆ. ಮಹಾವೀರರು ಕ್ರಿಸ್ತಪೂರ್ವ 615ರಲ್ಲಿ ರಾಜವಂಶದಲ್ಲಿ ಜನಿಸಿದ್ದರು. ವರ್ಧಮಾನ ಬೆಳೆಯುತ್ತಾ ರಾಜನ ಸ್ಥಾನಮಾನವನ್ನು ಧಿಕ್ಕರಿಸಿ, 30ನೇ ವಯಸ್ಸಿನಲ್ಲಿ ಸತ್ಯ ಮತ್ತು ಜ್ಞಾನವನ್ನು ಅರಸುವ ಆಧ್ಯಾತ್ಮಿಕ ಪಯಣ ಆರಂಭಿಸಿದರು. 12 ವರ್ಷ ಕಾಲ ಅರಣ್ಯದಲ್ಲಿ ಧ್ಯಾನ ಕೈಗೊಂಡು ಕೈವಲ್ಯ ಜ್ಞಾನವನ್ನು ಸಂಪಾದಿಸಿ ಬಳಿಕ ಜೈನಧರ್ಮವನ್ನು ಪ್ರಚಾರಪಡಿಸಿದ್ದರು.

### ರಾಹುಲ್ ಗಾಂಧಿಗೆ ಅನಾರೋಗ್ಯ ಕೇರಳ ಚುನಾವಣಾ ಪ್ರಚಾರಕ್ಕೆ ಗೈರು



**ತಿರುವನಂತಪುರಂ:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಅನಾರೋಗ್ಯದ ಹಿನ್ನೆಲೆಯಲ್ಲಿ ಕೇರಳದಲ್ಲಿ ನಡೆಯಬೇಕಿದ್ದ ಚುನಾವಣಾ ಪ್ರಚಾರವನ್ನು ರದ್ದುಗೊಳಿಸಿದ್ದಾರೆ.

ಕೇರಳ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಹಂಗಾಮಿ ಅಧ್ಯಕ್ಷ, ಯುಡಿಎಫ್ ಸಂಚಾಲಕ ಎಂಎಂ ಹಸನ್ ಮಾತನಾಡಿ ಸೋಮವಾರ ನಡೆಯಬೇಕಿದ್ದ ಗಾಂಧಿಯವರ ಎಲ್ಲಾ ಸಾರ್ವಜನಿಕ ಸಭೆಗಳನ್ನು ರದ್ದುಗೊಳಿಸಲಾಗಿದೆ ಎಂದು ಹೇಳಿದ್ದಾರೆ. ಇನ್ನು ರಾಂಚಿಯಲ್ಲಿ ನಡೆದ ಭಾರತ ಬ್ಲಾಕ್ ರ್‍ಯಾಲಿಯಲ್ಲಿಯೂ ರಾಹುಲ್ ಗಾಂಧಿ ಭಾಗಿಯಾಗಿಲ್ಲ. ಪಕ್ಷದ ಹಿರಿಯ ನಾಯಕ ಜೈರಾಮ್ ರಮೇಶ್ ಅವರು ರಾಹುಲ್ ಗಾಂಧಿ ಅವರಿಗೆ ಇದ್ದಕ್ಕಿದ್ದಂತೆ ಅನಾರೋಗ್ಯ ಕಾಣಿಸಿಕೊಂಡಿದೆ. ಪ್ರಸ್ತುತ ನವದೆಹಲಿಯಿಂದ ಬೇರೆ ಕಡೆ ಪ್ರಯಾಣ ಮಾಡಲು ಸಾಧ್ಯವಿಲ್ಲ ಎಂದು ಮಾಹಿತಿ ನೀಡಿದ್ದಾರೆ.

### ಸಿರಿಯಾದಲ್ಲಿನ ಅಮೆರಿಕದ ಸೇನಾ ನೆಲೆಗಳ ಮೇಲೆ ಇರಾಕ್‌ನಿಂದ ರಾಕೆಟ್ ದಾಳಿ: ವರದಿ

**ಮೊಸುಲ್:** ಇರಾಕ್‌ನ ಜುಮ್ಮರ್ ನಗರದಿಂದ ಈಶಾನ್ಯ ಸಿರಿಯಾದಲ್ಲಿರುವ ಅಮೆರಿಕದ ಸೇನಾ ನೆಲೆಗಳ ಮೇಲೆ ಕನಿಷ್ಠ ಐದು ರಾಕೆಟ್‌ಗಳಿಂದ ದಾಳಿ ನಡೆಸಲಾಗಿದೆ ಎಂದು ಇರಾಕ್ ಭದ್ರತಾ ಪಡೆಯ ಮೂಲಗಳು ತಿಳಿಸಿವೆ. ಫೆಬ್ರುವರಿಯಲ್ಲಿ ಇರಾಕ್‌ನಲ್ಲಿ ಇರಾನ್ ಬೆಂಬಲಿತ ಗುಂಪುಗಳು ಅಮೆರಿಕ ಸೇನಾ ಪಡೆಗಳ ಮೇಲಿನ ದಾಳಿಯನ್ನು ನಿಲ್ಲಿಸಿದ್ದವು. ಆದಾದ ಬಳಿಕ ಅಮೆರಿಕದ ಸೇನಾ ಪಡೆಗಳ ಮೇಲೆ ನಡೆದ ಮೊದಲ ದಾಳಿ ಇದಾಗಿದೆ.

ಇರಾಕ್ ಪ್ರಧಾನಿ ಸುಡಾನಿ ಅವರು ಅಮೆರಿಕ ಅಧ್ಯಕ್ಷ ಜೋ ಬೈಡನ್ ಅವರೊಂದಿಗೆ ಮಾತುಕತೆ ನಡೆಸಿ ಹಿಂದಿರುಗಿದ ಒಂದು ದಿನದ ಬಳಿಕ ಈ ದಾಳಿ ನಡೆದಿದೆ. ಇರಾಕ್‌ನ ಜುಮ್ಮರ್ ಗಡಿ ಪ್ರದೇಶದಲ್ಲಿ ಟ್ರಕ್‌ಗಳು ಸೇರಿದಂತೆ ಭದ್ರತಾ ಪಡೆಗಳನ್ನು ನಿಯೋಜಿಸಲಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

### 2016ರಲ್ಲಿ ನಡೆದ ನೇಮಕಾತಿ ಪರೀಕ್ಷೆ ಅನೂರ್ಜಿತ: ಹೈಕೋರ್ಟ್

**ಕೋಲ್ಕತ್ತ:** ಪಶ್ಚಿಮ ಬಂಗಾಳದಲ್ಲಿ ಸರ್ಕಾರಿ ಅನುದಾನಿತ ಶಾಲೆಗಳಿಗೆ 2016 ರಲ್ಲಿ ನಡೆದ ನೇಮಕಾತಿ ಪರೀಕ್ಷೆಯನ್ನು ಕೋಲ್ಕತ್ತ ಹೈಕೋರ್ಟ್ ಅನೂರ್ಜಿತಗೊಳಿಸಿದೆ. ಈ ಪರೀಕ್ಷೆಗಳ ಮೂಲಕ ನಡೆದಿದ್ದ ನೇಮಕಾತಿಗಳನ್ನು ರದ್ದುಗೊಳಿಸಿದೆ. ನ್ಯಾ.ದೇಬಾಂಗ್ಸು ಬಸಕ್ ಹಾಗೂ ಮೊಹಮ್ಮದ್ ಶಬ್ಬಾರ್ ರಶ್ದಿ ಅವರಿದ್ದ ಪೀಠ ಈ ಪರೀಕ್ಷೆ, ನೇಮಕಾತಿಗೆ ಸಂಬಂಧಿಸಿದ ಮುಂದಿನ ತನಿಖೆಯನ್ನು ಕೈಗೆತ್ತಿಕೊಳ್ಳುವಂತೆ ಸೂಚನೆ ನೀಡಿದ್ದು, 3 ತಿಂಗಳಲ್ಲಿ ವರದಿ ಸಲ್ಲಿಸುವಂತೆ ಹೇಳಿದೆ. ಪಶ್ಚಿಮ ಬಂಗಾಳ ಶಾಲಾ ಸೇವಾ ಆಯೋಗಕ್ಕೆ ಹೊಸದಾಗಿ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸುವಂತೆ ಪೀಠ ಸೂಚಿಸಿದೆ. 24,640 ಖಾಲಿ ಹುದ್ದೆಗಳಿಗೆ 23 ಲಕ್ಷ ಅಭ್ಯರ್ಥಿಗಳು SLST-2016 ಗೆ ಹಾಜರಾಗಿದ್ದರು. ಖಾಲಿ ಹುದ್ದೆಗಳ ವಿರುದ್ಧ ಒಟ್ಟು 25,753 ನೇಮಕಾತಿ ಪತ್ರಗಳನ್ನು ನೀಡಲಾಗಿದೆ ಎಂದು ಕೆಲವು ಅರ್ಜಿದಾರರ ಪರ ವಕೀಲ ಫಿರ್ದೌಸ್ ಶಮೀಮ್ ಹೇಳಿದರು.


### ಮುಯಿಝ್ಝುಗೆ ಭರ್ಜರಿ ಗೆಲುವು

**ಮಾಲೆ:** ಮಾಲ್ಡೀವ್ಸ್‌ನಲ್ಲಿ ನಡೆದ ಸಂಸದೀಯ ಚುನಾವಣೆಯಲ್ಲಿ ಅಧ್ಯಕ್ಷ ಮೊಹಮ್ಮದ್ ಮುಯಿಝ್ಝು ನೇತೃತ್ವದ ಪೀಪಲ್ಸ್ ನ್ಯಾಷನಲ್ ಕಾಂಗ್ರೆಸ್ 60ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುವ ಮೂಲಕ ಭರ್ಜರಿ ಗೆಲುವು ಸಾಧಿಸಿದೆ. ಮಾಲ್ಡೀವ್ಸ್‌ನ ಒಟ್ಟು 93 ಕ್ಷೇತ್ರಗಳಲ್ಲಿ ಸಂಸದರನ್ನು ಆಯ್ಕೆ ಮಾಡಲು ಮತದಾನ ನಡೆದಿದೆ.

ಮಾಲ್ಡೀವ್ಸ್‌ನಲ್ಲಿ ಪ್ರಭಾವವನ್ನು ಹೆಚ್ಚಿಸಲು ಪ್ರಯತ್ನಿಸುತ್ತಿರುವ ಭಾರತ ಮತ್ತು ಚೀನಾದ ನೀತಿಗಳ ಮೇಲೆ ನಿಗಾ ಇರಿಸಿರುವ ಮುಯಿಝ್ಝುಗೆ ಈ ಚುನಾವಣೆಯು ಅತ್ಯಂತ ಮಹತ್ವದ್ದಾಗಿತ್ತು. ಮಾಹಿತಿಯ ಪ್ರಕಾರ, 86 ಸ್ಥಾನಗಳ ಪೈಕಿ ಪಿಎನ್ ಸಿ 66 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಪ್ರಮುಖ ವಿರೋಧ ಪಕ್ಷವಾದ ಮಾಲ್ಡೀವಿಯನ್ ಡೆಮಾಕ್ರಟಿಕ್ ಪಾರ್ಟಿ ಕೇವಲ 12 ಸ್ಥಾನಗಳು ಮತ್ತು ಸ್ವತಂತ್ರ ಅಭ್ಯರ್ಥಿಗಳು 10 ಸ್ಥಾನಗಳನ್ನು ಗೆದ್ದಿದ್ದಾರೆ. ಉಳಿದ ಸೀಟುಗಳು ಬೇರೆ ಪಕ್ಷಗಳ ಪಾಲಾಗಿದೆ.

### 14 ವರ್ಷದ ಅಪ್ರಾಪ್ತೆಯ ಗರ್ಭಪಾತಕ್ಕೆ ಸುಪ್ರೀಂಕೋರ್ಟ್ ಅನುಮತಿ

**ನವದೆಹಲಿ:** ಸುಪ್ರೀಂ ಕೋರ್ಟ್ ಸೋಮವಾರ ಮಹತ್ವದ ತೀರ್ಪು ನೀಡಿದೆ. 14 ವರ್ಷದ ಅತ್ಯಾಚಾರ ಸಂತ್ರಸ್ತೆಗೆ 30ನೇ ವಾರದಲ್ಲಿ ಗರ್ಭಪಾತ ಮಾಡಲು ಕೋರ್ಟ್ ಅನುಮತಿ ನೀಡಿದೆ. ಅತ್ಯಾಚಾರದಿಂದ ಅಪ್ರಾಪ್ತೆ ಗರ್ಭಿಣಿಯಾಗಿದ್ದಳು. ಬಳಿಕ ಗರ್ಭಪಾತಕ್ಕೆ ಅನುಮತಿ ಕೋರಿ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಳು. ಇಂದು ಮುಖ್ಯ ನ್ಯಾ. ಡಿವೈ ಚಂದ್ರಚೂಡ್ ನೇತೃತ್ವದ ತ್ರಿ ಸದಸ್ಯ ಪೀಠದಲ್ಲಿ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ವೈದ್ಯಕೀಯ ವರದಿಗಳನ್ನು ಆಧರಿಸಿ ಗರ್ಭಪಾತಕ್ಕೆ ಅನುಮತಿ ನೀಡಿದೆ. ಇದೊಂದು ಅತ್ಯಾಚಾರ ಪ್ರಕರಣವಾಗಿದ್ದು, ಸಂತ್ರಸ್ತೆಗೆ 14 ವರ್ಷ ವಯಸ್ಸಾಗಿದೆ. ಈ ಅಸಾಧಾರಣ ಪ್ರಕರಣದಲ್ಲಿ ಗರ್ಭಪಾತವನ್ನು ಅನುಮತಿಸಲಾಗಿದೆ ಎಂದು ಕೋರ್ಟ್ ಹೇಳಿದೆ.






# ದಂಡ ಬಿದ್ದರೂ ಹೆದರದ ಕೊಹ್ಲಿ, ಅಂಪೈರ್‌ಗಳ ವಿರುದ್ಧ ಮತ್ತೆ ಕಿಡಿಕಾರಿದ ಕಿಂಗ್!

ಭಾನುವಾರ (ಏಪ್ರಿಲ್ 22) ಈಡನ್ ಗಾರ್ಡನ್ಸ್ ಕ್ರಿಕೆಟ್ ಸ್ಟೇಡಿಯಮ್‌ನಲ್ಲಿ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಕೋಲ್ಕತಾ ನೈಟ್ ರೈಡರ್ಸ್ ನಡುವಿನ ಪಂದ್ಯದ ವೇಳೆ ವಿರಾಟ್ ಕೊಹ್ಲಿ ತಮ್ಮ ವಿವಾದಾತ್ಮಕ ಔಟ್‌ನಿಂದ ಇನ್ನೂ ಹೊರಬಂದಿಲ್ಲ ಎಂದು ತೋರುತ್ತದೆ. ಮೈದಾನದಲ್ಲಿ ಅಂಪೈರ್‌ಗಳ ಜತೆ ಜಗಳವಾಡಿದ ಕಾರಣಕ್ಕೆ ದಂಡ ಹಾಕಿದ್ದಾರೆ. ಆದಾಗ್ಯೂ ಅವರು ತಮ್ಮ ಹಠಮಾರಿತನವನ್ನು ಬಿಟ್ಟಿಲ್ಲ. ಮತ್ತೊಂದು ಬಾರಿ ಟ್ವೀಟ್ ಮಾಡಿ ಅಂಪೈರ್ ವಿರುದ್ಧ ಕಿಡಿ ಕಾರಿದ್ದಾರೆ

ಬಲಗೈ ಬ್ಯಾಟರ್ ಕೊಹ್ಲಿ ಭರವಸೆಯೊಂದಿಗೆ ತಮ್ಮ ಇನ್ನಿಂಗ್ಸ್ ಅನ್ನು ಪ್ರಾರಂಭಿಸಿದ್ದರು., ಕೇವಲ ಆರು ಎಸೆತಗಳಲ್ಲಿ 18 ರನ್ ಗಳಿಸಿದ್ದರು. ಮೂರನೇ ಓವರ್‌ನ ಮೊದಲ ಎಸೆತದಲ್ಲಿ, ಹರ್ಷಿತ್ ರಾಣಾ ಮಾಜಿ ಆರ್‌ಸಿಬಿ ನಾಯಕನಿಗೆ ನಿಧಾನಗತಿಯ ಫುಲ್ ಟಾಸ್ ಎಸೆದಿದ್ದರು. ಅದು ಕೊಹ್ಲಿ ಬ್ಯಾಟ್ ತಗುಲಿ ರಿಟರ್ನ್ ಕ್ಯಾಚ್ ಆಗಿತ್ತು.

ಅಂಪೈರ್ ನೇರವಾಗಿ ಬೆರಳು ಎತ್ತಿದ್ದರು. ಆದರೆ ವಿರಾಟ್ ಕೊಹ್ಲಿಗೆ ಎಸೆತವು ಸೊಂಟದ ಎತ್ತರದ ನೋ-ಬಾಲ್ ಎಂದು ಅಂದುಕೊಂಡರು. ಅವರು ಡಿಆರ್‌ಎಸ್‌ಗೆ ಮನವಿ ಮಾಡಿದರು. ಮೂರನೇ ಅಂಪೈರ್ ಕೂಡ ಕೊಹ್ಲಿ ಕ್ರೀಸ್ ಬಿಟ್ಟು ಮುಂದಕ್ಕೆ ಬಂದಿದ್ದ ಕಾರಣ ಔಟ್ ಎಂದರು.

ಬಾಲ್ ಟ್ರ್ಯಾಕಿಂಗ್ ತಂತ್ರಜ್ಞಾನವನ್ನು ಉಲ್ಲೇಖಿಸಿದ ಮೂರನೇ ಅಂಪೈರ್, ಭಾರತದ ಮಾಜಿ ನಾಯಕ ಕ್ರೀಸ್ ಒಳಗೆ ನಿಂತಿದ್ದರೆ ಚೆಂಡು ಸೊಂಟದ ಕೆಳಗೆ ಇಳಿಯುತ್ತಿತ್ತು ಎಂದು ನಿರ್ಧಾರ ತೆಗೆದುಕೊಂಡರು. ಈ ನಿರ್ಧಾರದಿಂದ ಕೋಪಗೊಂಡ ವಿರಾಟ್ ಕೊಹ್ಲಿ ಮೈದಾನದಿಂದ ಹೊರನಡೆಯುವ ಮೊದಲು ಪಂದ್ಯದ ಅಧಿಕಾರಿಯೊಂದಿಗೆ ತೀವ್ರ ವಾಗ್ವಾದ ನಡೆಸಿದ್ದರು. ಸ್ಪಷ್ಟವಾಗಿ ಆಡಲು ಸಾಧ್ಯವಾಗದ ಬೀಮರ್ ಕೊಹ್ಲಿಗೆ ಔಟ್ ಎನ್ನುತ್ತದೆ. ಧೋನಿಯ ಬ್ಯಾಟ್ ಅಡಿಯಲ್ಲಿ ಹಾದುಹೋದ ಚೆಂಡನ್ನು ವೈಡ್ ಎಂದು ಘೋಷಿಸಲಾಗುತ್ತದೆ. ಕ್ಯಾಮೆರಾಗಳು, ರಿಪ್ಲೇಗಳು, ತಂತ್ರಜ್ಞಾನ ಎಲ್ಲವೂ ಇದೆ. ಇನ್ನೂ ಅಂತಹ ತಪ್ಪುಗಳನ್ನು ಮಾಡಲಾಗುತ್ತಿದೆ. ಕಳಪೆ ಅಂಪೈರಿಂಗ್. ಎಂದು ಬರೆದುಕೊಂಡಿದ್ದಾರೆ. ಈ ಪೋಸ್ಟ್ ಅನ್ನು ಕೊಹ್ಲಿ ಶೇರ್ ಮಾಡಿ ತಮ್ಮ ಕೋಪವನ್ನು ಮತ್ತೆ ತೋರಿದ್ದಾರೆ. ಕೋಲ್ಕತಾ ನೈಟ್ ರೈಡರ್ಸ್ ವಿರುದ್ಧದ ಪಂದ್ಯದ ವೇಳೆ ಐಪಿಎಲ್ ನೀತಿ ಸಂಹಿತೆಯನ್ನು ಉಲ್ಲಂಘಿಸಿದ್ದಕ್ಕಾಗಿ ವಿರಾಟ್ ಕೊಹ್ಲಿಗೆ ಪಂದ್ಯದ ಶುಲ್ಕದ ಶೇಕಡಾ 50 ರಷ್ಟು ದಂಡ ವಿಧಿಸಲಾಗಿದೆ. ವಜಾದ ನಂತರ ಅವರ ಆಕ್ರೋಶಕ್ಕಾಗಿ ಅವರನ್ನು ಮಂಜೂರು ಮಾಡಲಾಗಿದೆ. ಈ ಮೂಲಕ ಕೆಕೆಆರ್ ತಂಡ ಆರ್‌ಸಿಬಿ ವಿರುದ್ಧ 1 ರನ್‌ಗಳ ಭರ್ಜರಿ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಕೆಕೆಆರ್ 6 ವಿಕೆಟ್ ನಷ್ಟಕ್ಕೆ 222 ರನ್ ಗಳಿಸಿದ್ದು, ಕೊನೆಯ ಎಸೆತದಲ್ಲಿ ಆರ್‌ಸಿಬಿ 221 ರನ್ ಗಳಿಗೆ ಆಲೌಟ್ ಆಯಿತು.

### ಮೊಹಮ್ಮದ್ ಕೈಫ್ ಪೋಸ್ಟ್ ಲೈಕ್ ಮಾಡಿದ ವಿರಾಟ್ ಕೊಹ್ಲಿ

**ಭಾರತದ ಮಾಜಿ ಬ್ಯಾಟರ್ ಮೊಹಮ್ಮದ್ ಕೈಫ್ ಈ ಬಗ್ಗೆ ವಿಡಿಯೊ ಮಾಡಿದ್ದರು. ಜತೆಗೆ ಇನ್‌ಸ್ಟಾದಲ್ಲಿ ಪೋಸ್ಟ್ ಒಂದನ್ನು ಮಾಡಿದ್ದರು. ವಿರಾಟ್ ಕೊಹ್ಲಿ ಈ ನಿರ್ಧಾರದಿಂದ ಇನ್ನೂ ನಿರಾಶೆಗೊಂಡಿದ್ದಾರೆ ಎಂದು ಹೇಳಿದ್ದರು. ಸೋಮವಾರ (ಏಪ್ರಿಲ್ 22) ಕೈಫ್ ಇನ್‌ಸ್ಟಾಗ್ರಾಮ್‌ನಲ್ಲಿ ಔಟ್ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ವಿರಾಟ್ ಕೊಹ್ಲಿಯ ಬ್ಯಾಟ್‌ಗೆ ಚೆಂಡು ತಗುಲಿದ ಕ್ಷಣದ ಫೋಟೋವನ್ನು ಪೋಸ್ಟ್ ಮಾಡಿದ ಕೈಫ್, ಹೀಗೆ ಬರೆದಿದ್ದಾರೆ**




# ರಾಜಸ್ಥಾನ್ ರಾಯಲ್ಸ್ ಎದ್ದರು ಮತ್ತೆ ಮುಗ್ಗರಿಸಿದ ಮುಂಬೈ

## ಜೈಸ್ವಾಲ್ ಶತಕಕ್ಕೆ ತತ್ತರಿಸಿದ ಪಾಂಡ್ಯ ಪಡೆ, ಮುಂಬೈಗೆ ಮತ್ತೊಂದು ಸೋಲು

ಐಪಿಎಲ್ 2024ರ 38ನೇ ಪಂದ್ಯ ಮುಂಬೈ ಇಂಡಿಯನ್ಸ್ ಮತ್ತು ರಾಜಸ್ಥಾನ ರಾಯಲ್ಸ್ ಸೋಮವಾರ ನಡುವೆ ನಡೆಯಿತು. ಈ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ನಾಯಕ ಹಾರ್ದಿಕ್ ಪಾಂಡ್ಯ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡರು. ಈ ಮೂಲಕ ಮೊದಲು ಬ್ಯಾಟಿಂಗ್ ಮಾಡಿ ರಾಜಸ್ಥಾನ್ ರಾಯಲ್ಸ್ ಗೆಲುವಿಗೆ 180 ರನ್‌ಗಳ ಸವಾಲನ್ನು ನೀಡಿತು. ಈ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಬೌಲರ್ ಸಂದೀಪ್ ಶರ್ಮಾ ಮುಂಬೈ ಪರ 5 ವಿಕೆಟ್ ಕಬಳಿಸಿ ಮಿಂಚಿದರು. ಈ ಸ್ಪರ್ಧಾತ್ಮಕ ಟಾರ್ಗೆಟ್ ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ತಂಡವು 18.4 ಓವರ್‌ಗೆ 1 ವಿಕೆಟ್ ನಷ್ಟಕ್ಕೆ 183 ರನ್ ಗಳಿಸುವ ಮೂಲಕ 9 ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿದೆ. ಇತ್ತ ಮುಂಬೈ ಇಂಡಿಯನ್ಸ್ ತಂಡವು 5ನೇ ಸೋಲನ್ನು ಅನುಭವಿಸಿದೆ



### ಚಹಲ್ ದಾಖಲೆಯ ಕಮಾಲ್

**ಐಪಿಎಲ್‌ನ ಪ್ರಭಾವಿ ತಂಡ ರಾಜಸ್ಥಾನ್ ರಾಯಲ್ಸ್‌ನ ಲೆಗ್ ಸ್ಪಿನ್ನರ್ ಚಾಹಲ್ ಜೈಪುರದಲ್ಲಿ ಐಪಿಎಲ್ ಇತಿಹಾಸದಲ್ಲಿ ಹೊಸ ಸಾಧನೆ ಮಾಡಿದರು. ಮುಂಬೈ ಇಂಡಿಯನ್ಸ್ ವಿರುದ್ಧ ವಿಕೆಟ್ ಪಡೆಯುವ ಮೂಲಕ 200ನೇ ಐಪಿಎಲ್ ವಿಕೆಟ್ ಪಡೆಯುವ ವಿಶೇಷ ಮೈಲುಗಲ್ಲು ಸಾಧಿಸಿದರು.ಮೊದಲ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಲೆಗ್ ಸ್ಪಿನ್ನರ್ ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದಲ್ಲಿ ನಿಧಾನಗತಿಯ ಎಸೆತದೊಂದಿಗೆ ತಮ್ಮ ಮೈಲಿಗಲ್ಲನ್ನು ತಲುಪಿದರು. ಮೊಹಮ್ಮದ್ ನಬಿ ವಿಕೆಟ್ ಪಡೆದು ಈ ಸಾಧನೆ ಮಾಡಿದರು. 2013ರಲ್ಲಿ ಮುಂಬೈ ಇಂಡಿಯನ್ಸ್ ಪರ ಪಾದಾರ್ಪಣೆ ಮಾಡಿದ ಚಾಹಲ್ ರಾಜಸ್ಥಾನ್ ವಿರುದ್ಧ ಈ ಸಾಧನೆ ಮಾಡಿದರು. ಕಳೆದ ಋತುವಿನಲ್ಲಿ ಸಿಎಸ್‌ಕೆ ಅನುಭವಿ ಬೌಲರ್ ಡ್ವೇನ್ ಬ್ರಾವೋ ಅವರಿಂದ 183 ವಿಕೆಟ್‌ಗಳ ಸಾಧನೆಯನ್ನು ಹಿಂದಿಕ್ಕಿ ಐಪಿಎಲ್‌ನಲ್ಲಿ ಗರಿಷ್ಠ ವಿಕೆಟ್ ಪಡೆದ ಬೌಲರ್ ಎಂಬ ಸಾಧನೆ ಚಾಹಲ್ ಮಾಡಿದ್ದರು.**




### ಜೈಸ್ವಾಲ್ ಭರ್ಜರಿ ಬ್ಯಾಟಿಂಗ್

**ಇನ್ನು, ಮುಂಬೈ ಇಂಡಿಯನ್ಸ್ ನೀಡಿದ 180 ರನ್ ಗುರಿ ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಆರಂಭಿಕರಾಗಿ ಕಣಕ್ಕಿಳಿದ ಯಶಸ್ವಿ ಜೈಸ್ವಾಲ್, ಜೋಶ್ ಬಟ್ಲರ್ ಭರ್ಜರಿ ಬ್ಯಾಟಿಂಗ್ ಮಾಡುವ ಮೂಲಕ ಆಕರ್ಷಕ ಅರ್ಧಶತಕದ ಜೊತೆಯಾಟವಾಡಿದರು. ಈ ವೇಳೆ ಜೋಶ್ ಬಟ್ಲರ್ 25 ಎಸೆತದಲ್ಲಿ 6 ಫೋರ್ ಮೂಲಕ 35 ರನ್ ಗಳಿಸಿದರು. ಸತತ ವೈಫಲ್ಯದಿಂದ ಕಂಗೆಟ್ಟಿದ್ದ ಯಶಸ್ವಿ ಜೈಸ್ವಾಲ್ ಭರ್ಜರಿ ಬ್ಯಾಟಿಂಗ್ ಮಾಡುವ ಮೂಲಕ ಮಿಂಚಿದರು. ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದಲ್ಲಿ ಶತಕ ಸಿಡಿಸಿ ಅಬ್ಬರಿಸಿದರು.**

**ತಿಲಕ್ ವರ್ಮಾ ಏಕಾಂಗಿ ಹೋರಾಟ:** ಜೈಪುರದ ಸವಾಯಿ ಮಾನ್ಸಿಂಗ್ ಸ್ಟೇಡಿಯಂನಲ್ಲಿ ಮುಂಬೈ ಇಂಡಿಯನ್ಸ್ ರಾಜಸ್ಥಾನ ರಾಯಲ್ಸ್ ಪಂದ್ಯದಲ್ಲಿ ಟಾಸ್ ಗೆದ್ದ ಮುಂಬೈ ಮೊದಲು ಬ್ಯಾಟಿಂಗ್ ಆಯ್ದುಕೊಂಡಿತು. ಮುಂಬೈ ಇಂಡಿಯನ್ಸ್ ಬ್ಯಾಟಿಂಗ್ ಮಾಡಿದಾಗ ಹಾರ್ದಿಕ್ ಪಾಂಡ್ಯ 10 ರನ್, ತಿಲಕ್ ವರ್ಮಾ 65 ರನ್, ಮೊಹಮ್ಮದ್ ನಬಿ 23 ರನ್, ನೇಹಾಲಾ ಅಧೇರಾ 49 ರನ್ ಗಳಿಸಿದರು. ಇತರ ಬ್ಯಾಟ್ಸ್‌ಮನ್‌ಗಳು ಎರಡಂಕಿ ಗಳಿಸಲು ಸಾಧ್ಯವಾಗಲಿಲ್ಲ. ಉಳಿದಂತೆ ಮುಂಬೈ ಇಂಡಿಯನ್ಸ್ ಪರ ರೋಹಿತ್ ಶರ್ಮಾ 6 ರನ್, ಇಶಾನ್ ಕಿಶನ್ ಶೂನ್ಯ, ಸೂರ್ಯಕುಮಾರ್ ಯಾದವ್ 10 ರನ್, ಟೀಮ್ ಡೇವಿಡ್ 3 ರನ್, ಗ್ರೇಲಾಡ್ ಕೋಟ್ಜೇ ಶೂನ್ಯ, ಪಿಯೂಶ್ ಚಾವ್ಲಾ 1 ರನ್ ಮತ್ತು ಜಸ್ಪ್ರೀತ್ ಬುಮ್ರಾ 2 ರನ್ ಸಿಡಿಸಿದರು. ರಾಜಸ್ಥಾನದ ಬೌಲರ್ ಗಳಲ್ಲಿ ಸಂದೀಪ್ ಶರ್ಮಾ 5 ವಿಕೆಟ್, ಟ್ರೆಂಟ್ ಬೌಲ್ಟ್ 2 ವಿಕೆಟ್ ಮತ್ತು ಅವೇಶ್ ಖಾನ್ 1 ವಿಕೆಟ್, ಅಶ್ವಿನ್ 1 ವಿಕೆಟ್ ಮತ್ತು ಯುಜ್ವೇಂದ್ರ ಚಹಾಲ್ ತಲಾ 1 ವಿಕೆಟ್ ಪಡೆದರು. ರಾಜಸ್ಥಾನದ ಬೌಲರ್ ಸಂದೀಪ್ ಶರ್ಮಾ ಕಳೆದ ಕೆಲ ಪಂದ್ಯದಿಂದ ಪ್ಲೇಯಿಂಗ್ ನಿಂದ ಹೊರಗುಳಿದಿದ್ದರು. ಆದರೆ ಮುಂಬೈ ಇಂಡಿಯನ್ಸ್ ವಿರುದ್ಧದ ಪಂದ್ಯದಲ್ಲಿ ಅವರು ಆಡುವ 11 ರಲ್ಲಿ ಅವಕಾಶ ಪಡೆದರು ಮತ್ತು ಅವರು ಅವಕಾಶವನ್ನು ಉತ್ತಮವಾಗಿ ಬಳಸಿಕೊಂಡರು. ಸಂದೀಪ್ ಶರ್ಮಾ 4 ಓವರ್‌ಗಳಲ್ಲಿ 5 ವಿಕೆಟ್‌ಗಳೊಂದಿಗೆ 18 ರನ್ ಗಳನ್ನು ಮಾತ್ರ ಬಿಟ್ಟುಕೊಟ್ಟರು.

# ಇಶಾನ್ ಕಿಶನ್ ಜತೆ ಮಗುವಿನಂತೆ ಕ್ರಿಕೆಟ್ ಆಡಿದ ರೋಹಿತ್ ಶರ್ಮಾ; ಇಲ್ಲಿದೆ ವಿಡಿಯೊ

ಐಪಿಎಲ್ 2024ರಲ್ಲಿ ರಾಜಸ್ಥಾನ್ ರಾಯಲ್ಸ್ ಮುಂಬೈ ಇಂಡಿಯನ್ಸ್ ನಡುವಿನ ಬಹು ನಿರೀಕ್ಷಿತ ಐಪಿಎಲ್ 2024ರ ಮುಖಾಮುಖಿಗೆ ಸಿದ್ಧತೆ ನಡೆಸುವ ವೇಳೆ ರೋಹಿತ್ ಶರ್ಮಾ ಅವರ ಬ್ಯಾಟಿಂಗ್ ನೆಟ್ಟಿಗರ ಗಮನ ಸೆಳೆದಿದೆ. ಅವರ ಇಶಾನ್ ಕಿಶನ್‌ಗೆ ವಿಕೆಟ್‌ಕೀಪಿಂಗ್ ಅಭ್ಯಾಸ ಮಾಡಲು ಮಕ್ಕಳಂತೆ ಬ್ಯಾಟ್ ಹಿಡಿದು ಬೀಸಿದ ಪ್ರಸಂಗ ನಡೆಯಿತು. ಏಪ್ರಿಲ್ 22 ರ ಸೋಮವಾರ ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಮುಖಾಮುಖಿಗೆ ಮುಂಚಿತವಾಗಿ ಇವರಿಬ್ಬರು ಕ್ಯಾಚಿಂಗ್ ಅಭ್ಯಾಸದಲ್ಲಿ ತೊಡಗಿದ್ದರು. ಅದು ಸಣ್ಣ ಮಕ್ಕಳು ಆಡುವಂತೆ ಕಂಡು ಬಂತು.

ಮುಂಬೈ ಇಂಡಿಯನ್ಸ್ ಟ್ವಿಟರ್ ಹ್ಯಾಂಡಲ್ನಲ್ಲಿ ಹಂಚಿಕೊಂಡಿರುವ ವೀಡಿಯೊದಲ್ಲಿ, ರೋಹಿತ್ ಶರ್ಮಾ ಇಶಾನ್ ಕಿಶನ್ ಅವರ ವಿಕೆಟ್ ಕೀಪಿಂಗ್ ಕೌಶಲವನ್ನು ಹೆಚ್ಚಿಸಲು ಬ್ಯಾಟ್‌ನಿಂದ ಸಣ್ಣ ಸಣ್ಣ ಹೊಡೆತಗಳನ್ನು ಹೊಡೆಯುತ್ತಿದ್ದರು. ಅದನ್ನು ಇಶಾನ್ ಹಿಡಿಯುತ್ತಿದ್ದರು. ಈ ಅಭ್ಯಾಸದಿಂದ ಇಬ್ಬರಿಗೂ ಸಾಕಷ್ಟು ಲಾಭವಾಗುತ್ತದೆ.

ಇಶಾನ್ ರೋಹಿತ್ ಕಡೆಗೆ ಚೆಂಡುಗಳನ್ನು ಎಸೆದಾಗ ಇಬ್ಬರು ಆಟಗಾರರ ನಡುವಿನ ಸ್ನೇಹವು ಸ್ಪಷ್ಟವಾಯಿತು.

ರೋಹಿತ್ ಶರ್ಮಾ ಕಿಶನ್‌ಗೆ ಕಡಿಮೆ ಅಂತರ ಕ್ಯಾಚ್‌ಗಳನ್ನು ನೀಡುವಲ್ಲಿ ಅತಿ ಹೆಚ್ಚು ಉತ್ಸಾಹ ತೋರಿದ್ದರು. ಹಿರಿಯ ಆಟಗಾರರು ಯುವ ಪ್ರತಿಭೆಗಳಿಗೆ ಮಾರ್ಗದರ್ಶನ ನೀಡುವ ಇಂತಹ ನಿದರ್ಶನಗಳು ಮುಂಬೈ ಇಂಡಿಯನ್ಸ್ ನಂಥ ತಂಡಗಳಲ್ಲಿ ಮಾತ್ರ ಕಾಣಿಸುತ್ತದೆ.



ಉಳಿದಂತೆ ತರಬೇತುದಾರರು ಹಾಗೂ ಸಹಾಯಕ ಸಿಬ್ಬಂದಿ ಇಂಥದ್ದಕ್ಕೆಲ್ಲ ನೆರವಾಗುತ್ತಾರೆ.

ರೋಹಿತ್ ಶರ್ಮಾ ಅವರ ಮಾರ್ಗದರ್ಶನವು ಇಶಾನ್ ಕಿಶನ್ ಅವರ ಸಾಮರ್ಥ್ಯವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಅದೇ ರೀತಿ ಕ್ರಿಕೆಟ್ ಮೈದಾನದಲ್ಲಿ ಯಶಸ್ಸನ್ನು ಸಾಧಿಸುವಲ್ಲಿ ಟೀಮ್ ವರ್ಕ್ ಹೆಚ್ಚು ಅವಶ್ಯಕ ಎಂಬುದನ್ನು ಸಾಬೀತುಪಡಿಸಿದೆ.

# ಫಹಾದ್ ಫಾಸಿಲ್ ಸಿನಿಮಾ ನೋಡಿ ಹೊಗಳಿದ ಸಮಂತಾ

ಟಾಲಿವುಡ್ ನಟಿ ಸಮಂತಾ ಸದ್ಯ ಬಾಲಿವುಡ್‌ನಲ್ಲಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗೆ ಫಹಾದ್ ಫಾಸಿಲ್ ನಟನೆಯ ‘ಆವೇಶಂ’ ಸಿನಿಮಾವನ್ನು ಸಮಂತಾ ವೀಕ್ಷಿಸಿದ್ದಾರೆ. ಫಹಾದ್ ಸಿನಿಮಾ ಮೆಚ್ಚಿ ಕೊಂಡಾಡಿದ್ದಾರೆ.

ಏ.11ರಂದು ರಿಲೀಸ್ ಆದ ಆವೇಶಂ ಚಿತ್ರದಲ್ಲಿ ಫಹಾದ್ ಲೀಡ್ ರೋಲ್‌ನಲ್ಲಿ ನಟಿಸಿದ್ದಾರೆ. ಬ್ಯುಸಿ ಶೆಡ್ಯೂಲ್ ನಡುವೆ ನಟಿ ‘ಆವೇಶಂ’ ಸಿನಿಮಾ ನೋಡಿ ಜೀನಿಯಸ್ ಎಂದು ಹೊಗಳಿದ್ದಾರೆ. ಸಿನಿಮಾದ ಹ್ಯಾಗ್ ಓವರ್‌ನಲ್ಲಿರುವುದಾಗಿ ಸ್ಯಾಮ್ ಪೋಸ್ಟ್ ಮಾಡಿದ್ದಾರೆ. ಇದೊಂದು ಗ್ಯಾಂಗ್‌ಸ್ಟರ್ ಕಾಮಿಡಿ ಚಿತ್ರವಾಗಿದ್ದು, ರಂಗ ಎಂಬ ಪಾತ್ರಕ್ಕೆ ಫಹಾದ್ ಜೀವ ತುಂಬಿದ್ದಾರೆ. ಪತಿಯ ಸಿನಿಮಾಗೆ ನಟಿ ನಜ್ರಿಯಾ ನಿರ್ಮಾಣ ಮಾಡಿದ್ದಾರೆ.

### ಸಮಂತಾ ಸಾಕಷ್ಟು ಟೀಕೆಗಳಿಗೆ ಗುರಿ

ಈ ಸಿನಿಮಾ ಕಥೆಗೆ ಸ್ಯಾಮ್ ಮಾತ್ರವಲ್ಲ, ಅನೇಕ ನಟ, ನಟಿಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅಂದಹಾಗೆ, ವಿವಾದ, ಅನಾರೋಗ್ಯ, ಯಶಸ್ಸು ಎಲ್ಲವೂ ಅನುಭವಿಸಿರುವ ಜೀವ ಸಮಂತಾ. ನಾಗಚೈತನ್ಯ ಜೊತೆಗಿನ ದಾಂಪತ್ಯಕ್ಕೆ ಅಂತ್ಯ ಹಾಡಿದ ಮೇಲೆ ಸಮಂತಾ ಸಾಕಷ್ಟು ಟೀಕೆಗಳಿಗೆ ಗುರಿಯಾಗಿದ್ದರು. ಎಲ್ಲಾ ವಿಚಾರಕ್ಕೂ ಸಮಂತಾ ಕಡೆಯೇ ಬೆಟ್ಟು ಮಾಡಿ ತೋರಿಸುತ್ತಿದ್ದರು. ಸಹವಾಸವೇ ಬೇಡ ಅಂತ ವೃತ್ತಿರಂಗದಲ್ಲಿ ಬ್ಯುಸಿಯಾದರು. ‘ಪುಷ್ಪ’ ಚಿತ್ರದಲ್ಲಿ ಸೊಂಟ ಬಳುಕಿಸಿದ ಮೇಲೆ ಸಮಂತಾ ಲಕ್ ಬದಲಾಯ್ತು.

ಆದರೆ ‘ಯಶೋದ’ ಮತ್ತು ‘ಖುಷಿ’ ಸಿನಿಮಾ ಆದ್ಮೇಲೆ ಬಿಗ್ ಸ್ಕ್ರೀನ್ ಮೇಲೆ ಕಾಣಿಸಿಕೊಂಡಿರಲಿಲ್ಲ. ಎರಡೂ ಹೀನಾಯವಾಗಿ ಸೋತ ಚಿತ್ರಗಳು. ಸೋಲಿನ ಹೊಡೆತಕ್ಕೆ ಅನಾರೋಗ್ಯದ ಆಘಾತ ಎರಡನ್ನೂ ಸಹಿಕೊಳ್ಳೋಕೆ ಸ್ಯಾಮ್‌ಗೆ 8 ತಿಂಗಳು ಹಿಡಿಯಿತು. ಇದೀಗ ಮತ್ತೆ ಕೆಲಸಕ್ಕೆ ಮರಳಿದ್ದಾರೆ. ವರುಣ್ ಧವನ್‌ಗೆ ನಾಯಕಿಯಾಗಿ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದ್ದಾರೆ. ಹನಿ ಬನಿ ಮೂಲಕ ನಟಿ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ.





# ಮಾನ್ವಿತಾ ಬ್ಯುಸಿ ಆಮಂತ್ರಣ ಪತ್ರಿಕೆ ರಿವೀಲ್ ಮಾಡಿದ ನಟಿ

ಸ್ಯಾಂಡಲ್‌ವುಡ್ ನಟಿ ಮಾನ್ವಿತಾ ಕಾಮತ್ ಇದೇ ಮೇ 1ರಂದು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಮೈಸೂರು ಮೂಲದ ಸಂಗೀತ ನಿರ್ದೇಶಕ ಅರುಣ್ ಕುಮಾರ್ ಜೊತೆ ಹಸೆಮಣೆ ಏರಲು ರೆಡಿಯಾಗಿದ್ದಾರೆ. ಇದೀಗ ಮದುವೆ ತಯಾರಿ ಬಗ್ಗೆ ಮತ್ತು ಆಮಂತ್ರಣ ಪತ್ರಿಕೆಯನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ರಿವೀಲ್ ಮಾಡಿದ್ದಾರೆ.

ಮದುವೆಗೆ ಕೆಲವೇ ಕೆಲವು ದಿನಗಳು ಬಾಕಿಯಿದೆ. ಚಿಕ್ಕಮಗಳೂರಿನ ಕಳಸ ಮನೆಯಲ್ಲಿ ಇಂದು (ಏ.22) ನಾಂದಿ ಪೂಜೆ ಮಾಡುವ ಮೂಲಕ ಮದುವೆಯ ತಯಾರಿ ಶುರುವಾಗಿದೆ. ತಯಾರಿ ವೇಳೆ, ನಟಿಯ ಲುಕ್ ಮತ್ತು ಮದುವೆ ಆಮಂತ್ರಣ ಪತ್ರಿಕೆ ಹೇಗಿದೆ ಎಂಬುದನ್ನು ಇನ್ಸ್ಟಾಗ್ರಾಂನಲ್ಲಿ ನಟಿ ರಿವೀಲ್ ಮಾಡಿದ್ದಾರೆ. ಮದುವೆಯ ದಿನ ಮುಹೂರ್ತದ ವೇಳೆ ಕೆಂಪು ಸೀರೆಯನ್ನು ಉಡಲಿದ್ದಾರೆ. ಅದನ್ನು ನಟಿ ತಿಳಿಸಿದ್ದಾರೆ. ಸದ್ಯ ಪತ್ರಿಕೆಯ ಲುಕ್ ಇದೀಗ ಅಭಿಮಾನಿಗಳ ಗಮನ ಸೆಳೆಯುತ್ತಿದೆ. ಆಪ್ತರಿಗೆ ಮದುವೆ ಆಹ್ವಾನ ನೀಡುವುದರಲ್ಲಿ ನಟಿ ಬ್ಯುಸಿಯಾಗಿದ್ದಾರೆ.

ಮಾನ್ವಿತಾ ಮತ್ತು ಅರುಣ್ ಅವರದ್ದು ಅರೇಂಜ್ ಮ್ಯಾರೇಜ್ ಆಗಿದ್ದು, ಅಮ್ಮ ನೋಡಿದ ವರನನ್ನೇ ಮಾನ್ವಿತಾ ಮದುವೆಯಾಗುತ್ತಿದ್ದಾರೆ. ನನ್ನ ಮದುವೆ ನೋಡೋದು ಅಮ್ಮನ ಕನಸಾಗಿತ್ತು. ಅದರಂತೆಯೇ ಮದುವೆ ನೆರವೇರುತ್ತಿದೆ ಎನ್ನುತ್ತಾರೆ ಮಾನ್ವಿತಾ. ನನ್ನ ಅಮ್ಮ ನನ್ನ ಮದುವೆ ಪ್ರೊಫೈಲ್ ಅನ್ನು ನಮ್ಮ ಸಮುದಾಯದ ಸ್ನೇಹಿತರು ಮತ್ತು ಕುಟುಂಬದೊಂದಿಗೆ ಹಂಚಿಕೊಳ್ಳುತ್ತಿದ್ದರು. ಆಗ ಅರುಣ್ ತಾಯಿಗೆ ನಮ್ಮ ತಾಯಿ ನಿಧನದ ಬಗ್ಗೆ ತಿಳಿದಿರಲಿಲ್ಲ. ಅವರು ನಮ್ಮನ್ನು ತಲುಪಲು ತುಂಬ ಪ್ರಯತ್ನಿಸಿದ್ದರು. ಆದರೆ ಅದು ಸಾಧ್ಯವಾಗಿರಲಿಲ್ಲ. ಕೊನೆಗೆ ಅವರು ನನ್ನ ನಂಬರ್ ಪಡೆದುಕೊಂಡು ಕಾಂಟಾಕ್ಟ್ ಮಾಡಿದ್ದಾರೆ. ಈಗ ಇದೆಲ್ಲವೂ ಸಾಧ್ಯವಾಗಿದೆ ಎಂದು ಖುಷಿಯಿಂದ ಹೇಳಿದ್ದಾರೆ ಮಾನ್ವಿತಾ. ಮದುವೆ ಸುದ್ದಿ ಸಂಭ್ರಮದ ನಡುವೆ ಮತ್ತೊಂದು ವಿಶೇಷ ಅಂದರೆ, ಮಾನ್ವಿತಾ ತಾಯಿ ಸುಜಾತಾ ಅವರ ಹುಟ್ಟುಹಬ್ಬ ಅಕ್ಟೋಬರ್ 14 ಅದೇ ದಿನ ಅರುಣ್ ಹುಟ್ಟುಹಬ್ಬವಂತೆ.

ಇಲ್ಲಿಂದ ಪಾಸಿಟಿವ್ ಸೂಚನೆ ಸಿಕ್ಕಿದೆ. ಅಂದಹಾಗೆ, ನಿಧನಕ್ಕೂ ಮುನ್ನವೇ ಮಾನ್ವಿತಾ ಅವರ ತಾಯಿ ಸುಜಾತಾ ಅವರು ಅರುಣ್ ತಾಯಿಯೊಂದಿಗೆ ಮಾತ ನಾಡಿದ್ದರು. ಮಾನ್ವಿತಾ ಮತ್ತು ಅವರ ಚಿಕ್ಕಮ್ಮ ಮೈಸೂರಿನಲ್ಲಿರುವ ಅರುಣ್ ಮನೆಗೆ ಭೇಟಿ ನೀಡಿದ್ದಾರೆ.

# ಮಾಸ್ ಆದ ತಲೈವಾ - ಟೀಸರ್ ನೋಡಿ

### ಹೊಸ ಚಿತ್ರಕ್ಕೆ ‘ಕೂಲಿ’ ಟೈಟಲ್

ಕಾಲಿವುಡ್ ಸೂಪರ್ ಸ್ಟಾರ್ ರಜನಿಕಾಂತ್ ನಟನೆಯ 171 ಸಿನಿಮಾದ ಬಿಗ್ ಅಪ್‌ಡೇಟ್‌ವೊಂದು ಹೊರಬಿದ್ದಿದೆ. ಮಾಸ್ ಆಗಿ ತಲೈವಾ ಎಂಟ್ರಿ ಕೊಟ್ಟಿದ್ದಾರೆ.

ಟೀಸರ್ ಅಂತೂ ಮಸ್ತ್ ಆಗಿದೆ ಎಂದು ಅಭಿಮಾನಿಗಳು ಹಾಡಿ ಹೊಗಳುತ್ತಿದ್ದಾರೆ. ರಜನಿಕಾಂತ್ ಹೊಸ ಚಿತ್ರಕ್ಕೆ ‘ಕೂಲಿ’ ಎಂದು ಟೈಟಲ್ ಇಡಲಾಗಿದೆ. ಕೂಲಿಂಗ್ ಗ್ಲ್ಯಾಸ್ ಧರಿಸಿ ತಲೈವಾ ರಗಡ್ ಆಗಿ ಎಂಟ್ರಿ ಕೊಟ್ಟಿದ್ದಾರೆ. ಈ ಚಿತ್ರಕ್ಕೆ ಲೋಕೇಶ್ ಕನಗರಾಜ್ ನಿರ್ದೇಶನ ಮಾಡಿದ್ದಾರೆ.

ಟೀಸರ್ ಬ್ಲ್ಯಾಕ್ ವೈಟ್ ಥೀಮ್‌ನಲ್ಲಿ ಮೂಡಿ ಬಂದಿದೆ. ಆದರೆ ಇದರಲ್ಲಿ ಇರುವ ಬಂಗಾರದ ವಸ್ತುಗಳನ್ನು ಮಾತ್ರ ಹೈಲೆಟ್ ಮಾಡಿ ತೋರಿಸಲಾಗಿದೆ. ಗೋಲ್ಡ್ ಸ್ಮಗ್ಲಿಂಗ್ ಕುರಿತ ಸಿನಿಮಾ ಎಂಬುದರ ಸುಳಿವನ್ನು ಚಿತ್ರತಂಡ ನೀಡಿದೆ. ಗೋಲ್ಡ್ ಬಿಸ್ಕೆಟ್, ಗೋಲ್ಡ್ ವಾಚ್ ಜೊತೆಗೆ ಚಿನ್ನದ ರಾಶಿಯೇ ಇರುವ ಜಾಗಕ್ಕೆ ರಜನಿಕಾಂತ್ ಎಂಟ್ರಿ ನೀಡುತ್ತಾರೆ. ಅಲ್ಲಿರುವ ಖದೀಮರಿಗೆ ಗೋಲ್ಡ್ ವಾಚ್‌ಗಳಿಂದ ಮಾಡಿದ ಚೈನ್‌ನಿಂದಲೇ ಬೆಂಡೆತ್ತಿದ್ದಾರೆ. ಈ ರೀತಿಯ ಆಯಕ್ಷನ್ ದೃಶ್ಯದ ಮೂಲಕ ಅವರ ಪಾತ್ರದ ಪರಿಚಯ ಮಾಡಿಕೊಡಲಾಗಿದೆ. ಟೀಸರ್ ಮೂಲಕ ನಿರ್ದೇಶಕ ಲೋಕೇಶ್ ಕನಗರಾಜ್ ಅವರು ಅಭಿಮಾನಿಗಳ ಕೌತುಕ ಕೆರಳಿಸುವಲ್ಲಿ ಗೆದ್ದಿದ್ದಾರೆ. ‘ಜೈಲರ್’ ಸಿನಿಮಾದ ಸಕ್ಸಸ್‌ನಿಂದ ರಜನಿಕಾಂತ್ ಗೆದ್ದು ಬೀಗಿದ್ದರು. ಆದರೆ ಲಾಲ್ ಸಲಾಮ್‌ನಿಂದ ತಲೈವಾಗೆ ಸೋಲಿನ ಕಹಿ ಸಿಕ್ಕಿತ್ತು. ಈಗ ‘ಕೂಲಿ’ ಸಿನಿಮಾದ ಟೀಸರ್‌ನಿಂದ ಫ್ಯಾನ್ಸ್‌ಗೆ ಭರವಸೆ ಮೂಡಿದೆ.



# ಖಳನಾಯಕ ಆಗುತ್ತಿಲ್ಲ ರಾಕಿಂಗ್ ಸ್ಟಾರ್ ಯಶ್

ರಾಮಾಯಣ ಸಿನಿಮಾದ ನಂತರ ಮತ್ತೊಂದು ಬಾಲಿವುಡ್ ಸಿನಿಮಾವನ್ನು ರಾಕಿಂಗ್ ಸ್ಟಾರ್ ಯಶ್ ಒಪ್ಪಿಕೊಂಡಿದ್ದಾರೆ ಎಂದು ಹಲವು ದಿನಗಳಿಂದ ಸುದ್ದಿ ಹರಿದಾಡುತ್ತಿತ್ತು. ಸುಭಾಷ್ ಘಾಯ್ ನಿರ್ಮಾಣದಲ್ಲಿ ಮೂಡಿಬರಲಿರುವ ಖಳನಾಯಕ್ 2 ಚಿತ್ರದಲ್ಲಿ ಯಶ್ ಪಾತ್ರ ಮಾಡಲಿದ್ದಾರೆ ಎಂದು ಹೇಳಲಾಗಿತ್ತು. ಸಹಜವಾಗಿಯೇ ಅಭಿಮಾನಿಗಳಿಗೆ ಖುಷಿ ಆಗಿತ್ತು.



ಈ ಕುರಿತಂತೆ ಸುಭಾಷ್ ಘಾಯ್ ಪ್ರತಿಕ್ರಿಯೆ ನೀಡಿದ್ದಾರೆ.

ಇಪತ್ತು ವರ್ಷಗಳ ಹಿಂದೆ ಖಳನಾಯಕ ಸಿನಿಮಾ ಬಂದಿತ್ತು. ಸಂಜಯ್ ದತ್ ಅವರು ಈ ಸಿನಿಮಾದಲ್ಲಿ ಹೀರೋ ಆಗಿ ನಟಿಸಿದ್ದರು. ಈಗ ಬರ್ತಿರೋದು ಖಳನಾಯಕ್ 2 ಚಿತ್ರ. ಸಂಜಯ್ ದತ್ ಬದಲು ಯಶ್ ಅವರಿಗೆ ಈ ಪಾತ್ರ ಒಲಿದೆ ಎಂದು ಹೇಳಲಾಗಿತ್ತು.

ಆದರೆ, ಅದು ಸುಳ್ಳು ಎಂದು ಸುಭಾಷ್ ಘಾಯ್ ಹೇಳಿದ್ದಾರೆ. ಖಳನಾಯಕ್ 2 ಸಿನಿಮಾದ ಪಾತ್ರವನ್ನು ಮತ್ತೆ ಸಂಜಯ್ ದತ್ ಅವರೇ ನಿರ್ವಹಿಸಲಿದ್ದಾರೆ. ಹೊಸ ಕಲಾವಿದರನ್ನು ನಾವು ಹುಡುಕುತ್ತಿಲ್ಲ. ಸಂಜಯ್ ದತ್ ಅವರೇ ತಮ್ಮ ಪಾತ್ರವನ್ನು ಮುಂದುವರೆಸಿಕೊಂಡು ಹೋಗುತ್ತಿರುವುದರಿಂದ ಯಶ್, ಮತ್ತೊಂದು ಹಿಂದಿ ಸಿನಿಮಾ ಒಪ್ಪಿಕೊಂಡಿಲ್ಲ ಎನ್ನುವುದು ಪಕ್ಕಾ ಆಗಿದೆ.

# ಹಾರರ್ ಕಥೆ ಹೇಳಲು ಸಜ್ಜಾದ ಸನ್ನಿ ಲಿಯೋನ್

ಬಾಲಿವುಡ್ ಬೆಡಗಿ ಸನ್ನಿ ಲಿಯೋನ್ ಸದ್ಯ ಬಾಲಿವುಡ್ ಸಿನಿಮಾಗಳ ಜೊತೆ ಬಹು ಭಾಷೆಗಳಲ್ಲಿ ನಟಿಸುತ್ತಾ ಬ್ಯುಸಿಯಾಗಿದ್ದಾರೆ. ಸದ್ಯ ಸನ್ನಿ ಬೆಚ್ಚಿ ಬೀಳಿಸಲು ಬರುತ್ತಿದ್ದಾರೆ. ‘ಮಂದಿರ’ ಚಿತ್ರದ ಮೂಲಕ ಹಾರರ್ ಕಥೆ ಹೇಳೋಕೆ ರೆಡಿಯಾಗಿದ್ದಾರೆ. ‘ಮಂದಿರ’ ಚಿತ್ರದಲ್ಲಿನ ಸನ್ನಿ ಪೋಸ್ಟರ್ ರಿವೀಲ್ ಆಗಿದೆ. ರಾಣಿಯ ಲುಕ್‌ನಲ್ಲಿ ನಟಿ ಕಂಗೊಳಿಸಿದ್ದಾರೆ. ತಲೆಯ ಮೇಲೆ ಕಿರೀಟ ಧರಿಸಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಸನ್ನಿ ಲಿಯೋನ್ ಇದೀಗ ಸೌತ್ ಸಿನಿಮಾಗಳಿಗೆ ಹೆಚ್ಚಿನ ಪ್ರಾಮುಖ್ಯತೆ ಕೊಡುತ್ತಿದ್ದಾರೆ. ಸದ್ಯ ‘ಮಂದಿರ’ ಎಂಬ ಸಿನಿಮಾವನ್ನು ನಟಿ ಒಪ್ಪಿಕೊಂಡಿದ್ದಾರೆ. ಹಾರರ್ ಕಮ್ ಕಾಮಿಡಿ ರೂಪದಲ್ಲಿ ಸಿನಿಮಾ ಮೂಡಿ ಬರಲಿದೆ. ಚಿತ್ರದಲ್ಲಿ ವಿಭಿನ್ನ ಗೆಟಪ್‌ನಲ್ಲಿ ನಟಿ ಕಾಣಿಸಿಕೊಳ್ತಿದ್ದಾರೆ. ಸನ್ನಿ ನಟನೆಯ ‘ಮಂದಿರ’ ಚಿತ್ರಕ್ಕೆ ಆರ್. ಯುವನ್ ಎಂಬುವವರು ನಿರ್ದೇಶನ ಮಾಡುತ್ತಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966